ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ Postal Reg. No. BDR/054/2026-2027 Email: mallmmanudi@gmail.com E-paper: www.mallmmanudi.in

# ಮಲ್ಲಮ್ಮ ನುಡಿ

ಸತ್ಯಮೇವ ಜಯತೆ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy

VOLUME - 13 ಸಂಪುಟ–13 | ISSUE - 31 ಸಂಚಿಕೆ– 31 | PAGE- 8 ಪುಟ–8 | ಶುಕ್ರವಾರ 07.03.2025 | RS.2/- ಬೆಲೆ 2/–

# ಇಂದು ಸಿದ್ದು 17ನೇ ಬಜೇಟ್

ಮಲ್ಲಮ ನುಡಿ ವಾರ್ತೆ
ಬೆಂಗಳೂರು,ಮಾ.6:ಮುಖ್ಯಮಂತ್ರಿ ಸಿದ್ದರಾಮಯ್ಯಅವರು ಮಾ.7 ರಂದು 2025–26ನೇ ಸಾಲಿನ ಬಜೆಟ್‌ನ್ನುವಿಧಾನಸಭೆಯಲ್ಲಿ ಮಂಡಿಸುವರು.ಈ ಸಾಲಿನ ಬಜೆಟ್ ಗಾತ್ರ 3 ಲಕ್ಷ ಕೋಟಿಗೂ ಮೀರಲಿದೆ ಎಂದು ಹೇಳಲಾಗಿದೆ.ಮುಖ್ಯಮಂತ್ರಿ ಸಿದ್ದರಾಮಯ್ಯಅವರು ಮಾ.7 ರಂದು ಬೆಳಿಗ್ಗೆ 10.15ಕ್ಕೆ ವಿಧಾನಸಭೆಯಲ್ಲಿ 2025–26ನೇ ಸಾಲಿನ ಬಜೆಟ್ ಮಂಡಿಸಲಿದ್ದು, ರಾಜ್ಯದ ಹಣಕಾಸು ಸಚಿವರಾಗಿ ಅತಿ ಹೆಚ್ಚುಬಜೆಟ್‌ಮಂಡಿಸಿದಕೀರ್ತಿ ಮುಖ್ಯಮಂತ್ರಿಸಿದ್ದರಾಮಯ್ಯ ರವರಿಗೆ ಸಲ್ಲುತ್ತದೆ.

ಮುಖ್ಯಮಂತ್ರಿಸಿದ್ದರಾಮಯ್ಯ ಅವರು ನಾಳೆ ತಮ್ಮ 17ನೇ ಬಜೆಟ್ ಮಂಡಿಸಲಿದ್ದಾರೆ.

ಈಹಿಂದೆಮುಖ್ಯಮಂತ್ರಿಯಾಗಿದ್ದ ರಾಮಕೃಷ್ಣಹೆಗಡೆ ಅವರು ಹಣಕಾಸು ಸಚಿವರಾಗಿ 13 ಬಜೆಟ್ ಮಂಡಿಸಿದ್ದರು. ಅವರ ಬಳಿಕ ಅತಿ ಹೆಚ್ಚು ಬಜೆಟ್ ಮಂಡಿಸಿದ ಹೆಗ್ಗಳಿಕೆ ಮುಖ್ಯಮಂತ್ರಿಸಿದ್ದರಾಮಯ್ಯ ಅವರದ್ದಾಗಿದೆ.ಮೂಲಸೌಕರ್ಯಗಳ ಅಭಿವೃದ್ಧಿ ಹಾಗೂ ಕಲ್ಯಾಣ ಕಾರ್ಯಕ್ರಮಗಳಿಗೆ ಆದ್ಯತೆ ನೀಡುತ್ತಿದ್ದಾರೆ. ಕಾಂಗ್ರೆಸ್ ಪ್ರಣಾಳಿಕೆಯ ಭರವಸೆಯಂತೆ ಐದುಗ್ಯಾರಂಟಿಯೋಜನೆಗಳನ್ನು ಮುಂದುವರೆಸುವುದು ಸೇರಿದಂತೆ ಮತ್ತಷ್ಟು ಜನಪರ ಯೋಜನೆಗಳನ್ನು ಸೇರ್ಪಡೆ ಮಾಡುವ ಸಾಧ್ಯತೆಯಿದೆ.

ಅಭಿವೃದ್ಧಿ ಯೋಜನೆಗಳಿಗೆ ಹಣಕಾಸಿನ ಕೊರತೆ ಇದೆ ಎಂಬ ಕಾರಣಕ್ಕೆ ಹಲವಾರು ಶಾಸಕರು ಸರ್ಕಾರವನ್ನು ಟೀಕಿಸುತ್ತಿದ್ದಾರೆ. ಆಡಳಿತ ಪಕ್ಷದ ಶಾಸಕರೇ ಈ ನಿಟ್ಟಿನಲ್ಲಿ ಬಹಳಷ್ಟು ಅಸಮಾಧಾನ ವ್ಯಕ್ತ ಪಡಿಸುತ್ತಿದ್ದಾರೆ. ಅದಕ್ಕೆ ತೆರೆ ಎಳೆಯಲು ಸಿದ್ದರಾಮಯ್ಯ ಮೂಲಸೌಕರ್ಯಗಳ ಅಭಿವೃದ್ಧಿಗೆ ಒತ್ತು ನೀಡಲು ಮುಂದಾಗಿದ್ದಾರೆ .

ಗ್ರಾಮೀಣರಸ್ತೆಗಳಅಭಿವೃದ್ಧಿಗೆ ಹೆಚ್ಚಿನ ಒತ್ತು ನೀಡುತ್ತಿದ್ದು, ಶಿಕ್ಷಣ ಇಲಾಖೆಯಲ್ಲಿ ಕಟ್ಟಡಗಳ ನಿರ್ಮಾಣ, ತರಗತಿ ಕೊಠಡಿಗಳ ಸಂಖ್ಯೆ ಹೆಚ್ಚಳ, ಶಿಕ್ಷಕರ ನೇಮಕಾತಿ, ಆರೋಗ್ಯ ವಲಯದಲ್ಲಿ ಪ್ರಾಥಮಿಕ ಸೇವೆಯ ಬಲವರ್ಧನೆ, ಜಿಲ್ಲಾ ಕೇಂದ್ರಗಳಲ್ಲಿ ಸೂಪರ್ ಸ್ಪೆಷಾಲಿಟಿ ಸೌಲಭ್ಯ ಹೆಚ್ಚಳ, ಕೈಗಾರಿಕೆಗಳಿಗೆ ಹಲವಾರು ವಿಶೇಷ ವಲಯಗಳ ನಿರ್ಮಾಣ ಸೇರಿದಂತೆ ಹೊಸ ಯೋಜನೆಗಳನ್ನು ಘೋಷಣೆ ಮಾಡಲು ಮುಂದಾಗಿದ್ದಾರೆ.



ಬಜೆಟ್‌ನಲ್ಲಿ ಕೇಂದ್ರಸರ್ಕಾರದ ಅನ್ಯಾಯದ ಬಗ್ಗೆಯೂ ಪ್ರಸ್ತಾಪಿಸಲಿರುವ ಸಿದ್ದರಾಮಯ್ಯ, ನ್ಯಾಯಯುತ ತೆರಿಗೆ ಪಾಲಿಗಾಗಿ ಮತ್ತಷ್ಟು ಒತ್ತಡ ಹೇರುವ ಪ್ರಯತ್ನ ಮಾಡಲಿದ್ದಾರೆ.

ಬಾಕಿ ನೀರಾವರಿ ಯೋಜನೆಗಳನ್ನೂ ಪೂರ್ಣಗೊಳಿಸುವ ಕುರಿತು ಹಾಗೂ ಹೊಸದಾಗಿ ಹಲವಾರು ಏತನೀರಾವರಿ ಯೋಜನೆಗಳನ್ನು ಆರಂಭಿಸುವ ಪ್ರಕಟಣೆಗಳನ್ನು ಬಜೆಟ್ ಒಳಗೊಳ್ಳಲಿದೆ.

ಹೈನುಗಾರಿಕೆ, ಕೃಷಿ, ಪಶುಸಂಗೋಪನೆಯಲ್ಲಿ ಬೇಸಾಯಕ್ಕೆ ಪೂರಕವಾದ ಕೆಲವು ಯೋಜನೆಗಳ ಪ್ರಸ್ತಾವನೆ ಇದೆ. ಪಂಚಖಾತ್ರಿಗಳ ಪೈಕಿ ಶಕ್ತಿ ಮತ್ತು ಗೃಹಲಕ್ಷ್ಮಿ ಯೋಜನೆಗಳು ಮಹಿಳಾ ಸಬಲೀಕರಣಕ್ಕೆ ಒತ್ತು ನೀಡುತ್ತಿವೆ. ಹೆಚ್ಚುವರಿಯಾಗಿ ಮಹಿಳಾ ಸ್ವಸಹಾಯ ಮತ್ತು ಸ್ತ್ರೀಶಕ್ತಿ ಸಂಘಗಳನ್ನು ಆರ್ಥಿಕ ಚಟುವಟಿಕೆಗಳಲ್ಲಿ ಮತ್ತಷ್ಟು ಪರಿಣಾಮಕಾರಿಯಾಗಿ ತೊಡಗಿಸಿಕೊಳ್ಳಲು ಸಿದ್ದರಾಮಯ್ಯ ನಿರ್ಧರಿಸಿದ್ದಾರೆ.ಯುವನಿಧಿಗೆ ಮತ್ತಷ್ಟು ಪದವೀಧರರ ಸೇರ್ಪಡೆ, ಗೃಹಜ್ಯೋತಿ ಯೋಜನೆಗೆ ಪೂರ್ಣ ಪ್ರಮಾಣದ ಹಣ ಒದಗಿಸುವುದು ಸೇರಿದಂತೆ ಅನೇಕ ನಿರ್ಧಾರಗಳನ್ನು ಸಿದ್ದರಾಮಯ್ಯ ಪ್ರಕಟಿಸಲಿದ್ದಾರೆ. ಇಂಧನ ಇಲಾಖೆಯಲ್ಲಿ ಕೃಷಿ ಪಂಪ್ ಸೆಟ್‌ಗಳನ್ನು ಸೌರಶಕ್ತಿಗೆ ಜೋಡಣೆ ಮಾಡುವುದು, ಮಾಹಿತಿ ತಂತ್ರಜ್ಞಾನ ಇಲಾಖೆಯಲ್ಲಿ ಮತ್ತಷ್ಟು ನವೋದ್ಯಮಗಳಿಗೆ ಹೆಚ್ಚಿನ ಪ್ರೋತ್ಸಾಹ ನೀಡುವುದು, ಕಂದಾಯ ಇಲಾಖೆಯಲ್ಲಿ ಡಿಜಿಟಲೀಕರಣಕ್ಕೆ ಒತ್ತು ನೀಡುವುದು ಸರ್ಕಾರದ ಆದ್ಯತೆಯಾಗಿದೆ ಎನ್ನಲಾಗುತ್ತಿದೆ.

ಗ್ರಾಮೀಣ ಭಾಗದಲ್ಲಿ ತಾಲ್ಲೂಕು ಮತ್ತು ಜಿಲ್ಲಾ ಪಂಚಾಯತ್ ಚುನಾವಣೆಗಳು ಹಾಗೂ ಬೆಂಗಳೂರಿನಲ್ಲಿ ಮಹಾನಗರ ಪಾಲಿಕೆಗೆ ಚುನಾವಣೆ ನಡೆಯುವ ನಿರೀಕ್ಷೆ ಇರುವುದರಿಂದ ಸಿದ್ದರಾಮಯ್ಯ ಜನಪ್ರಿಯ ಬಜೆಟ್ ಮಂಡನೆ ಮಾಡಲು ಮುಂದಾಗಿದ್ದಾರೆ ಎನ್ನಲಾಗುತ್ತಿದೆ.

## ಪಾಶ್ಚ ಸಮಿತಿ ಕುರಿತು ಜಾಗೃತಿ ಮೂಡಿಸಿ:ಡಾ.ನಾಗಲಕ್ಷ್ಮೀ ಚೌಧರಿ

ಮಲ್ಲಮ್ಮ ನುಡಿ ವಾರ್ತೆ
ಬೀದರ: ಮಾ.06: ಕೆಲಸದ ಸ್ಥಳದಲ್ಲಿ ಮಹಿಳೆಯರ ಮೇಲಿನ ಲೈಂಗಿಕ ದೌರ್ಜನ್ಯ ತಡೆ ಸಮಿತಿ (ಪಾಶ್ಚ) ಕಠಿಭಿ ಗಳನ್ನು ಜಿಲ್ಲೆಯ ಎಲ್ಲ ಸರಕಾರಿ ಅರೆ ಸರಕಾರಿ ಹಾಗೂ ಖಾಸಗಿ ಕಚೇರಿಗಳಲ್ಲಿ ಸ್ಥಾಪಿಸಿ ಈ ಕುರಿತು ಜನಜಾಗೃತಿ ಮೂಡಿಸುವಂತೆ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷೆ ಡಾ.ನಾಗಲಕ್ಷ್ಮೀ ಚೌಧರಿ ತಿಳಿಸಿದರು.ಜಿಲ್ಲಾಧಿಕಾರಿಗಳ



ಸಭಾಂಗಣದಲ್ಲಿಂದು ಜರುಗಿದ ಮಹಿಳೆಯರ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡುತ್ತಾ, 10 ಜನಕ್ಕಿಂತ ಹೆಚ್ಚು ಸಿಬ್ಬಂದಿಗಳು ಕಾರ್ಯನಿರ್ವಹಿಸುವ ಸ್ಥಳದಲ್ಲಿ ಮಹಿಳೆಯರ ಮೇಲಿನ ದೌರ್ಜನ್ಯವನ್ನು ತಡೆಯಲು ಪಾಶ್ಚ ಸಮಿತಿಗಳನ್ನು ಕಡ್ಡಾಯವಾಗಿ ರಚಿಸಬೇಕೆಂದು ಅವರು ತಿಳಿಸಿದರು.ಈ ಕುರಿತಂತೆ ಈಗಾಗಲೇ ಸುಪ್ರಿಂ ಕೋರ್ಟ ಹಾಗೂ ಹೈಕೋರ್ಟ ಆದೇಶವಿದೆ. ಎಲ್ಲ ಸ್ಥಳಗಳಲ್ಲಿ ಮಹಿಳಾ ದೌರ್ಜನ್ಯ ತಡೆ ಸಮಿತಿಗಳನ್ನು ಸ್ಥಾಪಿಸುವುದರಿಂದ ಮಹಿಳೆಯರ ಮೇಲಿನ ದೌರ್ಜನ್ಯಗಳನ್ನು ತಡೆ ಹಿಡಿಯಬಹುದಾಗಿದೆ. ಈ ಕುರಿತು ಹೆಚ್ಚು ಪ್ರಚಾರ ಆಂದೋಲಗಳನ್ನು ಕೈಗೊಳ್ಳುವಂತೆ ಮಹಿಳಾ ಮತ್ತು ಮಕ್ಕಳ ಅಧಿಕಾರಿಗಳಿಗೆ ಸೂಚಿಸಿದರು.

ತಾವು ಔರಾದನಲ್ಲಿ ಭೇಟಿ ನೀಡಿದ ಸಂದರ್ಭದಲ್ಲಿ ಗೈರುಹಾಜರಾದ ಸಮಾಜ

(2ನೇ ಪುಟ ನೋಡಿ)

## ಜನೌಷಧಿ ಮಾದರಿಯಲ್ಲೇ ಜಾನುವಾರುಗಳಿಗೆ 'ಪಶು ಔಷಧಿ' ಯೋಜನೆ

ಮಲ್ಲಮ್ಮ ನುಡಿ ವಾರ್ತೆ
ನವದೆಹಲಿ:ಮಾ.6:ಜನಸಾಮಾನ್ಯರಿಗೆ ಕೈಗೆಟುಕುವ ದರದಲ್ಲಿ ಸಿಗುವ 'ಜನೌಷಧಿ' ಮಾದರಿಯಲ್ಲೇ ಜಾನುವಾರುಗಳಿಗೆ 'ಪಶು ಔಷಧಿ' ಹೆಸರಿನಲ್ಲಿ ಜೆನೆರಿಕ್ ಔಷಧಿ ಬಿಡುಗಡೆ ಮಾಡಲು ಕೇಂದ್ರ ಸರ್ಕಾರ ನಿರ್ಧರಿಸಿದೆ.

ಈ ಯೋಜನೆಗಾಗಿ 2026ರ ಮಾರ್ಚ್ 31ರ ಹೊತ್ತಿಗೆ 75 ಕೋಟಿ ರೂ. ವೆಚ್ಚ ಮಾಡಲು ನಿರ್ಧರಿಸಲಾಗಿದೆ. ಪಶು ಆರೋಗ್ಯ ಮತ್ತು ರೋಗ ನಿಯಂತ್ರಣದ ಕಾರ್ಯಕ್ರಮ ಪರಿಷ್ಕರಣೆಗೆ ಸಚಿವ ಸಂಪುಟ ಅನುಮೋದನೆ ನೀಡಿದೆ.ಕಳೆದ ಜನಗಣತಿಯ ಪ್ರಕಾರ 19.25 ಕೋಟಿ ಜಾನುವಾರುಗಳ ಸಂ–ಖ್ಯೆ ಇದೆ. ಪಶುವೈದ್ಯಕೀಯ ಔಷಧಿಗಳು ಮತ್ತು ಮೇವು ಪೂರಕಕ್ಕೆ ಸುಮಾರು 6,000 ಕೋಟಿಗಳಷ್ಟು ಬಳಕೆ ಮಾಡಲಾಗುತ್ತಿದೆ. ಆದರೆ, ಪ್ರಸ್ತಾಪಿತ ನಿಧಿಯ ಹಂಚಿಕೆಯು ಪರಿಣಾಮ ಬೀರುವುದಿಲ್ಲ ಎಂದು ತಜ್ಞರು ಅಭಿಪ್ರಾಯಪಟ್ಟಿದ್ದಾರೆ.

2019ರ 20ನೇ ಜಾನುವಾರು ಜನಗಣತಿಯ ಪ್ರಕಾರ, ಭಾರತವು ದನ, ಎಮ್ಮೆ, ಮಿಥುನ್ ಮತ್ತು ಯಾಕ್ ಸೇರಿದಂತೆ ಸುಮಾರು 30.38 ಕೋಟಿ ಗೋವುಗಳಿಗೆ ನೆಲೆಯಾಗಿದೆ. ನಂತರ ಜಾನುವಾರು ಜನಗಣತಿಯನ್ನು 2024ರ ಅಕ್ಟೋಬರ್ ಮತ್ತು 2025 ರ ಫೆಬ್ರವರಿ ನಡುವೆ ನಡೆಸಲಾಯಿತು. ಅದರ ಡೇಟಾವನ್ನು ಈ ವರ್ಷದ ಕೊನೆಯಲ್ಲಿ ಬಿಡುಗಡೆ ಮಾಡುವ ಸಾಧ್ಯತೆ ಇದೆ.ಸಂಪುಟ ಸಭೆಯ ನಂತರ ಸುದ್ದಿಗಾರರನ್ನುದ್ದೇಶಿಸಿ ಮಾತನಾಡಿದ ಮಾಹಿತಿ ಮತ್ತು ಪ್ರಸಾರ ಸಚಿವ ಅಶ್ವಿನಿ ವೈಷ್ಣವ್, ಜಾನುವಾರುಗಳ ಆರೋಗ್ಯಕ್ಕೆ ಸಂಬಂಧಿಸಿದ ನಿರ್ಧಾರವನ್ನು ಸಂಪುಟದಲ್ಲಿ ತೆಗೆದುಕೊಳ್ಳಲಾಗಿದೆ. (LHDCP)ಯೋಜನೆಯ 'ಪಶು ಔಷಧಿ'

(2ನೇ ಪುಟ ನೋಡಿ)

## ನಡುರಸ್ತೆಯಲ್ಲೇ ಹೊತ್ತಿ ಉರಿದ ಮಿನಿ ಟಿಪ್ಪರ್!



ಮಲ್ಲಮ್ಮ ನುಡಿ ವಾರ್ತೆ
ಬೀದರ. ಮಾ. 06 : ನಡುರಸ್ತೆಯಲ್ಲೇ ಮಿನಿ ಟಿಪ್ಪರ್ ಹೊತ್ತಿ ಉರಿದ ಘಟನೆ ಬೀದರ್ ಜಿಲ್ಲೆಯ ಭಾಲ್ಕಿ ಪಟ್ಟಣದ ಚೆನ್ನಬಸವ ಆಶ್ರಮದ ಬಳಿ ಜರುಗಿದೆ. ರಾಜಕೀಯ ನಾಯಕರು ಹಿಟ್ಲರ್ ನೀತಿ ಅನುಸರಿಸಬೇಡಿ: ಸುದೀಪ್ ಮ್ಯಾನೇಜರ್ ಕೆಂಡಾಮಂಡಲ! ಕಿರಾಣಿ ಅಂಗಡಿಗಳಿಗೆ ಸಕ್ಕರೆ ಡೆಲಿವರಿ ಮಾಡುತ್ತಿದ್ದ ಚಂದು ಎಂಬುವವರಿಗೆ ಸೇರಿದ ಮಿನಿ ಟಿಪ್ಪರ್ ಇದ್ದಾಗಿದ್ದು, ಇಂದು ರೇಡಿಯಂ ಅಂಗಡಿ ಬಳಿ ನಿಲ್ಲಿಸಿದ್ದಾಗ ಮಿನಿ ಟಿಪ್ಪರ್‌ನಲ್ಲಿ ಏಕಾಏಕಿ ಬೆಂಕಿ ಕಾಣಿಸಿಕೊಂಡಿದೆ.

ಬಳಿಕ ಧಗಧಗನೆ ಹೊತ್ತಿ ಉರಿದಿದೆ. ಚಾಲಕ ಅಗ್ನಿ ಅವಘಡದಿಂದ ಪಾರಾಗಿದ್ದು, ಮಿನಿ ಟಿಪ್ಪರ್ ಬಹುತೇಕ ಸುಟ್ಟು ಭಸ್ಮವಾಗಿದೆ.

## ವಯೋ ವೃದ್ಧರಿಗಾಗಿ "ವಯೋ ವಂದನಾ ಯೋಜನೆ" ಜಾರಿ: ಸಚಿವ ದಿನೇಶ್ ಗುಂಡೂರಾವ್



ಮಲ್ಲಮ್ಮ ನುಡಿ ವಾರ್ತೆ
ಬೆಂಗಳೂರು, ಮಾ.06 :ಆಯುಷ್ಮಾನ್ ಭಾರತ್ ಆರೋಗ್ಯ ಕರ್ನಾಟಕ ಯೋಜನೆಯಲ್ಲಿ ವಯೋ ವಂದನಾ ಯೋಜನೆಯು ಒಂದಾಗಿದ್ದು 70 ವರ್ಷಕ್ಕಿಂತ ಹೆಚ್ಚಿನ ವಯೋಮಾನದವರಿಗೆ ರೂ.5.00ಲಕ್ಷಗಳ ಮೊತ್ತದ ಚಿಕಿತ್ಸಾ ವೆಚ್ಚ ಭರಿಸುವ ಯೋಜನೆಯಾಗಿದೆ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ದಿನೇಶ್ ಗುಂಡೂರಾವ್ ಅವರು ತಿಳಿಸಿದರು.

ವಿಧಾನಸಭೆಯಲ್ಲಿ ಮಂಗಳೂರು ನಗರ ದಕ್ಷಿಣ ವಿಧಾನಸಭಾ ಸದಸ್ಯರಾದ ವೇದವ್ಯಾಸ ಕಾಮತ್ ಡಿ ಅವರ ಚುಕ್ಕೆಗುರುತಿನ ಪ್ರಶ್ನೆಗೆ ಉತ್ತರಿಸಿದ ಅವರು ಆಯುಷ್ಮಾನ್ ಆರೋಗ್ಯ ಕರ್ನಾಟಕ ಯೋಜನೆಯಡಿ 1650 ಚಿಕಿತ್ಸಾ ವೆಚ್ಚಗಳಲ್ಲಿ 294 ಸಾಮಾನ್ಯ/ಸರಳ ಚಿಕಿತ್ಸಾ ವಿಧಾನಗಳು ಸಾರ್ವಜನಿಕ ಆರೋಗ್ಯ ಸಂಸ್ಥೆಗಳಿಗೆ ಮಾತ್ರ ಸೀಮಿತವಾಗಿದ್ದು 251 ಕ್ಲಿಷ್ಟಕರ

(2ನೇ ಪುಟ ನೋಡಿ)

## ರಾಜ್ಯದ ರೈತರ ಪಂಪ್ ಸೆಟ್ ಗಳಿಗೆ ದಿನವಹಿ 7 ಗಂಟೆ 3 ಫೇಸ್ ವಿದ್ಯುತ್

ಮಲ್ಲಮ್ಮ ನುಡಿ ವಾರ್ತೆ
ಬೆಂಗಳೂರು,ಮಾ.06:ರಾಜ್ಯದ ರೈತರ ಕೃಷಿ ಪಂಪ್ ಸೆಟ್ ಗಳಿಗೆ ತಾಂತ್ರಿಕ ಸಾಧ್ಯತೆ ಇರುವ ವಿದ್ಯುತ್ ಉಪ ಕೇಂದ್ರಗಳಿಂದ ಹಗಲಿನ ವೇಳೆಯಲ್ಲಿಯೇ ನಿರಂತರ



(2ನೇ ಪುಟ ನೋಡಿ)

## ಗ್ರಾಮೀಣ ಪ್ರದೇಶದಲ್ಲಿ ಕಣ್ಣಿನ ಆರೈಕೆ ಸೇವೆ ಹೆಚ್ಚಳಕ್ಕೆ ಕರ್ನಾಟಕ ಸರ್ಕಾರ ಜೇಸಿಸ್ ಇಂಡಿಯಾದೊಂದಿಗೆ ಒಡಂಬಡಿಕೆ: ಪ್ರಿಯಾಂಕ್ ಖರ್ಗೆ

ಮಲ್ಲಮ್ಮ ನುಡಿ ವಾರ್ತೆ
ಕಲಬುರಗಿ:ಮಾ.6:ರಾಜ್ಯದ ಗ್ರಾಮೀಣ ಪ್ರದೇಶಗಳಲ್ಲಿ ಕಣ್ಣಿನ ಆರೈಕೆ ಸೇವೆಯನ್ನು ಹೆಚ್ಚಿಸಲು ರಾಜ್ಯ ಸರ್ಕಾರ ಜೇಸಿಸ್ (ಚಇಖಖಖ) ಇಂಡಿಯಾ ಸಂಸ್ಥೆಯೊಂದಿಗೆ ಒಡಂಬಡಿಕೆಗೆ ಸಹಿ ಹಾಕಿದ್ದು, ಕಲಬುರಗಿ ಜಿಲ್ಲೆಯ 11 ಲಕ್ಷ ಮಂದಿಗೆ ನೇತ್ರ ಪರೀಕ್ಷೆ ನಡೆಸಲಾಗುವುದಲ್ಲದೆ ಅಗತ್ಯವಿದ್ದವರಿಗೆ ಉಚಿತ ಕನ್ನಡಕ ವಿತರಿಸುವ ವಿದ್ಯಾದೃಷ್ಟಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ



ಸಚಿವ ಪ್ರಿಯಾಂಕ್ ಖರ್ಗೆ ಅವರು ತಿಳಿಸಿದ್ದಾರೆ.

ಈ ಒಡಂಬಡಿಕೆಯ ಅನುಸಾರ ಕಲಬುರಗಿ ಜಿಲ್ಲೆಯಲ್ಲಿ 5,32,000 ಶಾಲಾ ಮಕ್ಕಳಿಗೆ ಕಣ್ಣಿನ ಪರೀಕ್ಷೆ ಅಭಿಯಾನವನ್ನು ನಡೆಸಲಾಗುವುದು. ಕಲಬುರಗಿ ಜಿಲ್ಲೆಯಾದ್ಯಂತ ಮಕ್ಕಳ ದೃಷ್ಟಿ–ಸಂಬಂಧಿತ ಸಮಸ್ಯೆಗಳನ್ನು ಪತ್ತೆಹಚ್ಚಿ ಅಗತ್ಯವಿರುವವರಿಗೆ ಕನ್ನಡಕಗಳನ್ನು ವಿತರಿಸಲಾಗುವುದು. ಈ ಯೋಜನೆಯು ಮಕ್ಕಳ ಕಣ್ಣಿನ ಆರೋಗ್ಯ ಸುಧಾರಿಸುವ ಗುರಿಯನ್ನು ಹೊಂದಿದ್ದು, ಜೇಸಿಸ್ (ಚಇಖಖಖ) ಇಂಡಿಯಾ ಸಂಸ್ಥೆಯು ವಿದ್ಯಾದೃಷ್ಟಿ ಕಾರ್ಯಕ್ರಮದಡಿ ಈ ಯೋಜನೆಯನ್ನು ಕಾರ್ಯಗತಗೊಳಿಸಲಿದೆ. ಅಲೋಕ ಸಂಚಾರಿ ವಾಹನದ ಮೂಲಕ ನೇತ್ರ ಪರೀಕ್ಷೆಯನ್ನು ಕೈಗೊಳ್ಳಲಾಗುವುದು. ಇದಲ್ಲದೆ, ನೇತ್ರತಜ್ಞರು (ಆಪ್ಟೋಮೆಟ್ರಿಸ್ಟ್‌ಗಳು) ಹಾಗೂ ಆರೋಗ್ಯ ಕಾರ್ಯಕರ್ತರಿಗೆ ಕೌಶಲ್ಯ ತರಬೇತಿ ಕಾರ್ಯಕ್ರಮವನ್ನು ನಡೆಸುವ ಮೂಲಕ ಅವರ ವೃತ್ತಿಪರತೆಯನ್ನು ಹೆಚ್ಚಿಸಲಾಗುತ್ತದೆ.

ಕಾರ್ಯಕ್ರಮದಲ್ಲಿ ಮಾತನಾಡಿದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಸಚಿವ ಪ್ರಿಯಾಂಕ್ ಖರ್ಗೆ, ಗ್ರಾಮೀಣ ಪ್ರದೇಶದ ಮಕ್ಕಳಲ್ಲಿ ಕಣ್ಣಿನ ಆರೋಗ್ಯವನ್ನು ಸುಧಾರಿಸುವ ತುರ್ತು ಅವಶ್ಯಕತೆಯಿದೆ. ಈ ನಿಟ್ಟಿನಲ್ಲಿ ರಾಜ್ಯ ಸರ್ಕಾರ ಜೇಸಿಸ್ (ZEISS) ಇಂಡಿಯಾದೊಂದಿಗೆ ಒಡಂಬಡಿಕೆ ಮಾಡಿಕೊಂಡಿದ್ದು, ಇದರಿಂದ ಮಕ್ಕಳ ಕಣ್ಣಿನ ಆರೋಗ್ಯ ಸುಧಾರಿಸಿ ಕಲಿಕೆಯನ್ನು ಸುಗಮಗೊಳಿಸುವ ಗುರಿ ಹೊಂದಿದ್ದೇವೆ. ಇದರಡಿ ಕಲಬುರಗಿಯಲ್ಲಿ 5.32 ಲಕ್ಷ ಶಾಲಾ ಮಕ್ಕಳಿಗೆ ಕಣ್ಣಿನ ತಪಾಸಣೆ ನಡೆಸಿ ಅಗತ್ಯವಿರುವ

(2ನೇ ಪುಟ ನೋಡಿ)

## ಅಕೌಂಟೆಂಟ್ ಮನೆ ಮೇಲೆ ಲೋಕಾ ದಾಳಿ

ಮಲ್ಲಮ್ಮ ನುಡಿ ವಾರ್ತೆ
ಬಾಗಲಕೋಟೆ,ಮಾ.6– ಬಾಗಲಕೋಟೆಯ ಪಂಚಾಯತ್‌ರಾಜ್ ಇಲಾಖೆಯ ಅಕೌಂಟೆಂಟ್ ಮಲ್ಲೇಶ ದುರ್ಗದ ಅವರ ಮನೆ ಮೇಲೆ ಬುಧವಾರ ಬೆಳಿಗ್ಗೆ ಲೋಕಾಯುಕ್ತ ದಾಳಿ ನಡೆದಿದೆ.

ಆದಾಯಕ್ಕಿಂತಲೂ ಹೆಚ್ಚು ಆಸ್ತಿಗಳಿಕೆಯ ದೂರಿನ ಮೇರೆಗೆ ಲೋಕಾಯುಕ್ತ ಪೋಲಿಸರು ಮಲ್ಲೇಶ ಮನೆ, ಕಚೇರಿ ಹಾಗೂ ಸ್ವಗ್ರಾಮ ತಳ್ಳಿಕೇರಿ ಗ್ರಾಮದಲ್ಲಿರುವ ನಿವಾಸದ ಮೇಲೆ ಏಕಕಾಲಕ್ಕೆ ದಾಳಿ ನಡೆಸಿ ಪರಿಶೀಲನೆ ನಡೆಸಿದರು.

ಲೋಕಾಯುಕ್ತ ಡಿವೈಎಸ್‌ಪಿ ಸಿದ್ದೇಶ ನೇತೃತ್ವದಲ್ಲಿ ದಾಳಿ ನಡೆದಿದ್ದು, ದಾಖಲೆಗಳ ಪರಿಶೀಲನೆ ನಡೆಸಲಾಗಿದೆ.

## ಒಂದನೇ ಪುಟದಿಂದ

### ಇಂಡಿಯಾದೊಂದಿಗೆ ಒಡಂಬಡಿಕೆ: ಪ್ರಿಯಾಂಕ್ ಖರ್ಗೆ

ಕನ್ನಡಕ ವಿತರಿಸಲಾಗುತ್ತದೆ. ಹೆಚ್ಚುವರಿಯಾಗಿ 6,00,000 ಬಡ ವಯಸ್ಕರಿಗೂ ಉಚಿತ ಕಣ್ಣಿನ ತಪಾಸಣೆ ನಡೆಸಲಾಗುತ್ತದೆ. ಇಂಥ ವಿಶಿಷ್ಟ ಯೋಜನೆಗೆ ಕೈಜೋಡಿಸಿರುವ ಜೇಸಿಸ್ ಇಂಡಿಯಾ ಸಂಸ್ಥೆಯನ್ನು ಶ್ಲಾಘಿಸುತ್ತೇನೆ ಎಂದು ಹೇಳಿದರು.ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ದಿನೇಶ್ ಗುಂಡೂರಾವ್ ಮಾತನಾಡಿ, ಕಣ್ಣಿನ ಆರೋಗ್ಯಕ್ಕಾಗಿ ಈಗಾಗಲೇ ರಾಜ್ಯಸರ್ಕಾರ ಸಾಕಷ್ಟು ಯೋಜನೆಗಳನ್ನು ಜಾರಿಗೊಳಿಸಿದೆ. ಆಶಾಕಿರಣ ಯೋಜನೆಯಡಿ ಮನೆಬಾಗಿಲಿಗೆ ತೆರಳಿ ಕಣ್ಣಿನ ತಪಾಸಣೆ ಮಾಡಲಾಗುತ್ತದೆ. ಕಣ್ಣಿನ ಆರೈಕೆಯಲ್ಲಿ ಜೇಸಿಸ್ ಇಂಡಿಯಾ ಸಹಭಾಗಿತ್ವ ನಮಗೆ ಇನ್ನಷ್ಟು ನೆರವಾಗಲಿದೆ ಎಂದರು.ವೈದ್ಯಕೀಯ ಶಿಕ್ಷಣ ಸಚಿವ ಡಾ.ಶರಣಪ್ರಕಾಶ್ ಪಾಟೀಲ್ ಮಾತನಾಡಿ, ಗ್ರಾಮೀಣ ಪ್ರದೇಶದಲ್ಲಿ ಇಂತಹ ಆರೋಗ್ಯ ಕಾರ್ಯಕ್ರಮಗಳನ್ನು ಏರ್ಪಡಿಸುವುದರಿಂದ ಅಲ್ಲಿನ ಜನರ ಆರೋಗ್ಯ ಸುಧಾರಣೆ ಮೂಲಕ ಸರ್ವತೋಮುಖ ಅಭಿವೃದ್ಧಿಗೂ ನೆರವಾಗಲಿದೆ ಎಂದರು.ಲೋಕಸಭಾ ಸದಸ್ಯರಾದ ರಾಧಕೃಷ್ಣ ದೊಡ್ಡಮನಿ ಮಾತನಾಡಿ, ರಾಜ್ಯಸರ್ಕಾರ ಮತ್ತು ಜೆಸಿಸ್ ಇಂಡಿಯಾ ನಡುವಿನ ಈ ಸಹಭಾಗಿತ್ವ ಕಲಬುರಗಿ ಜನರಲ್ಲಿ ಹೊಸ ಆಶಾಕಿರಣ ಮೂಡಿಸಿದೆ. ಕಳೆದ ನವೆಂಬರ್ 2024ರಲ್ಲಿ ಜೆಸಿಸ್ ಇಂಡಿಯಾದ ಗ್ಲೋಬಲ್ ಸಾಮರ್ಥ್ಯ ಕೇಂದ್ರದ ಉದ್ಘಾಟನೆಯ ಸಮಯದಲ್ಲಿ ರಾಜ್ಯದ ಗ್ರಾಮೀಣ ಮತ್ತು ಕಡಿಮೆ ಪ್ರದೇಶಗಳಿಗೆ ಕಣ್ಣಿನ ಆರೈಕೆಯಲ್ಲಿ ಸರ್ಕಾರದೊಂದಿಗೆ ಕೈಜೋಡಿಸಲು ಕಂಪೆನಿ ಆಸಕ್ತಿ ತೋರಿತ್ತು. ಈಗ ಒಪ್ಪಂದ ಮಾಡಿಕೊಂಡಿದ್ದೇವೆ ಎಂದರು.

ಜೇಸಿಸ್ ಇಂಡಿಯಾದ ವ್ಯವಸ್ಥಾಪಕ ನಿರ್ದೇಶಕ ಮೈಗಲ್ ಗೊನ್ಸಾಲೆಜ್ ಡಯಾಜ್ ಮಾತನಾಡಿ, ರಾಜ್ಯದ ಪ್ರತಿ ಮಗು ಕಣ್ಣಿನ ಸಮಸ್ಯೆಯಿಂದ ದೂರ ಉಳಿಯಬೇಕು ಎಂಬ ಉದ್ದೇಶ ನಮ್ಮದು. ಈ ನಿಟ್ಟಿನಲ್ಲಿ ಜೇಸಿಸ್ ಇಂಡಿಯಾ ದಿಟ್ಟ ಹೆಜ್ಜೆಯನ್ನಿಟ್ಟಿದೆ. ಇದರಿಂದ ಹೆಚ್ಚು ಮಕ್ಕಳ ಕಣ್ಣಿನ ತಪಾಸಣೆ ಮಾಡಿ ತುರ್ತಾಗಿ ಅವರ ಕಣ್ಣಿನ ಆರೈಕೆ ಮಾಡಿ ಕಲಿಕೆಯು ಸುಗಮಗೊಳ್ಳಲು ನೆರವಾಗುತ್ತದೆ ಎಂದು ತಿಳಿಸಿದರು.ಕಾರ್ಯಕ್ರಮದಲ್ಲಿ ಕಲ್ಯಾಣ ಕರ್ನಾಟಕ ಅಭಿವೃದ್ಧಿ ಮಂಡಳಿ ಅಧ್ಯಕ್ಷ ಅಜಯ್‌ಸಿಂಗ್, ಕಲಬುರಗಿ ಜಿಲ್ಲೆಯ ಶಾಸಕರಾದ ಶ್ರೀಮತಿ ಖನಿಜ್ ಫಾತೀಮಾ, ಎಂ.ವೈ.ಪಾಟೀಲ್, ಅಲ್ಲಮಪ್ರಭು ಪಾಟೀಲ್, ಜಗದೇವ್ ಗುತ್ತೇದಾರ್, ತಿಪ್ಪಣ್ಣಪ್ಪ ಕಮಕನೂರ್ ಉಪಸ್ಥಿತರಿದ್ದರು.

### 'ಪಶು ಔಷಧಿ' ಯೋಜನೆ

ಘಟಕದ ಅಡಿಯಲ್ಲಿ ಉತ್ತಮ ಗುಣಮಟ್ಟದ ಔಷಧಿಗಳನ್ನು ಒದಗಿಸಲಾಗುವುದು ಎಂದು ತಿಳಿಸಿದ್ದಾರೆ.2024–25 ಮತ್ತು 2025–26ನೇ ಸಾಲಿಗೆ ಐಊಆಅಕ ಯೋಜನೆಗೆ ಒಟ್ಟು ಬಜೆಟ್ 3,880 ಕೋಟಿ ರೂ. ಮೀಸಲಿಡಲು ಸಂಪುಟ ನಿರ್ಧರಿಸಿದೆ. ಪಶು ಔಷಧಿಯು ಜನೌಷಧಿ ಯೋಜನೆಯಂತೆಯೇ ಇರುತ್ತದೆ ಎಂದು ಸಚಿವರು ಒತ್ತಿ ಹೇಳಿದ್ದಾರೆ.

### ಯೋಜನೆ" ಜಾರಿ: ಸಚಿವ ದಿನೇಶ್ ಗುಂಡೂರಾವ್

ದ್ವಿತೀಯ ಹಂತದ ಚಿಕಿತ್ಸಾ ವಿಧಾನಗಳು, 934 ತೃತೀಯ ಹಂತದ ಚಿಕಿತ್ಸಾ ವಿಧಾನಗಳು ಮತ್ತು 171 ತುರ್ತು ಚಿಕಿತ್ಸಾ ವಿಧಾನಗಳನ್ನು ಸಾರ್ವಜನಿಕ ಆರೋಗ್ಯ ಸಂಸ್ಥೆಯಲ್ಲಿ ಪಡೆಯಬಹುದಾಗಿದೆ. ಲಭ್ಯವಿಲ್ಲದ ಚಿಕಿತ್ಸಾ ವಿಧಾನಗಳಿಗೆ ನೊಂದಾಯಿತ ಖಾಸಗಿ ಆಸ್ಪತ್ರೆಗಳಲ್ಲಿ ಚಿಕಿತ್ಸೆ ಪಡೆಯಬಹುದಾಗಿದೆ ಎಂದು ಹೇಳಿದರು.ಆಯುಷ್ಮಾನ್ ಭಾರತ್ ಆರೋಗ್ಯ ಕರ್ನಾಟಕ ಯೋಜನೆಯಲ್ಲಿ ಹೆಚ್‌ಬಿಪಿ2022 ಪ್ಯಾಕೇಜನ್ನು ಅನುಷ್ಠಾನಗೊಳಿಸಲು ಸರ್ಕಾರದ ಪರಿಶೀಲನೆಯಲ್ಲಿರುತ್ತದೆ. ಈ ಪ್ಯಾಕೇಜ್ ಅಡಿ ಒಟ್ಟು 1953 ಚಿಕಿತ್ಸಾ ವಿಧಾನಗಳು ಲಭ್ಯವಾಗಲಿವೆ. ಂಃಖಿಎ ಯೋಜನೆಯು 1 ಕೋಟಿ 12 ಲಕ್ಷ ಕುಟುಂಬಗಳಿಗಾಗಿ ಇರುವ ಯೋಜನೆಯಾಗಿದ್ದು 60:40 ರನುಸಾರ ಕೇಂದ್ರ ಸರ್ಕಾರದ ಶೇಕಡಾ 60 ರಷ್ಟು ರಾಜ್ಯ ಸರ್ಕಾರದ 40% ಚಿಕಿತ್ಸಾ ವೆಚ್ಚ ಭರಿಸಬೇಕಾಗಿದೆ. ಕೇಂದ್ರ ಸರ್ಕಾರದಿಂದ ಇದೂವರೆಗೆ ಅನುದಾನ ಬಂದಿರುವುದಿಲ್ಲ. ಸದರಿ ಯೋಜನೆಗೆ ವಾರ್ಷಿಕ 68.98ಕೋಟಿ ಅನುದಾನ ಬೇಕಾಗಬಹುದು ಎಂದು ಅಂದಾಜಿಸಲಾಗಿದೆ.

ಆಯುಷಾ??ನ್ ಭಾರತ್ ಕೇಂದ್ರ ಸರ್ಕಾರದ ಯೋಜನೆಯಾಗಿದ್ದರೂ ಶೇಕಡಾ 70ರಷ್ಟು ಮೊತ್ತವನ್ನು ರಾಜ್ಯ ಸರ್ಕಾರವೇ ಭರಿಸುತ್ತಿದೆ. ಕೇಂದ್ರ ಸರ್ಕಾರಕ್ಕೆ ಈ ಕುರಿತು ಪತ್ರ ಬರೆಯಲಾಗಿದ್ದು ಇದೂವರೆಗೂ ಕೇಂದ್ರ ಸರ್ಕಾರದಿಂದ ಉತ್ತರ ಬಂದಿರುವುದಿಲ್ಲ. ಕೇಂದ್ರದಿಂದ ಉತ್ತರ ಬಂದಮೇಲೆ ಈ ಯೋಜನೆ ಕುರಿತು ವಿಸ್ತಾರವಾಗಿ ತಿಳಿಸಬಹುದಾಗಿದೆ. ಎಬಿಆರ್‌ಕೆ ಯೋಜನೆ ಹಾಲಿ ಸರಾಗವಾಗಿ ನಡೆಯುತ್ತಿದೆ. 582 ಆಸ್ಪತ್ರೆಗಳು ಎಂಪಾನಲ್ ಆಗಿವೆ. ಕೆಲವು ಕಾಯಿಲೆಗಳು ಇದರಡಿ ಸೇರಿರುವುದಿಲ್ಲ. ಎಂಪಾನಲ್ ಆಗಿರುವ ಆಸ್ಪತ್ರೆಗಳ ಚಿಕಿತ್ಸಾ ವೆಚ್ಚದ ಬಿಲ್‌ಗಳ ಮೊತ್ತವನ್ನು 30 ದಿನಗಳೊಳಗಾಗಿ ಪಾವತಿಸುತ್ತಿದ್ದು, ಮುಂದಿನ ದಿನಗಳಲ್ಲಿ ಇನ್ನೂ ಶೀಘ್ರವಾಗಿ ಪಾವತಿಸಲು ಕ್ರಮ ವಹಿಸಲಾಗುವುದು ಎಂದು ತಿಳಿಸಿದರು.

### ದಿನವಹಿ 7 ಗಂಟೆ 3 ಫೇಸ್ ವಿದ್ಯುತ್

7 ಗಂಟೆಗಳ ಕಾಲ 3 ಪೇಸ್ ವಿದ್ಯುತ್ ನ್ನು ಸರಬರಾಜು ಮಾಡಲಾಗುತ್ತಿದೆ. ತಾಂತ್ರಿಕ ಸಾಧ್ಯತೆ ಇಲ್ಲದಿರುವ ವಿದ್ಯುತ್ ಉಪ ಕೇಂದ್ರಗಳಿಂದ ಪಾಳಿಯಲ್ಲಿ ಹಗಲಿನ ವೇಳೆಯಲ್ಲಿ 4 ಗಂಟೆಗಳ ಕಾಲ ಹಾಗೂ ರಾತ್ರಿಯ ವೇಳೆಯಲ್ಲಿ 3 ಗಂಟೆಗಳ ಕಾಲ ಒಟ್ಟು 7 ಗಂಟೆಗಳ ಕಾಲ 3 ಪೇಸ್ ವಿದ್ಯುತ್ತನ್ನು ಸರಬರಾಜು ಮಾಡಲಾಗುತ್ತಿದೆ. ಅರಣ್ಯ ಪ್ರದೇಶದ ಮೂಲಕ ಹಾದುಹೋಗುವ ಕೃಷಿ ಫೀಡರ್ ಗಳಿಗೆ ಹಗಲಿನ ವೇಳೆಯಲ್ಲಿಯೇ 7 ಗಂಟೆಗಳ ಕಾಲ ನಿರಂತರವಾಗಿ 3 ಪೇಸ್ ವಿದ್ಯುತ್ ಸರಬರಾಜು ಮಾಡಲಾಗುತ್ತಿದೆ ಎಂದು ಇಂಧನ ಸಚಿವ ಕೆ.ಜೆ. ಜಾರ್ಜ್ ತಿಳಿಸಿದರು.ವಿಧಾನಸಭೆಯ ಕಲಾಪದ ಪ್ರಶ್ನೋತ್ತರ ವೇಳೆಯಲ್ಲಿ ಚಿಕ್ಕನಾಯಕನಹಳ್ಳಿ ಕ್ಷೇತ್ರದ ಶಾಸಕರಾದ ಸುರೇಶ್ ಕುಮಾರ್ ಇವರ ಚುಕ್ಕೆ ಗುರುತಿನ ಪ್ರಶ್ನೆಗೆ ಉತ್ತರಿಸಿದ ಸಚಿವರು, ಫಾರ್ಮ್ ಹೌಸ್ ಗಳನ್ನು ಹೊಂದಿರುವ ಎಲ್ಲಾ ಕೃಷಿ ಪೀಡರ್ ಗಳಿಗೆ ಒಎಲ್‌ಪಿ–ರಿಲೇಗಳ್ನು ಬಳಸಿಕೊಂಡು ಸಂಜೆ 6 ರಿಂದ ಬೆಳಿಗ್ಗೆ 6 ರವರೆಗೆ ಸಿಂಗಲ್ ಫೇಸ್ ವಿದ್ಯುತ್ ಸರಬರಾಜು ವ್ಯವಸ್ಥೆ ಮಾಡುವಂತೆ ವಿದ್ಯುತ್ ಸರಬರಾಜು ಕಂಪನಿಗಳಿಗೆ ನಿರ್ದೇಶನ ನೀಡಲಾಗಿದೆ. ಫಾರ್ಮ್ ಹೌಸ್ ಗಳ ಅಗತ್ಯಕ್ಕೆ ತಕ್ಕಂತೆ ಮತ್ತು ಸಾಕಷ್ಟು ವಿದ್ಯುತ್ ಅಗತ್ಯವನ್ನು ಪೂರೈಸುವ ದೃಷ್ಟಿಯಿಂದ ಮತ್ತ ಫಾರ್ಮ್ ಹೌಸ್‌ಗಳ ಸಂಖ್ಯೆ ಹಾಗೂ ಮಂಜೂರಾದ ಲೋಡ್‌ಗಳನ್ನುಗಮನದಲ್ಲಿಟ್ಟುಕೊಂಡು ಒಎಲ್‌ಪಿ–ರಿಲೇಗಳಲ್ಲಿ ಗರಿಷ್ಠ ವಿದ್ಯುತ್ 10 ಎಎಂಪಿಎಸ್ ಸೆಟ್ಟಿಂಗ್ ಮಾಡಲಾಗಿದೆ ಹಾಗೂ ಎಲ್ಲೆಲ್ಲಿ ಫಾರ್ಮ್ ಹೌಸ್ ಗಳ ಸಂಖ್ಯೆ ಮತ್ತು ಮಂಜೂರಾದ ಲೋಡ್ ಹೆಚ್ಚಿರುತ್ತದೆಯೋ ಅಂತಹ ಕೃಷಿ ಫೀಡರ್ ಗಳಲ್ಲಿ ವಿದ್ಯುತ್ ಮಿತಿಯನ್ನು 10 ಎಎಂಪಿಎಸ್ ನಿಂದ 20 ಎಎಂಪಿಎಸ್ ಗೆ ಹೆಚ್ಚಿಸಲಾಗಿದೆ ಎಂದರು.

ಪಂಪ್ ಸೆಟ್‌ಗಾಗಿ 4.50 ಲಕ್ಷ ಅರ್ಜಿಗಳು ಸ್ವೀಕಾರವಾಗಿದ್ದು ಅದರಲ್ಲಿ ಈಗಾಗಲೇ 2.50 ಲಕ್ಷ ಅರ್ಜಿಗಳನ್ನು ವಿಲೇವಾರಿ ಮಾಡಲಾಗಿದೆ. ಹಂತ ಹಂತವಾಗಿ ಅರ್ಜಿಗಳನ್ನು ವಿಲೇವಾರಿ ಮಾಡಲು ಕ್ರಮ ವಹಿಸಲಾಗುವುದು. ರೈತರು ವಿದ್ಯುತ್ ಗೆ ಸಂಬಂಧಿಸಿದಂತೆ ಟೋಲ್ ಪ್ರೀ ನಂಬರ್ 1912 ಗೆ ರೈತರ ಕರೆ ಮಾಡಿ ದೂರು ನೀಡಬಹುದಾಗಿದೆ. ಕರೆಯು ರೆಕಾರ್ಡ್ ಆಗುವುದರಿಂದ ಸಮಸ್ಯೆಗೆ ಶೀಘ್ರವಾಗಿ ಪರಿಹಾರ ದೊರಕಲಿದೆ. ದೂರು ನೀಡಿದ್ದಲ್ಲಿ ತಕ್ಷಣವೇ ಕ್ರಮ ವಹಿಸಲಾಗುವುದು ಎಂದು ತಿಳಿಸಿದರು.

### ಜಾಗೃತಿಮೂಡಿಸಿ: ಡಾ.ನಾಗಲಕ್ಷ್ಮೀ ಚೌಧರಿ

ಕಲ್ಯಾಣ ಅಧಿಕಾರಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಅಧಿಕಾರಿಳಿಗೆ ತರಾಟೆಗೆ ತೆಗೆದುಕೆಂಡ ಡಾ.ನಾಗಲಕ್ಷ್ಮೀ ಔರಾದನಲ್ಲಿ ಅಲೆಮಾರಿ ಜನಾಂಗವು ತೀರ ಅಸಾಹನೀಯ ಸ್ಥಿತಿಯಲ್ಲಿ ಜೀವನ ಸಾಗಿಸುತ್ತಿದ್ದಾರೆ.

ಅವರ ಅಭಿವೃದ್ಧಿಗೆ ಅಗತ್ಯ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವಂತೆ ಸೂಚಿಸಿದರು.

ಔರಾದ್‌ನ ಅಲ್ಪಸಂಖ್ಯಾತರ ವಸತಿ ನಿಲಯದಲ್ಲಿ ಉತ್ತಮ ಆಹಾರ ಹಾಗೂ ಮೂಲಭೂತ ಸೌಕರ್ಯ ಒದಗಿಸುವಂತೆ ಸೂಚಿಸಿದರು. ಕಳೆದ 40 ವರ್ಷಗಳಿಂದ ಔರಾದ್ ನಗರದಿಂದ 8 ಕಿ.ಮೀ. ದೂರದಲ್ಲಿರುವ ಅಲೆಮಾರಿ ಸಮುದಾಯದವರಿಗೆ ಶಿಕ್ಷಣ, ಆರೋಗ್ಯ ಹಾಗೂ ಸಂಪರ್ಕಕ್ಕೆ ಅನುಕೂಲವಾಗುವಂತೆ ನಗರದ ಹಜತ್ತಿರದಲ್ಲಿ ಭೂಮಿ ಒದಗಿಸುವಂತೆ ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಅವರೊಂದಿಗೆ ಚರ್ಚಿಸಿದರು. ಔರಾದ್‌ನ ತಾಲ್ಲೂಕ ಆಸ್ಪತ್ರೆಯ ಕುಡಿಯುವ ನೀರಿನ ಟ್ಯಾಂಕ್ ತೆರೆದಿದ್ದು ಹುಳಗಳು ಕಂಡುಬಂದಿದ್ದನ್ನು ಸರಿಪಡಿಸುವಂತೆ ಆರೋಗ್ಯ ಇಲಾಖೆ ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲೆಯ ಎಲ್ಲ ಇಲಾಖೆಗಳ ಬಾಲಕಿಯರ ವಸತಿ ನಿಲಯಗಳ ನಿರ್ವಹಣೆ ಬಗ್ಗೆ ವರದಿ ನೀಡುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ತಿಳಿಸಿದರು. ಆಹಾರ, ಆರೋಗ್ಯ,

ಸ್ವಚ್ಛತೆ, ಭದ್ರತಾ ವ್ಯವಸ್ಥೆ ಕುರಿತು ಒಂದು ವಾರದಲ್ಲಿ ವರದಿ ಸಲ್ಲಿಸಬೇಕೆಂದು ಸೂಚಿಸಿದರು.

ಈ ಸಭೆಯಲ್ಲಿ ಜಿಲ್ಲಾದಿಕಾರಿಗಳಾದ ಶಿಲ್ಪಾ ಶರ್ಮಾ, ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ.ಗಿರೀಶ ಬದೋಲೆ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಪ್ರದೀಪ ಗುಂಟಿ, ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕರಾದ ಸಿಂಧು ಎಸ್., ಮಹಿಳಾ ಮಕ್ಕಳ ಕಲ್ಯಾಣ ಇಲಾಖೆ ಉಪನಿರ್ದೇಶಕರಾದ ಶ್ರೀಧರ, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಗುರುರಾಜ, ಬ್ರಿಮ್ಸ್ ನಿರ್ದೇಶಕರಾದ ಶಿವಕುಮಾರ ಶೆಟಕಾರ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ಜ್ಞಾನೇಶ್ವರ ನಿರುಗಡೆ ಸೇರಿದಂತೆ ಜಿಲ್ಲಾ ಮತ್ತು ತಾಲ್ಲೂಕಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

## ಶ್ರವಣದೋಷ ಜಾಗೃತಿ ಅಭಿಯಾನಕ್ಕೆ ಡಿಸಿ ಜಾನಕಿ ಚಾಲನೆ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮಾ.6–ವಿಶ್ವ ಶ್ರವಣ ದಿನಾಚರಣೆ ಅಂಗವಾಗಿ ಬದಲಾಗುತ್ತಿರುವ ಮನಸ್ಥಿತಿ, ಕಿವಿ ಮತ್ತು ಶ್ರವಣ ಆರೈಕೆಯನ್ನು ಎಲ್ಲರಿಗೂ ವಾಸ್ತವವಾಗಿಸಲು ನಿಮ್ಮನ್ನು ಸಶಕ್ತಗೊಳಿಸಿಕೊಳ್ಳಿ ಎಂಬ ಘೋಷವ್ಯಾಕ್ಯದೊಂದಿಗೆ ಹಮ್ಮಿಕೊಂಡ ಜನಜಾಗೃತಿ ಜಾಥಾಕ್ಕೆ ಜಿಲ್ಲಾಧಿಕಾರಿ ಜಾನಕಿ ಕೆ.ಎಂ ಗುರುವಾರ ಚಾಲನೆ ನೀಡಿದರು.

ರಾಷ್ಟ್ರೀಯ ಶ್ರವಣದೋಷ ನಿಯಂತ್ರಣ ಹಾಗೂ ನಿವಾರಣಾ ಕಾರ್ಯಕ್ರಮ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ಹಾಗೂ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಹಯೋಗದಲ್ಲಿ ಹಮ್ಮಿಕೊಂಡ ಜಾಗೃತಿ ಜಾಥಾಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ನಿರ್ದಿಷ್ಟ ಮಟ್ಟವನ್ನು ಮೀರಿ ಹೆಡ್‌ಪೋನ್‌ಗಳ ಬಳಕೆ ಮಾಡುತ್ತಿರುವದರಿಂದ ಕಿವಿಗಳಿಗೆ ಹಾನಿ ಉಂಟಾಗುತ್ತದೆ. ಅನಿವಾರ್ಯವಿದ್ದಾಗ ಮಾತ್ರ ಬಳಸುವುದು ಸೂಕ್ತ ಎಂದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಮಂಜುನಾಥ ಡಿ ಮಾತನಾಡಿ, ನೂರರಲ್ಲಿ 5ರಷ್ಟು ಜನ ಕಿವುಡತನದಿಂದ ಬಳಲುತ್ತಿದ್ದಾರೆ. ಹಿಂದೆ 70–80 ವಯಸ್ಸಿನಲ್ಲಿಯೂ ಕಿವಿ ಚುರುಕಾಗಿರುತ್ತಿದ್ದವು.ಆದರೆ ಈಗ 40–50 ವರ್ಷಕ್ಕೆ ಕಿವುಡುತನ ಕಾಡುತ್ತಿದೆ. ಎಲ್ಲರೂ ಕಿವಿಯ ಆರೋಗ್ಯದ ಬಗ್ಗೆ ಹೆಚ್ಚಿನ ಜಾಗೃತಿ ವಹಿಸಬೇಕಿದೆ. ಈ ನಿಟ್ಟಿನಲ್ಲಿ ಪ್ರತಿ ವರ್ಷ ವಿಶ್ವ ಶ್ರವಣ ದಿನಾಚರಣೆ ಆಚರಿಸಲಾಗುತ್ತಿದ್ದು, ಈ ದಿನಾಚರಣೆ ಅಂಗವಾಗಿ ಜನರಲ್ಲಿ ಜಾಗೃತಿ ಮೂಡಿಸುವ ಸಲುವಾಗಿ ಜಾಗೃತಿ ಜಾಥಾ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು.

ಜಾಗೃತಿ ಜಾಥಾ ಜಿಲ್ಲಾಡಳಿತ ಭವನದಿಂದ ಪ್ರಾರಂಭವಾಗಿ ನಗರದ ನಾನಾ ಕಡೆಗಳಲ್ಲಿ ಸಂಚರಿಸಿ ಕೊನೆಗೆ ಜಿಲ್ಲಾ ಆಸ್ಪತ್ರೆಗೆ ಮುಕ್ತಾಯಗೊಂಡಿತು. ಜಾಥಾದುದ್ದಕ್ಕೂ ಜಾಗೃತಿಯ ಘೋಷವಾಕ್ಯಗಳನ್ನು ಕೂಗಲಾಯಿತು. ನಗರದ ಸಜ್ಜಲಶ್ರೀ ನರ್ಸಿಂಗ್ ಇನ್‌ಸ್ಟಿಟ್ಯೂಟ್, ಅರುಣೋದಯ ಪ್ಯಾರಾಮೆಡಿಕಲ್ ಕಾಲೇಜಿನ ಪ್ಯಾರಾ ಮೆಡಿಕಲ್ ಕಾಲೇಜಿನ ವಿದ್ಯಾರ್ಥಿ, ವಿದ್ಯಾರ್ಥಿನಿಯರು ಭಾಗವಹಿಸಿದ್ದರು.

ಜಾಥಾದಲ್ಲಿ ಜಿಲ್ಲಾ ಕುಟುಂಬ ಕಲ್ಯಾಣಾಧಿಕಾರಿ ಡಾ.ಅರವಿಂದ ಪಟ್ಟಣಶೆಟ್ಟಿ, ಜಿಲ್ಲಾ ಕ್ಷಯ–ರೋಗ ನಿಯಂತ್ರಣಾಧಿಕಾರಿ ಡಾ.ಸುವರ್ಣ ಕುಲಕರ್ಣಿ, ಜಿಲ್ಲಾ ಕುಷ್ಠರೋಗ ನಿಯಂತ್ರಣಾಧಿಕಾರಿ ಎಸ್.ಸಿ.ಪಾಟೀಲ, ಜಿಲ್ಲಾ ಸಮೀಕ್ಷಣಾಧಿಕಾರಿ ಡಾ.ದಯಾನಂದ ಕರೆನ್ನವರ, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಶಶಿಕಲಾ ಶಿನ್ನೂರ, ತಾಲೂಕಾ ಆರೋಗ್ಯಾಧಿಕಾರಿ ಸರಸ್ವತಿ ಮಾಗಿ, ಕಾರ್ಯಕ್ರಮ ಸಂಯೋಜಕ ಬಾಬುರೆಡ್ಡಿ ಕೆಂಗಲಗುತ್ತಿ ಹಾಗೂ ಇತರರು ಪಾಲ್ಗೊಂಡಿದ್ದರು.

## ಸಂತಸದ ಕಲಿಕೆಗೆ ಕಲಿಕಾ ಹಬ್ಬ ಸಹಕಾರಿ:ಚಂದ್ರಶೇಖರ ನುಗ್ಗಲಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮಾ.6–ಶಿಕ್ಷಣದ ಗುಣಮಟ್ಟ ಹೆಚ್ಚಳ ಹಾಗೂ ಕಲಿಕೆಯಲ್ಲಿ ಹಿಂದುಳಿದ ಮಕ್ಕಳಿಗೆ ಕಲಿಕೆಯಲ್ಲಿ ಆಸಕ್ತಿ ಮೂಡಿಸಲು ಕಲಿಕಾ ಹಬ್ಬ ಕಾರ್ಯಕ್ರಮ ಸಹಕಾರಿಯಾಗಿದೆ ಎಂದು ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ರಾಜ್ಯ ಪ್ರಧಾನ ಕಾರ್ಯದರ್ಶಿ ಚಂದ್ರಶೇಖರ ನುಗ್ಗಲಿ ಹೇಳಿದ್ದಾರೆ.

ತಾಲೂಕಿನ ಚಿಟಗಿನಕೊಪ್ಪ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಯಲ್ಲಿ ಬುಧವಾರ ಜರುಗಿದ ಕಲಿಕಾ ಹಬ್ಬ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಪ್ರಾಥಮಿಕ ಹಂತದಲ್ಲೇ ಮಕ್ಕಳಿಗೆ ಮೌಲ್ಯಯುತ ಶಿಕ್ಷಣ ದೊರೆಯುವಂತಾದರೆ ಅವರ ಭವಿಷ್ಯ ಉಜ್ವಲವಾಗುತ್ತದೆ ಎಂದರು. ಮುಖ್ಯ ಅತಿಥಿಯಾಗಿದ್ದ ಕ್ಷೇತ್ರ ಸಮನ್ವಯಾಧಿಕಾರಿ ಎಚ್.ಕೆ.ಗುಡೂರ ಮಾತನಾಡಿ, ಕಲಿಕೆ ನಿರಂತರ ಉತ್ಸವವಾಗಬೇಕು. ಮಕ್ಕಳು ಸಂತಸದಿಂದ ಅಕ್ಷರ ಕಲಿಯುವಂತಾಗಬೇಕು. ಆ ದಿಸೆಯಲ್ಲಿ ಸರ್ಕಾರ ಕಲಿಕಾ ಹಬ್ಬ ಕಾರ್ಯಕ್ರಮವನ್ನು ರೂಪಿಸಿದೆ. ಶಿಕ್ಷಕರು ಮಕ್ಕಳಲ್ಲಿ ಅಕ್ಷರಜ್ಞಾನ ಬೆಳೆಸುವ ಜವಾಬ್ದಾರಿ ವಹಿಸಬೇಕು ಎಂದು ಹೇಳಿದರು. ಅತಿಥಿ ಇಐಡಿ ಪ್ಯಾರಿ ಶುಗರ್ಸ್‌ನ ಮ್ಯಾನೇಜಿಂಗ್ ಡೈರೆಕ್ಟರ್ ರವೀಂದ್ರ ದೇಸಾಯಿ ನಮ್ಮ ಸಕ್ಕರೆ ಕಾರ್ಖಾನೆ ಸರ್ಕಾರಿ ಶಾಲೆಗಳ ಅಭಿವೃದ್ಧಿಗೆ ಸದಾ ಕೈಜೋಡಿಸುತ್ತಿದೆ ಎಂದರು.

ನಾಯನೇಗಲಿ ಗ್ರಾಪಂ ಅಧ್ಯಕ್ಷ ಮುತ್ತು ಬಡಿಗೇರ, ಸದಸ್ಯರಾದ ನಿಂಗನಗೌಡ ಪಾಟೀಲ, ಜಗದೀಶ ಮಾದರ, ಶಿಕ್ಷಣ ಸಂಯೋಜಕ ಎಸ್.ಎಸ್.ಬೆಣ್ಣೂರ, ಸಿಆರ್‌ಪಿಗಳಾದ ಮುತ್ತು ಬಳ್ಳಾ, ಮಲ್ಲಮ್ಮ ಬಾರ–ಕೇರ, ರಾಘವೇಂದ್ರ ಹಟ್ಟಿ, ಎಚ್.ಎಂ.ಗೂಳಿ, ಪ್ರಕಾಶ ಕೋಟಿ, ಹಸ್ಮತ್ ಎಂ.ಬಿ., ನೌಕರ ಸಂಘದ ಪ್ರಮುಖರಾದ ವಿ.ಎಚ್.ಕುಲಕರ್ಣಿ, ಅಶೋಕ ದೊಡಮನಿ, ಮಲ್ಲಿಕಾರ್ಜುನ ಭಜಂತ್ರಿ, ಜ್ಯೋತಿ ಸಾಲೋಟಗಿ, ಚಂದ್ರಿಕಾ ಹುಣಶ್ಯಾಳ, ಶಾಲೆಯ ಮುಖ್ಯಗುರು ಸುನೀಲ್ ಪಾಟೀಲ ಇದ್ದರು.

## ಪಿಯು ಪರೀಕ್ಷೆಗೆ 794 ವಿದ್ಯಾರ್ಥಿಗಳು ಗೈರು



ಮಲ್ಲಮ್ಮ ನುಡಿ ವಾರ್ತೆ

ಬೀದರ. ಮಾ. 06 : ಜಿಲ್ಲೆಯ 37 ಪರೀಕ್ಷಾ ಕೇಂದ್ರಗಳಲ್ಲಿ ಸೋಮವಾರ ನಡೆದ ಪಿಯು ದ್ವಿತೀಯ ಪರೀಕ್ಷೆಗೆ 794 ವಿದ್ಯಾರ್ಥಿಗಳು ಗೈರು ಹಾಜರಾದರು.

ಗಣಿತ ವಿಷಯಕ್ಕೆ 12,792, ಎಜ್ಯುಕೇಶನ್‌ಗೆ 551 ಹಾಗೂ ಬಿಸಿನೆಸ್ ಸ್ಟಡೀಸ್ ವಿಷಯಕ್ಕೆ 2,408 ವಿದ್ಯಾರ್ಥಿಗಳು ಹಾಜರಾಗಿ ಪರೀಕ್ಷೆ ಬರೆದರು.

ಒಟ್ಟು 16,545 ವಿದ್ಯಾರ್ಥಿಗಳು ಹೆಸರು ನೋಂದಣಿ ಮಾಡಿಸಿಕೊಂಡಿದ್ದರು. ಈ ಪೈಕಿ 15,751 ವಿದ್ಯಾರ್ಥಿಗಳು ಪರೀಕ್ಷೆ ಎದುರಿಸಿದರು.

'ಜಿಲ್ಲೆಯ ಎಲ್ಲ ಪರೀಕ್ಷಾ ಕೇಂದ್ರಗಳಲ್ಲಿ ಸುಸೂತ್ರವಾಗಿ ಪರೀಕ್ಷೆಗಳು ನಡೆದಿದ್ದು, ಯಾವುದೇ ಡಿಬಾರ್ ಆಗಿಲ್ಲ' ಎಂದು ಡಿಡಿಪಿಯು ಕಚೇರಿ ಪ್ರಕಟಣೆ ತಿಳಿಸಿದೆ.

## ನಿವೃತ್ತ ಶಿಕ್ಷಕಿ ಸಂಜೀವಿನಿಗೆ ಅದ್ದೂರಿಯಾಗಿ ಬೀಳ್ಕೊಡುಗೆ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ :ಮಾ.6: ತಾಲೂಕಿನ ಭಾತಂಬ್ರಾ ಗ್ರಾಮದ ಸರ್ಕಾರಿ ಶಾಲೆಯಲ್ಲಿ 24 ವರ್ಷಗಳ ನಿರಂತರ ಸೇವೆ ಸಲ್ಲಿಸಿ ನಿವೃತ್ತರಾದ ಶಿಕ್ಷಕಿ ಸಂಜೀವಿನಿ ರಾಮರಾವ ಪಾಟ್ವಾರಿ ಅವರನ್ನು ಶಾಲಾ ಮುಖ್ಯ ಗುರುಗಳು ಮತ್ತು ಸಿಬ್ಬಂದಿವರ್ಗದವರು ಸನ್ಮಾನಿಸಿ ಅದ್ದೂರಿಯಾಗಿ ಭಾವನಾತ್ಮಕವಾಗಿ ಬೀಳ್ಕೊಟ್ಟರು.

ಕ್ಷೇತ್ರ ಶಿಕ್ಷಣ ಅಧಿಕಾರಿಗಳು ಸಿ.ಜಿ.ಹಳ್ಳದ ಅವರು ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ ಉತ್ತಮ ಸಮಾಜ ಮತ್ತು ಉತ್ತಮ ಮನೆ ನಿರ್ಮಾಣದಲ್ಲಿ ಶಿಕ್ಷಕಿಯ ಪಾತ್ರ ಅತ್ಯಂತ ಮಹತ್ವದಾದುದು. ಒಬ್ಬ ಶಿಕ್ಷಕಿ ತನ್ನ ಜವಾಬ್ದಾರಿ ಅರಿತು ಕೆಲಸ ಮಾಡಿದರೆ ಮತ್ತು ಮಕ್ಕಳಿಗೆ ಉತ್ತಮ ಮಾರ್ಗದರ್ಶನ ಮಾಡಿದರೆ ಉತ್ತಮ ಭವಿಷ್ಯ ರೂಪಿಸಿದರೆ ಉತ್ತಮ ಸಮಾಜ ನಿರ್ಮಾಣ ಆಗುತ್ತದೆ. ಅದೆ ಒಬ್ಬ ಶಿಕ್ಷಕ ತನ್ನ ಜವಾಬ್ದಾರಿಯನ್ನು ಮರೆತು ತಪ್ಪು ಮಾಡಿದರೆ ಮಕ್ಕಳು ತಪ್ಪು ದಾರಿ ತುಳಿಯುತ್ತಾರೆ ಹಾಗೂ ನಿವೃತ್ತ ಶಿಕ್ಷಕಿಗೆ ದೇವರು ಉತ್ತಮ ಆಯು, ಆರೋಗ್ಯ ಕೊಟ್ಟು ಸುಖವಾಗಿ ಇಡಲಿ ಎಂದರು.ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ತಾಲೂಕು ಘಟಕದ ಅಧ್ಯಕ್ಷರಾದ ಚಂದ್ರಶೇಖರ ಬನ್ನಳೆ, ಉಪಾಧ್ಯಕ್ಷರಾದ ಪ್ರಭು ಡಿಗ್ಗೆ, ಪತ್ರಅಂಕಿತವ್ಯವಸ್ಥಾಪಕರಾದ ಶಿವಕುಮಾರ ಪುಲಾರೆ, ಇ.ಸಿ.ಓ ಮಲ್ಲಿಕಾರ್ಜುನ ಕನ್ನಳ್ಳೆ, ಸಂತೋಷಿ ಕುಮಾರಿ ವಾಡೆ, ಕಾಶೀನಾಥ್ ಚಲ್ವಾ, ವೈಜೀನಾಥ್ ಮಲ್ಲಿಗೆ, ಫಯಾ ಜುದ್ದೀನ್, ಜೈಪಾಲ್ ಜಾದವ್, ರಾಜಕುಮಾರ ಪಾಲಾಪುರೆ, ಅಬ್ದುಲ್‌ರಹೀವ ್, ರಿಯಾಜ್ ಅಹಮದ್, ತಜಮುಲ್, ಸಿದ್ದಲಿಂಗ ಬಿರಾದರ್, ಉಪಸ್ಥಿತರಿದ್ದರು. ಶಾಲೆಯ ಶಿಕ್ಷಕಿಯರಾದ ಸುಜಾತಾ ಆರ್ ಪಾಟೀಲ್ , ಮದೀನಾ ಬೇಗಮ್ ವಿಜಯಲಕ್ಷ್ಮಿ ಮಾನಕಾರೆ, ನಿರ್ಮಲಾ ಜಮಾದಾರ್, ಜಿನತ ಬೇಗಂ, ಅವರು ಸೇರಿ ಎಲ್ಲರೂ ಶಿಕ್ಷಕಿಗೆ ಭಾವನಾತ್ಮಕ ನುಡಿಗಳನ್ನು ನುಡಿದರು. ಶಾಲಾ ಮುದ್ದು ಮಕ್ಕಳು, ಹಳೆಯ ವಿದ್ಯಾರ್ಥಿಗಳು, ಪಾಲಕರು, ಗ್ರಾಮಸ್ಥರು ಉಪಸ್ಥಿತರಿದ್ದರು.ರವಿಚಂದ್ರ ಮೈನಾಳೆ ನಿರೂಪಿಸಿದರು, ಜೂಬೇರ ಪೆಂಡಾರಿ ವಂದಿಸಿದರು.

## ಮಡ್ಡಿ ಮಹಾದೇವ ದೇವಾಲಯದ ಕಳಸಾರೋಹಣ



ಮಲ್ಲಮ್ಮ ನುಡಿ ವಾರ್ತೆ

ಕಮಲನಗರ: ತಾಲೂಕಿನ ಹೊರಂಡಿಕ್ರಾಸ್ ಬಳಿಯ ಐದು ಗ್ರಾಮಗಳ ಸೀಮೆಯಲ್ಲಿರುವ ಮಡ್ಡಿಮಹಾದೇವ ಮಂದಿರದಲ್ಲಿ ಮಹಾದೇವ ದೇವರ ಜಾತ್ರಾ ಮಹೋತ್ಸವ ಹಾಗೂ ನೂತನ ಕಳಸಾರೋಹಣವು ಅದ್ದೂ–ರಿಯಾಗಿ ಜರುಗಿತು.

ತಾಲೂಕಿನ ಡೋಣಗಾಂವ(ಎಂ) ಹಾವಗಿಸ್ವಾಮಿ ಮಠದ ಉಮಾಕಾಂತ ದೇಶಿ ಕೇಂದ್ರ ಸ್ವಾಮೀಜಿ ನೇತೃತ್ವದಲ್ಲಿ ಬೆಳಿಗ್ಗೆ ಪಲ್ಲಕ್ಕಿ ಉತ್ಸವ ಹಾಗೂ ನೂತನ ಕಳಶದ ಮೆರವಣಿಗೆಗೆ ಸಾಗರ ಸ್ವಾಮಿ ಚಾಲನೆ ನೀಡಿದರು.

ಬೆಳಗ್ಗೆಯಿಂದಲೇ ಮಹಾದೇವ ದೇವರಿಗೆ ವಿಶೇಷ ಪೂಜೆ, ಅಭಿಷೇಕ ಹಾಗೂ ಹೋಮಹವನ ಜರುಗಿದವು.ದೇವಸ್ಥಾನದಿಂದ ಆರಂಭವಾದ ಮೆರವಣಿಗೆಯು ಸೋನಾಳ ಮುಖ್ಯರಸ್ತೆ ಮಾರ್ಗವಾಗಿ ಸುಮಂಗಲೆಯರು ಕಳಸವನ್ನು ಹೊತ್ತಿ ಮೆರವಣಿಗೆಯಲ್ಲಿ ಭಾಗವಹಿಸಿದರು.

ಸೋನಾಳ ಗ್ರಾಮಕ್ಕೆ ಹೋಗಿ ಗ್ರಾಮದಲ್ಲಿಯ ಮಂದಿರಗಳಿಗೆ ಹೋಗಿ ನಂತರ ಗ್ರಾಮದ ಪ್ರಮುಖ ಬೀದಿಗಳಲ್ಲಿ ಸಂಚರಿಸಿ, ದೇವಸ್ಥಾನ ತಲುಪಿತು.ಬಂಡಯ್ಯಾ ಸ್ವಾಮಿ ಅವರು ಹೋಮ ಹವನ ಹಾಗೂ ಅಗ್ನಿಪೂಜೆ ನಡೆಸಿಕೊಟ್ಟರು.ಸರಸ್ವತಿ ಮಹೇಶ ಬಾಲೂರ ಅವರಿಂದ ನೂತನ ಕಳಸಾರೋಹಣ ನೆರವೇರಿತು.

ಈ ಜಾತ್ರೆ ಕಾರ್ಯಕ್ರಮಕ್ಕೆ ಸೋನಾಳ, ಹೋರಂಡಿ, ಚಾಂಡೇಶ್ವರ, ಬಾಲೂರ(ಕೆ), ಕಮಲನಗರದ ಭಕ್ತರು ಉತ್ಸಾಹದಿಂದ ನಡೆಸಿಕೊಟ್ಟರು.

"ಐದು ಸೀಮೆಯಲ್ಲಿ ಪುರಾತನ ಕಾಲದಿಂದಲು ಈ ಮಂದಿರ ಆಚರಣೆಯಲ್ಲಿ ಇತ್ತು, ಕೆಲವು ವರ್ಷದಿಂದ ಜನ ಆಚರಣೆ ಕಡಿಮೆಯಾಗಿತ್ತು ಇವಾಗ ಎಲ್ಲರೂ ಒಗ್ಗೂಡಿ ಮಂದಿರವನ್ನು ಅಭಿವೃದ್ಧಿ ಪಥಕ್ಕೆ ತಂದು, ಪ್ರತಿ ವರ್ಷ ಅದ್ದೂರಿಯಾಗಿ ಜಾತ್ರೆ ಮಾಡಲಾಗುವುದು. ಮಡ್ಡಿ ಮಹಾದೇವರ ಭಕ್ತರು ಕೇಳಿದ ಇಷ್ಟಾರ್ಥ ಪೂರ್ಣ ಮಾಡುವರು ಎಂದು ಅಚಲ ನಂಬಿಕೆ ಇದೆ.

**–ಗುರುನಾಥ ವಡ್ಡೆ, ಧಾರ್ಮಿಕ ಚಿಂತಕರು ಕಮಲನಗರ.**

ಸಡಗರದಿಂದ ಜರುಗಿದ ವಿಜ್ಞಾನ ದಿನಾಚರಣೆ

## ಪರಿಸರ ಅಸಮತೋಲನ ಹೋಗಲಾಡಿಸಲು ಮರ ಗಿಡ ಬೆಳೆಸಿ:- ಕಾವಡಿ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:- ಪರಿಸರ ಆಸಮತೋಲನದಿಂದಾಗಿ ಭೂಮಿಯ ತಾಪಮಾನ ಹೆಚ್ಚುತ್ತಿದೆ ಎಂದು ಪರಿಸರವಾದಿ ಶೈಲೇಂದ್ರ ಕಾವಡಿ ತಾಲೂಕಿನ ನಿರ್ಣಾ ಗ್ರಾಮದ ಸರ್ಕಾರಿ ಕನ್ಯಾ ಪ್ರೌಢ ಶಾಲೆಯಲ್ಲಿ ಸಾಲು ಮರದ ತಿಮ್ಮಕ್ಕ ಇಕೋ ಕ್ಲಬ್ ಆಶ್ರಯದಲ್ಲಿ ಹಮ್ಮಿಕೊಂಡಿದ್ದ ಪರಿಸರ ಸಂರಕ್ಷಣೆ ಜನ ಜಾಗೃತಿ ಹಾಗೂ ರಾಷ್ಟ್ರೀಯ ವಿಜ್ಞಾನ ದಿನಾಚರಣೆ ಉದ್ಘಾಟಿಸಿ ಮಾತನಾಡುತ್ತಾ ತಿಳಿಸಿದರು. ಭೂ ತಾಪಮಾನ ಹೆಚ್ಚಳವಾಗಿ ಹಲವಾರು ಪ್ರಕೃತಿ ವಿಕೋಪಗಳು ಸಂಭವಿಸಲಿವೆ, ಭೂ ತಾಪಮಾನ ಕಡಿಮೆ ಮಾಡಿದರೆ ನಮ್ಮಗೆ ಉಳಿಗಾಲವಿದೆ ಎಂದರು. ರಾಷ್ಟ್ರೀಯ ಹಸಿರು ಪಡೆ ಯೋಜನೆ ವಿದ್ಯಾರ್ಥಿಗಳಲ್ಲಿ ಪರಿಸರ ಅರಿವು ಒಡಮೂಡಿಸಲು ಸಹಾಯವಾಗಿದೆ ಎಂದರು. ಸಮಾಜ ಕಾರ್ಯಕರ್ತ ಮಹಮ್ಮದ್ ಅಸ್ಲಾಂಮಿಯಾ ಮಾತನಾಡಿ, ವಿದ್ಯಾರ್ಥಿಗಳು ಜೀವನದಲ್ಲಿ ಗುರಿಯಿಟ್ಟುಕೊಂಡು ಅಧ್ಯಯನ ಮಾಡಿದರೆ ತಮ್ಮ ಗುರಿ ಮುಟ್ಟಲು ಸಹಾಯವಾಗುತ್ತದೆ ಎಂದರು. ಪರಿಸರ ಮಾಲಿನ್ಯ ಹೋಗಲಾಡಿಸಲು ಪ್ರತಿಯೊಬ್ಬರು ಕಡ್ಡಾಯವಾಗಿ ಮರ ಗಿಡ ಬೆಳೆಸಿ ಪರಿಸರ ಸಂರಕ್ಷಣೆಗೆ ಸಹಾಯ ಮಾಡಬೇಕು ಎಂದರು. 2025-26ನೇ ಸಾಲಿನಲ್ಲಿ ಮೆಟ್ರಿಕ ಪರೀಕ್ಷೆಯಲ್ಲಿ ಈ ಕನ್ಯಾ ಪ್ರೌಢ ಶಾಲಾ ವಿದ್ಯಾರ್ಥಿನಿಯರು 95 ಪ್ರತಿ ಶತ ಅಂಕ ಪಡೆದು ಉತ್ತೀರ್ಣರಾದ ವಿದ್ಯಾರ್ಥಿನಿಯರಿಗೆ 2000 ಬಹುಮಾನ ನೀಡುವುದಾಗಿ ಘೋಷಿಸಿದರು. ಪತ್ರಕರ್ತ ರಾಜಕುಮಾರ ಆರ್. ಹಡಪದ ಮಾತನಾಡಿ, ವಿದ್ಯಾರ್ಥಿಗಳು ದುಶ್ಚಟಗಳಿಗೆ ಬಲಿಯಾಗದೆ ಒಳ್ಳೆಯ ಹವ್ಯಾಸಗಳು ಜೀವನದಲ್ಲಿ ರೂಢಿಸಿಕೊಳ್ಳಬೇಕು ಎಂದರು. ಇತ್ತೀಚಿನ ದಿನಗಳಲ್ಲಿ ಮೊಬೈಲ್ ಹಾವಳಿಗಳಿಂದ ಸಾವು ನೋವಿನ ದುರ್ಘಟನೆಗಳು ಸಂಭವಿಸುತ್ತಿವೆ ವಿದ್ಯಾರ್ಥಿಗಳು ಮೊಬೈಲ್ ಬಳಕೆ ಮಾಡದಿರಲು ಮನವಿ ಮಾಡಿದರು. ವಿದ್ಯಾರ್ಥಿಗಳು ತಮ್ಮ ಜ್ಞಾನಾರ್ಜನೆ ಸಂಪತ್ತು ಹೆಚ್ಚಿಸಿಕೊಳ್ಳಲು ಜನ ನಿತ್ಯ ಕಡ್ಡಾಯವಾಗಿ ಪಾತ್ರಿಕೆಗಳು ಓದುವ ಹವ್ಯಾಸ ಬೆಳೆಸಿಕೊಳ್ಳಿ ಎಂದು ಸಲಹೆ ನೀಡಿದರು. ಪತ್ರಕರ್ತ ಅಬ್ದುಲ್ ಖದೀರ್ ಲಶ್ಕೇರಿ ಮಾತನಾಡಿ, ವಿದ್ಯಾರ್ಥಿಗಳು ಅಧ್ಯಯನದ ಕಡೆಗೆ ಹೆಚ್ಚಿನ ಗಮನಕೊಟ್ಟು ಉತ್ತಮ ಫಲಿತಾಂಶ ತೆಗೆಯುವ ಗುರಿ ಹೊಂದಬೇಕು ಎಂದರು. ನಿರ್ಣಾ ಪ್ರೌಢ ಶಾಲೆ ಇಡೀ ರಾಜ್ಯಲೇ ಮಾದರಿ ಶಾಲೆ ಆಗಬೇಕು ಎಂದರು. ಅನೀಲಕುಮಾರ್ ಬಾಬುಳಗಿ ಮಾತನಾಡಿ, ಮೆಟ್ರಿಕ ಪರೀಕ್ಷೆ ಸಮೀಪಿಸುತ್ತಿವೆ ವಿದ್ಯಾರ್ಥಿಗಳು ಶ್ರಮ ಪಟ್ಟು ಅಧ್ಯಯನ ಮಾಡಬೇಕು ಎಂದು ಕರೆ ನೀಡಿದರು. ಶಾಲಾ ಮುಖ್ಯ ಗುರುಗಳಾದ ಸರುಬಾಯಿ ಆರ್. ಪವಾರ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ವಿವಿಧ ಸ್ಪರ್ಧೆಗಳಲ್ಲಿ ವಿಜೇತ ವಿದ್ಯಾರ್ಥಿಗಳಿಗೆ ಬಹುಮಾನ ವಿತರಿಸಿ ಮಾತನಾಡಿದರು. ಈ ಕಾರ್ಯಕ್ರಮ ಅಂಗವಾಗಿ ವಿದ್ಯಾರ್ಥಿನಿಯರು ಪ್ಲಾಸ್ಟಿಕ್ ನಿಷೇಧ ಹಾಗೂ ಸಮತೋಲನ ಆಹಾರ ಕುರಿತು ಕಿರುನಾಟಕ ಪ್ರದರ್ಶಿಸಿದರು. ಈ ಸಂದರ್ಭದಲ್ಲಿ ಸಹಶಿಕ್ಷಕರಾದ ಸುರೇಖಾ, ಆಶಾರಾಣಿ, ಮೌನೇಶ್ವರಿ, ಸುನೀತಾ, ನಾಗೇಶ್ವರಿ ಸೇರಿದಂತೆ ವಿದ್ಯಾರ್ಥಿನಿಯರು ಉಪಸ್ಥಿತರಿದ್ದರು. ಶಿಕ್ಷಕಿ ಭವ್ಯ ಪ್ರಾಸ್ತಾವಿಕವಾಗಿ ಮಾತನಾಡಿ ಕಾರ್ಯಕ್ರಮ ನಿರೋಪಿಸಿದರು. ದೈಹಿಕ ಶಿಕ್ಷಕ ಜೈಪಾಲ್ ರೆಡ್ಡಿ ವಂದಿಸಿದರು.

## ರಾಂಪುರನಲ್ಲಿ ಶಾಂತಿ ಸುವ್ಯವಸ್ಥೆ ಕಾಪಾಡಲು ತಹಶೀಲ್ದಾರ್ ಪಂಚಾಳ ಮನವಿ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:- ರಾಂಪುರ ಗ್ರಾಮದಲ್ಲಿರುವ ಸಂಗೊಳ್ಳಿ ರಾಯಣ್ಣನ ಕಟ್ಟೆ ಸಾರ್ವಜನಿಕರ ಓಡಾಟಕ್ಕೆ ತೊಂದರೆಯಾಗುತ್ತಿದೆ ಎಂದು ಗ್ರಾಮಸ್ಥರು ಇಟಗಾ ಗ್ರಾಮ ಪಂಚಾಯತ್ ಅಧಿಕಾರಿಗೆ ದೂರು ಸಲ್ಲಿಸಸಿದರು. ಸಾರ್ವಜನಿಕರ ದೂರಿನ ಅನ್ವಯ ತಹಶೀಲ್ದಾರ್ ಮಂಜುನಾಥ್ ಪಂಚಾಳ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿ ಶಾಂತಿ ಸುವ್ಯವಸ್ಥೆ ಕಾಪಾಡಲು ಶಾಂತಿ ಸಭೆ ನಡೆಸಿದರು. ಈ ಸಂದರ್ಭದಲ್ಲಿ ಪಿಎಸ್ಐ ಬಾಷುಮಿಯಾ ಕೊಂಚೂರ್, ಪಿಡಿಓ ಸುಶೀಲಕುಮಾರ್ ದಿನೇ ಸೇರಿದಂತೆ ಇತರೆ ಅಧಿಕಾರಿಗಳು, ಗ್ರಾಮಸ್ಥರು ಉಪಸ್ಥಿತರಿದ್ದರು.

## ಸಡಗರ ಸಂಭ್ರಮದಿಂದ ಜರುಗಿದ ಶ್ರೀ ಗುರು ಅಯ್ಯಪ್ಪ ಸ್ವಾಮಿಜೀ ಅವರ 56ನೇ ಪುಣ್ಯಾರಾಧನೆ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:- ಶ್ರೀ ಗುರು ಅಯ್ಯಪ್ಪ ಶಿವಾಚಾರ್ಯರು ಧಾರ್ಮಿಕ ಕ್ಷೇತ್ರಕ್ಕೆ ಅಪಾರವಾದ ಕೊಡುಗೆ ನೀಡಿದ್ದಾರೆ ಎಂದು ಹೊನ್ನಾಕಿರಣಯ ಚಂದ್ರಗುಡ್ಡ ಶಿವಾಚಾರ್ಯರು ಪಟ್ಟಣದ ಅಯ್ಯಪ್ಪ ಸ್ವಾಮಿ ಅವರ 56ನೇ ಪುಣ್ಯಾರಾಧನೆ ಮತ್ತು ನೂತನ ಕಟ್ಟಡದ ಲೋಕಾರ್ಪಣೆ ಸಮಾರಂಭ ಕಾರ್ಯಕ್ರಮದಲ್ಲಿ ಮಾತನಾಡುತ್ತಾ ತಿಳಿಸಿದರು. ಶ್ರೀ ಗುರು ಅಯ್ಯಪ್ಪ ಸ್ವಾಮಿಗಳು ಆಚಾರ್ಯ ತತ್ವಗಳು ಅಳವಡಿಸಿಕೊಂಡು ಭಕ್ತರ ಮನೆ ಮನೆಗೆ ತಲುಪಿಸಲು ಕೀರ್ತಿ ಇವರಿಗೆ ಸಲ್ಲುತ್ತದೆ ಎಂದು ತಿಳಿಸಿದರು. ಇವರು ಹಾಕಿಕೊಟ್ಟ ಮಾರ್ಗದಲ್ಲಿ ಷ.ಬ್ರ. ಶ್ರೀ ಗುರುಲಿಂಗ ಶಿವಾಚಾರ್ಯರು ಹಗಲಿರುಳು ಶ್ರಮಿಸುತ್ತಿದ್ದಾರೆ ಶಿಕ್ಷಣ, ಧಾರ್ಮಿಕ ಕ್ಷೇತ್ರಕ್ಕೆ ಹಿಂದಿನ ಗುರುಗಳ ಒಂದು ಕನಸು ನನಸು ಮಾಡುತ್ತಿದ್ದಾರೆ ಎಂದರು. ಈ ಕಾರ್ಯಕ್ರಮ ಶ್ರೀ ಷ. ಬ್ರ. ಗುರುಲಿಂಗ ಶಿವಾಚಾರ್ಯರ ದಿವ್ಯ ಸಾನಿಧ್ಯದಲ್ಲಿ ಜರುಗಿತ್ತು. ಈ ಪುಣ್ಯಾರಾಧನೆ ಕುರಿತು ಷ.ಬ್ರ ಹಾವಗಿಲಿಂಗ ಶಿವಾಚಾರ್ಯರು ಹಲಬುರ್ಗಾ, ಷ.ಬ್ರ. ಶಂಭುಲಿಂಗ್ ಸೋಮನಾಥ ಸ್ವಾಮೀಜಿ ಸುಲ್ತಾನಪುರ್, ಷ.ಬ್ರ. ದಾರುಕಲಿಂಗ ಶಿವಾಚಾರ್ಯರು ಹೇಡಗಾಪುರ್, ಷ.ಬ್ರ. ಡಾ. ವಿಶ್ವರಾಧ್ಯ ಶಿವಾಚಾರ್ಯರು ಮಾಗಣಗೇರಿ, ಷ. ಬ್ರ. ಶ್ರೀಕಂಠ ಶಿವಾಚಾರ್ಯರು ನಾಗಣಸೂರ್, ಷ. ಬ್ರ. ರೇಣುಕ ವೀರಗಂಗಾಧರ ಶಿವಾಚಾರ್ಯರು ಹುಮನಾಬಾದ, ಶಾಂತಲಿಂಗ ಸ್ವಾಮೀಜಿ ಹಿರೇನಾಗವ, ಪಂಚಾಕ್ಷರಿ ದೇವರು ಐನಾಪುರ್, ಷ. ಬ್ರ. ಮರುಳಾರಾಧ್ಯ ಶಿವಾಚಾರ್ಯರು ಚಾಂಗಲೇರಾ- ಚಿಟಗುಪ್ಪ ಇವರು ಮಾತನಾಡಿದರು ಈ ಸಂದರ್ಭದಲ್ಲಿ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನಾಧಿಕಾರಿ ಕೆ. ಬಸವರಾಜ , ಸೇರಿದಂತೆ ಹಿರಿಯರು, ಯುವಕರು, ಮಹಿಳೆಯರು, ಮಕ್ಕಳು ಇದ್ದರು. ನಂತರ ವಿಶೇಷ ಅನ್ನದಾಸೋಹ ಜರುಗಿತ್ತು. ಸಂಜೆ ಬೀದರ್ ಸಂಗೀತ ಬಳಗದಿಂದ ಅದ್ಧೂರಿಯಾಗಿ ಸಂಗೀತ ಕಾರ್ಯಕ್ರಮ ಜರುಗಿತ್ತು.

## ಜ್ಞಾನದ ಜ್ಯೋತಿಯನ್ನು ಬೆಳಗಿಸಿದ ಕೀರ್ತಿ ಬಸವ ಮಹಾಮಠಕ್ಕೆ ಸಲ್ಲುತ್ತದೆ:- ಡಾ. ಬಸವಲಿಂಗ ಪಟ್ಟದೇವರು




ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:-ಕಾಯಕ, ದಾಸೋಹ ಮತ್ತು ಜ್ಞಾನದ ತತ್ವವನ್ನು ಸಾರುತ್ತಾ ಜಾತಿ ಮತಗಳ ಭೇದ ಇಲ್ಲದೇ ಎಲ್ಲಾ ಸಮಾಜ ಬಾಂಧವರಿಗೂ ಶಿಕ್ಷಣ ಮತ್ತು ಸಂಸ್ಕಾರವನ್ನು ನೀಡುತ್ತಿರುವ ಬಸವ ಮಹಾಮಠದ ಮಾತೆ ಮೈತ್ರಾದೇವಿ ಅವರ ಕಾರ್ಯ ಶ್ಲಾಘನೀಯವಾಗಿದೆ ಎಂದು ಬಸವ ಕಲ್ಯಾಣ ಅನುಭವ ಮಂಟಪದ ನಾಡೋಜ ಡಾ. ಬಸವಲಿಂಗ ಪಟ್ಟದೇವರು ಹೇಳಿದರು. ತಾಲೂಕಿನ ಮನ್ನಾಎಖ್ಖೇಳ್ಳಿ ಗ್ರಾಮದ ಬಸವ ಮಹಾಮಠದಲ್ಲಿ ಎರಡು ದಿನಗಳ ಕಾಲ ನಡೆಯುತ್ತಿರುವ ಬಸವಧರ್ಮ ಸಮಾವೇಶ, ಸಂಗೀತ ನಾಟಕೋತ್ಸವ ಸಮಾರೋಪ ಕಾರ್ಯಕ್ರಮದ ದಿವ್ಯ ಸಾನಿಧ್ಯ ವಹಿಸಿ ಆಶೀರ್ವಚನ ನೀಡುತ್ತಾ ಮಾತನಾಡಿದರು. 12ನೇ ಶತಮಾನದಲ್ಲಿ ಬಸವಾದಿ ಪ್ರಮಥರು ಅಂದಿನ ಸಮಯದಲ್ಲಿನ ಅನೀತಿ, ಅಸಮಾನತೆ ವಿರುದ್ಧ ಧ್ವನಿ ಎತ್ತಿ ಸಾಮಾಜಿಕ ನ್ಯಾಯವನ್ನು ಒದಗಿಸುವ ನಿಟ್ಟಿನಲ್ಲಿ ಶ್ರಮಿಸಿದರು. ಬಸವಣ್ಣವರು ಅನುಭವ ಮಂಟಪವನ್ನು ನಿರ್ಮಿಸಿದರು. ಬಸವಾದಿ ಪ್ರಮಥರು ತಮ್ಮ ಅಮೃತದಂತ ವಚನಾಮೃತವನ್ನು ಮಾನವ ಸಮಾಜಕ್ಕೆ ನೀಡಿದ್ದಾರೆ.

ಬಸವಣ್ಣನವರ ತತ್ವಾದರ್ಶಗಳನ್ನು ಪ್ರತಿಯೊಬ್ಬರು ತಮ್ಮ ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳುವ ಮೂಲಕ ಮಾದರಿ ವ್ಯಕ್ತಿಗಳಾಗಬೇಕು ಎಂದರು. ಮಾತೆ ಮೈತ್ರಾದೇವಿ ತಾಯಿ ಅವರ ಕುರಿತು ಎಷ್ಟು ಹೇಳಿದರು ಕಡಿಮೆ ಆಗುವುದು. ಬೀದರ ದಕ್ಷಿಣ ಭಾಗದಲ್ಲಿ ಮನೆ ಮನೆಗೂ ತೆರಳಿ ಬಸವಣ್ಣವರ ತತ್ವಾದರ್ಶಗಳನ್ನು ಮತ್ತು ಶಿವಶರಣರ ವಚನ ಸಾಹಿತ್ಯವನ್ನು ಮುಟ್ಟಿಸಿ ವಚನ ಸಾಹಿತ್ಯದ ಬೆಳವಣಿಗೆ ಶ್ರಮಿಸಿದ್ದಾರೆ. ತಮ್ಮ ಇಡಿ ಜೀವನವನ್ನು ಧರ್ಮ ಸೇವೆ ಮತ್ತು ಶಿಕ್ಷಣವನ್ನು ನೀಡುತ್ತಾ ಅನಾಥ ಮಕ್ಕಳಿಗೆ, ಬಡವರಿಗೆ ಉತ್ತಮ ಶಿಕ್ಷಣ ದೊರೆಯಲಿ ಎಂಬ ಉದ್ದೇಶದಿಂದ ಶಿಕ್ಷಣ ಸಂಸ್ಥೆಯನ್ನು ಕಟ್ಟಿ ಶೈಕ್ಷಣಿಕ ಸೇವೆಯೂ ಸಲ್ಲಿಸುತ್ತಿದ್ದಾರೆ ಎಂದರು.

ಮುದಗಲ ಮಠದ ಮಹಾಂತ ಮಹಾಸ್ವಾಮಿಜಿ ಮಾತನಾಡಿ, ಮೈತ್ರಾದೇವಿ ಮಾತಾಜಿ ಅವರ ಬಗ್ಗೆ ಎಷ್ಟು ಹೇಳಿದರು ಕಡಿಮೆ. ಸಾವಿರಾರು ಮಕ್ಕಳಿಗೆ ಉತ್ತಮ ಶಿಕ್ಷಣ ಮತ್ತು ಸಂಸ್ಕಾರವನ್ನು ನೀಡುತ್ತಿರುವ ಮಾತಾಜಿ ಅವರ ಕಾರ್ಯ ಮೆಚ್ಚುವಂತಹದು.

ಅವರ ಸರಳ ಜೀವನ ಎಲ್ಲರಿಗೂ ಮಾದರಿಯಾಗಿದೆ ಎಂದರು. ಕಲಬುರಗಿ ಹೈಕೋರ್ಟನ ಲೋಕಾಯುಕ್ತ ವಿಶೇಷ ಸಾರ್ವಜನಿಕ ಅಭಿಯೋಜಕ ಗೌರೀಶ ಖಾಶೆಂಪೂರ ಮಾತನಾಡಿ, ನಮ್ಮ ಭಾಗದಲ್ಲಿ ಬಸವ ತತ್ವದ ಜ್ಯೋತಿಯನ್ನು ಮನೆ ಮನೆಗೂ ತಲುಪಿಸಿದ ಕೀರ್ತಿ ಮಾತೆ ಮೈತ್ರಾದೇವಿ ಅವರಿಗೆ ಸಲ್ಲುತ್ತದೆ. ನಾನು ಈ ಮಠದಲ್ಲಿ ಉತ್ತಮ ಶಿಕ್ಷಣ ಮತ್ತು ಸಂಸ್ಕಾರವನ್ನು ಪಡೆದ ಕಾರಣದಿಂದಲ್ಲೇ ಇಂದು ನಾನು ಉತ್ತಮ ಸ್ಥಾನ ತಲುಪಿದೇನೆ.

ಬಸವಣ್ಣನವರ ತತ್ವಾದರ್ಶಗಳನ್ನು ಎಲ್ಲರೂ ಪಾಲಿಸುವುದರ ಮೂಲಕ ಮಾದರಿಯಾಗಬೇಕು ಎಂದರು. ಶಿವಕುಮಾರ ಪಂಚಾಳ ಸಂಗೀತ ಗಾಯನ ಮತ್ತು ಲೋಕನಾಥ ಚಾಂಗಲೇರಾ ಅವರು ತಬಲಾ ಸಾಥ, ಹಾಸ್ಯ ಕಲಾವಿದ ನವಲಿಂಗ ಪಾಟೀಲ ನಿರೂಪಿಸಿದರು.

ಶಕುಂತಲಾ ಬೆಲ್ದಾಳೆ ಅವರಿಗೆ ಅಕ್ಕಮಹಾದೇವಿ ಪ್ರಶಸ್ತಿಯನ್ನು ಹಾಗೂ ಜಗನಾಥರೆಡ್ಡಿ ಹೊಚಕನಳ್ಳಿ ಅವರಿಗೆ ಭದ್ರೇಶ್ವರ ಪ್ರಶಸ್ತಿಯನ್ನು ನೀಡಿ ಗೌರವಿಸಲಾಯಿತು. ಮಾಜಿ ಶಾಸಕ ಸುಭಾಷ ಕಲ್ಲೂರ, ಡಾ. ನೀತಾ ಬೆಲ್ದಾಳ, ಮಯುರಾ ಸಂತೋಷ ಬೆಲ್ದಾಳೆ, ಡಾ. ನಾಗರಾಜ ಶೇರಿಕಾರ, ರಾಜಕುಮಾರ ತರಿ, ಶಂಕರರಾವ ಪಾಟೀಲ, ನಾಗೇಂದ್ರಪ್ಪ ವರವಟ್ಟಿ, ಜಯರಾಜ ಖಂಡ್ರೆ, ಕಾಶಿನಾಥ ಪವಾರ, ಮಲ್ಲಿಕಾರ್ಜುನ ನಾಗಣೋರ, ಪಿಎಸ್ಐ ಮಹೇಂದ್ರಕುಮಾರ ಸೇರಿದಂತೆ ಸುತ್ತಮುತ್ತಲಿನ ಹತ್ತಾರು ಗ್ರಾಮಗಳ ಭಕ್ತಾದಿಗಳು ಹಾಜರಿದ್ದರು.

## ಸರ್ಕಾರಿ ಶಾಲೆಯಲ್ಲಿ ಕಲಿಯುತ್ತಿದ್ದೇನೆ ಎಂಬ ಹೆಮ್ಮೆ ನಮಗಿರಲಿ: ಪೂಜ್ಯಶ್ರೀ ಡಾ.ಶಿವಾನಂದ ಮಹಾಸ್ವಾಮಿಜಿ.



ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ :- ಫೆ 6- ಹುಲಸೂರು . ಸರಕಾರಿ ಶಾಲೆ ಎಂಬ ಹೆಮ್ಮೆ ನಮಗಿರಬೇಕು. ಸರ್ಕಾರಿ ಶಾಲೆಯಲ್ಲಿ ಕಲಿಯುವ ಮಕ್ಕಳು ದೇವರ ಮಕ್ಕಳು ಎಂದು ಭಾವಿಸಿ ಆ ಮಕ್ಕಳಿಗೆ ಶಿಕ್ಷಣ ನೀಡುವುದು ನಮ್ಮ ಕರ್ತವ್ಯ. ನಾವು ನೀವುಗಳು ಚಿಕ್ಕವರಿದ್ದಾಗ ಈ ರೀತಿಯ ಕಾರ್ಯಕ್ರಮಗಳು ನೋಡಿರಲಿಲ್ಲ, ಆದರೆ ಇಂದು ಮಕ್ಕಳಿಗೆ ನಲಿಯುತ್ತ ಕಲಿಯುವಂತೆ ನಾನಾ ಯೋಜನೆಗಳನ್ನು ತಂದು ಮಕ್ಕಳು ಶಿಕ್ಷಣ ಪಡೆಯಲಿ ಎಂಬುದು ಸರ್ಕಾರದ ಆಶಯ ಎಂದು ಹುಲಸೂರಿನ ಪೂಜ್ಯ ಶ್ರೀ ಡಾ. ಶಿವಾನಂದ ಮಹಾಸ್ವಾಮಿಜಿ ಹೇಳಿದರು. ಹುಲಸೂರ ಪಟ್ಟಣದ ಸರ್ಕಾರಿ ಮಾದರಿ ಪ್ರಾಥಮಿಕ ಶಾಲೆಯಲ್ಲಿ ಆಯೋಜಿಸಿದ ಎಫ್. ಎಲ್.ಎನ್. ಆಧಾರಿತ ಕ್ಲಸ್ಟರ್ ಮಟ್ಟದ ಕಲಿಕಾ ಹಬ್ಬ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ ಖಾಸಗಿ ಶಾಲೆಯಲ್ಲಿ ಕಲಿತಾಗ ಮಾತ್ರ ಮಕ್ಕಳು ಬುದ್ಧಿವಂತರಾಗ್ತಾರೆ ಎನ್ನುವ ಭಾವನೆ ನಮ್ಮಲ್ಲಿದೆ ಇದು ಮೊದಲು ಎಲ್ಲಾ ಪಾಲಕ ಪೋಷಕರಲ್ಲಿ ಭಾವನೆ ಹೋಗಬೇಕು. ನನ್ನ ಮಗು ಸರ್ಕಾರಿ ಶಾಲೆಯಲ್ಲಿ ಕಲಿಯುತ್ತಾನೆ ಬುದ್ಧಿವಂತನಾಗುತ್ತಾನೆ ಹಾಗೂ ಸಮಾಜದಲ್ಲಿ ಒಂದು ಉನ್ನತ ಸ್ಥಾನಕ್ಕೆ ಹೋಗುತ್ತಾನೆ ಎಂಬ ಧನಾತ್ಮಕ ಭಾವನೆ ನಮ್ಮಲ್ಲಿ ಇರಬೇಕೆಂದು ಹೇಳಿದರು.

ಕರ್ನಾಟಕ ರಾಜ್ಯ ಸರ್ಕಾರಿ ನೌಕರ ಸಂಘದ ಅಧ್ಯಕ್ಷರಾದ ನಾಗರಾಜ ಹಾವಣ್ಣಾ ಮಾತನಾಡಿ, ನಮ್ಮ ಸರ್ಕಾರವು ವಿವಿಧ ಯೋಜನೆಗಳ ಮುಖಾಂತರ ಸೌಲಭ್ಯವನ್ನು ಕೊಡುವುದರ ಮೂಲಕ ಮಕ್ಕಳ ಗುಣಮಟ್ಟ ಶಿಕ್ಷಣ ಹೆಚ್ಚಿಸುವುದಕ್ಕಾಗಿ ಅನೇಕ ಕಾರ್ಯಕ್ರಮಗಳು ಹಾಗೂ ಜಾಗೃತಿ ಅಭಿಯಾನವನ್ನು ಹಮ್ಮಿಕೊಳ್ಳುತ್ತಿದ್ದು ಅದರಲ್ಲಿ ಇದೊಂದು. ಯಾವ ಮಗು ಕಲಿಕೆಯಲ್ಲಿ ಹಿಂದುಳಿದಿದ್ದಾನೋ ಅಂತ ಮಗುವನ್ನು ಗುರುತಿಸಿ ವಿಶೇಷವಾಗಿ ಆ ಮಕ್ಕಳಿಗೆ ತರಗತಿಗಳ ನಡೆಸಿ ಕನಿಷ್ಠ ಕಲಿಕೆ ಪಡೆಯುವಂತೆ ಮಾಡುವ ಆಶಯ ಸರ್ಕಾರದ್ದು. ಇಂತಹ ಮಕ್ಕಳಿಗಾಗಿಯೇ ಕ್ಲಸ್ಟರ್ ಮಟ್ಟದ ಎಫ್ ಎಲ್ ಆಧಾರಿತ ಕಲಿಕಾ ಹಬ್ಬವನ್ನು ಆಚರಿಸುತ್ತಿದೆ. ಮನೋರಂಜನೇಯ ಮೂಲಕ ಎಲ್ಲರ ಜೊತೆ ಕೂಡಿಕೊಂಡು ನಾನು ಯಾರಿಗೂ ಕಡಿಮೆ ಇಲ್ಲ ಎನ್ನುವ ಭಾವನೆಯನ್ನು ಹೊಂದಿ ಸ್ಪರ್ಧೆ ಮಾಡುವ ಕಾರ್ಯಕ್ರಮ ಇದಾಗಿದೆ ಎಂದರು. .ಶಿಕ್ಷಕರಾದ ನಾವು ಎಲ್ಲ ಮಕ್ಕಳ ಸಮಾನವಾಗಿ ನೋಡಿಕೊಂಡು ಪ್ರತಿಯೊಂದು ಮಗು ಕಲಿಕೆಯಲ್ಲಿ ಪ್ರಗತಿ ಹೊಂದುವಂತೆ ಮಾಡುವುದು ನಮ್ಮೆಲ್ಲರ ಹೊಣೆ ಎಂದು ಹೇಳಿದರು. ಮುಖ್ಯ ಗುರುಗಳು ಹಾಗೂ ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷರಾದ ರಾಜಪ್ಪ ನೊಂದಡೆ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಸಿಆರ್‌ಪಿ ಮಾರುತಿ ಬೇಂದ್ರೆ ಸ್ವಾಗತಿಸಿ ಪ್ರಾಸ್ತಾವಿಕ ಮಾತನಾಡಿದರು, ಈ ಸಂದರ್ಭದಲ್ಲಿ ಗ್ರಾಮ ಪಂಚಾಯತ ಅಧ್ಯಕ್ಷೆ ದೀಪಾರಾಣಿ ಡಾ.ಧರ್ಮೇಂದ್ರ ಬೋಸ್ಲೆ, ಕರ್ನಾಟಕ ರಾಜ್ಯ ಎಸ್ಸಿ ಎಸ್ಟಿ ಪ್ರಾಥಮಿಕ ಶಾಲಾ ಶಿಕ್ಷಕರ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷರಾದ ಡಾ.ಧರ್ಮೇಂದ್ರಬೋಸ್ಲೆ, ಶಿಕ್ಷಣ ಸಂಯೋಜಕರಾದ ಶಿವರಾಜ್ ಕನಕಟ್ಟೆ, ಸಿಆರ್‌ಪಿಯಾದ ವೆಂಕಟ್ ಕುಮಾರ ಕುಂಬಾರ, ರಾಜ್ಯ ಪರಿಷತ್ ಸದಸ್ಯರಾದ ಭೀಮಶಂಕರ ಆದೇಪ್ಪಾ, ಸಾವಿತ್ರಿಬಾಯಿ ಫುಲೆ ಶಿಕ್ಷಕರ ಸಂಘದ ಗೌರವಾಧ್ಯಕ್ಷರಾದ ಕವಿತಾ ಮಡಿವಾಳ, ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಉಪಾಧ್ಯಕ್ಷರಾದ ಡಿಸಿ ಪಾಟೀಲ, ಕೋಶಾಧ್ಯಕ್ಷರಾದ ಶಕುಂತಲಾ ಆದೆಪ್ಪ, ಕ್ಲಸ್ಟರನ ಮುಖ್ಯ ಗುರುಗಳು, ಶಿಕ್ಷಕರು ಮಕ್ಕಳು ಸೇರಿದಂತೆ ಅನೇಕರು ಉಪಸ್ಥಿತರಿದ್ದರು. ಸಹ ಶಿಕ್ಷಕರಾದ ಮಲ್ಲಿನಾಥ ನಿರೂಪಿಸಿ ವಂದಿಸಿದರು.



ಬಸವಕಲ್ಯಾಣ :- ಕರ್ನಾಟಕ ರಾಜ್ಯ ಗ್ರಾಮೀಣ ಶಿಕ್ಷಕರ ಸಂಘ ರಾಜ್ಯ ಘಟಕ ಹುಬ್ಬಳ್ಳಿ ವತಿಯಿಂದ ರಾಜ್ಯ ಮಟ್ಟದ ಗ್ರಾಮೀಣ ಶಿಕ್ಷಕ ರತ್ನ ಪ್ರಶಸ್ತಿ ಪುರಸ್ಕೃತರಾದ ಶ್ರೀ ಸಂಜೀವಕುಮಾರ ಮೇಹಕರೆ ಸಹ ಶಿಕ್ಷಕರು ಸರಕಾರಿ ಕಿರಿಯ ಪ್ರಾಥಮಿಕ ಶಾಲೆ ಲಿಂಬಾಪೂರ ಅವರಿಗೆ *ಹುಲಸೂರ ಶ್ರೀ ಗುರು ಬಸವೇಶ್ವರ ಸಂಸ್ಥಾನ ಮಠಕ್ಕೆ ಆಹ್ವಾನಿಸಿ ಪೂಜ್ಯ ಶ್ರೀ ಮ.ನಿ.ಪ್ರ. ಡಾ. ಶಿವಾನಂದ ಮಹಾಸ್ವಾಮಿಜಿ ಅವರು ಸನ್ಮಾನಿಸಿದರು.

ಈ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ಸರಕಾರಿ ನೌಕರರ ಸಂಘದ ರಾಜ್ಯ ಪರಿಷತ್ ಸದಸ್ಯರಾದ ಭೀಮಾಶಂಕರ ಆದೆಪ್ಪ, ಸಹ ಶಿಕ್ಷಕರಾದ ದೇವಾನಂದ ನಂಜವಾಡೆ, ಶಿವರಾಜ ಸ್ವಾಮಿ, ವಿಜಯಕುಮಾರ ಮೆಹಕರೆ, ಸುರೇಶ ಚಿಂಚೋಳಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು. (ಮಲ್ಲಮ್ಮ ನುಡಿ ಚಿತ್ರ)

## ಅಮೃತ ಶಿಲಾ ಮೂರ್ತಿಯ ಪ್ರತಿಷ್ಠಾಪನಾ ಕಾರ್ಯಕ್ರಮ



ಮಲ್ಲಮ್ಮ ನುಡಿ ವಾರ್ತೆ

ತಾಳಿಕೋಟಿ: ತಾಲೂಕಿನ ಕಲಿಕೇರಿ ಗ್ರಾಮದ ಶ್ರೀ ಗುರು ಮರುಳಾರಾಧ್ಯ ಸಂಸ್ಥಾನ ಹಿರೇಮಠದ ಲಿಂ.ಶ್ರೀ ಷ.ಬ್ರ. ಬಸವಲಿಂಗ ಮರುಳಾಸಿದ್ಧ ಶಿವಾಚಾರ್ಯರ ಅಮೃತ ಶಿಲಾ ಮೂರ್ತಿಯ ಪ್ರತಿಷ್ಠಾಪನೆ ಹಾಗೂ ಎರಡನೇ ವರ್ಷದ ಪುಣ್ಯಸ್ಮರಣೋತ್ಸವ ಅಂಗವಾಗಿ ವಿವಿಧ ಕಾರ್ಯಕ್ರಮಗಳು ಜರುಗಲಿವೆ. ಮಾರ್ಚ್ 12ರಂದು ಬುಧವಾರ ಸಂಜೆ 7 ಗಂ- ಟೆಗೆ ಶ್ರೀ ರೇಣುಕಾಚಾರ್ಯರ ಜಯಂತಿ ಆಚರಣೆ, ಮಾರ್ಚ್ 16ರಂದು ಅಮೃತ ಶಿಲಾ ಮೂರ್ತಿಯ ಪುರ ಪ್ರವೇಶ ಗಂಗಸ್ಥಳದೊಂದಿಗೆ ಶ್ರೀ ಮಠಕ್ಕೆ ತಲುಪುವುದು. ಮಾರ್ಚ್ 18ರಂದು ಬೊಮ್ಮಗುಡ್ಡ ಭಕ್ತರಿಂದ ಶ್ರೀಗಳಿಗೆ ತುಲಾಭಾರ, ಮಾರ್ಚ್ 19ರಂದು ಬಾಳೆಹೊನ್ನೂರಿನ ರಂಭಾಪುರಿ ಜಗದ್ಗುರುಗಳ ಶುಭಾಗಮನ, ಪುರಾಣ ಮಹಾಮಂಗಲ ಹಾಗೂ ಜನಜಾಗೃತಿ ಧರ್ಮ ಸಮಾರಂಭ ನಡೆಯಲಿದೆ. ಮಾರ್ಚ್ 20 ರಂದು ಪ.ಪೂ.ಲಿಂ.ಶ್ರೀ ಷ.ಬ್ರ. ಬಸವಲಿಂಗ ಮರುಳಾಸಿದ್ಧ ಶಿವಾಚಾರ್ಯರ ಅಮೃತಶಿಲಾ ಮೂರ್ತಿಯ ಪ್ರತಿಷ್ಠಾಪನೆ ಶಿವ ದೀಕ್ಷಾ ಹಾಗೂ ಅಯ್ಯಾಚಾರ ಕಾರ್ಯಕ್ರಮಗಳು ನಡೆಯುವವು. ಈ ಎಲ್ಲ ಧಾರ್ಮಿಕ ಕಾರ್ಯಕ್ರಮಗಳಲ್ಲಿ ಭಕ್ತರು ಅಪಾರ ಸಂಖ್ಯಾಯಲ್ಲಿ ಭಾಗವಹಿಸಬೇಕೆಂದು ಶ್ರೀ ಸಿದ್ಧರಾಮ ಶಿವಾಚಾರ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮಹಾನಗರ ಪಾಲಿಕೆಯಿಂದ ಬೀದರ್
# ಅಭಿವೃದ್ಧಿಗೆ ಹೆಚ್ಚು ಅನುದಾನ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಮಾ. 06 : ಬೀದರ್ ನಗರಸಭೆ ಮಹಾನಗರ ಪಾಲಿಕೆಯಾಗಿ ಮೇಲ್ದರ್ಜೆಗೇರಲಿರುವುದರಿಂದ ನಗರದಅಭಿವೃದ್ಧಿಗೆಸರ್ಕಾರದಿಂದ ಹೆಚ್ಚು ಅನುದಾನ ಲಭಿಸಲಿದೆ ಎಂದು ಪೌರಾಡಳಿತ ಹಾಗೂ ಹಜ್ ಸಚಿವ ರಹೀಂಖಾನ್ ಹೇಳಿದರು.

ನಗರದ ಬಿಲಾಲ್ ಕಾಲೊನಿಯ ಜಾಸ್ಮಿನ್ ಎಜುಕೇಷನ್ ಟ್ರಸ್ಟ್‌ಸಂಚಾಲಿತ ಜಾಸ್ಮಿನ್ ಪ್ರಾಥಮಿಕ ಹಾಗೂ ಪ್ರೌಢಶಾಲೆಯಲ್ಲಿ ಈಚೆಗೆ ನಡೆದ 13ನೇ ವಾರ್ಷಿಕೋತ್ಸವ ಸಮಾರಂಭದಲ್ಲಿ ಅವರು ಮಾತನಾಡಿದರು.

ಸದ್ಯ ಬೀದರ್ ನಗರಸಭೆಗೆ ರೂ. 10 ಕೋಟಿ ಅನುದಾನ ದೊರೆಯುತ್ತಿದ್ದು, ಮಹಾನಗರ ಪಾಲಿಕೆಯಾದ ನಂತರ ರೂ. 100 ಕೋಟಿ ಸಿಗಲಿದೆ. ಇದರಿಂದ ನಗರದಲ್ಲಿ ರಸ್ತೆ, ಚರಂಡಿ, ದಾರಿದೀಪ ಸೇರಿದಂತೆ ಹೆಚ್ಚಿನ ಅಭಿವೃದ್ಧಿ ಕಾರ್ಯಗಳು ಆಗಲಿವೆ ಎಂದು ತಿಳಿಸಿದರು.

ಪ್ರೀತಿ, ವಿಶ್ವಾಸ, ಸೌಹಾರ್ದದ ವಾತಾವರಣದಿಂದ ಹೆಚ್ಚಿನ ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳಬಹುದು ಎಂಬುದು ನನ್ನ ಅಭಿಪ್ರಾಯ. ನನ್ನ ಅಧಿಕಾರ ಅವಧಿಯಲ್ಲಿ ಈ ದಿಸೆಯಲ್ಲೇ ಕಾರ್ಯ ನಿರ್ವಹಿಸಿದ್ದೇನೆ. ಬೀದರ್ ಕ್ಷೇತ್ರದ ಸಮಗ್ರ ಅಭಿವೃದ್ಧಿಗೆ ಬದ್ಧನಾಗಿರುವೆ ಎಂದು ಹೇಳಿದರು.

ಪಾಲಕರು ಮಕ್ಕಳ ಬಗ್ಗೆ ಸಾಕಷ್ಟು ಕನಸು ಕಂಡಿರುತ್ತಾರೆ. ಅವರಿಗಾಗಿ ಪರಿಶ್ರಮ ಪಡುತ್ತಾರೆ. ಮಕ್ಕಳು ಪಾಲಕರ ನಿರೀಕ್ಷೆಗಳನ್ನು ಹುಸಿಗೊಳಿಸಬಾರದು ಎಂದು ತಿಳಿಸಿದರು.

ಆಧುನಿಕ ಕಲಿಕಾ ಸೌಕರ್ಯಗಳನ್ನು ಹೊಂದಿರುವ ಜಾಸ್ಮಿನ್ ಶಾಲೆ ಕಡಿಮೆ ಶುಲ್ಕದಲ್ಲಿ ಮಕ್ಕಳಿಗೆ ಗುಣಮಟ್ಟದ ಹಾಗೂ ಸ್ಪರ್ಧಾತ್ಮಕ ಶಿಕ್ಷಣ ನೀಡುತ್ತಿರುವುದು ಶ್ಲಾಘನೀಯ ಎಂದರು.

ಸೇಂಟ್ ಪೌಲ್ ಮೆಥೋಡಿಸ್ಟ್ ಚರ್ಚನ ಜಿಲ್ಲಾ ಮೇಲ್ವಿಚಾರಕ ನೆಲ್ಸನ್ ಸುಮಿತ್ರಾ, ಬೀದರ್ ವಿಶ್ವವಿದ್ಯಾಲಯದ ಕುಲಸಚಿವ ಪರಮೇಶ್ವರ್ ನಾಯ್ಕ್, ಸುವರ್ಣ ಕನಸ್ಟ್ರಕ್ಷನ್ಸ್ ಮುಖ್ಯಸ್ಥ ವೀರಶೆಟ್ಟಿ ಮಣಗೆ ಮಾತನಾಡಿದರು.

ವಿದ್ಯಾರ್ಥಿಗಳಿಂದ ನಡೆದ ನೃತ್ಯ, ಗಾಯನ, ರೂಪಕ ಸೇರಿದಂತೆ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು ಸಭಿಕರನ್ನು ರಂಜಿಸಿದವು.

ಜಾಸ್ಮಿನ್ ಎಜುಕೇಷನ್ ಟ್ರಸ್ಟ್ ಅಧ್ಯಕ್ಷ ಅಜೀಜ್ ಖಾನ್ ಅಧ್ಯಕ್ಷತೆ ವಹಿಸಿದ್ದರು. ನಗರಸಭೆ ಸದಸ್ಯ ಸೈಮನ್ ಜೋಶ್ವಾ, ಕಾಂಗ್ರೆಸ್ ನಗರ ಘಟಕದ ಅಧ್ಯಕ್ಷ ಮಹಮ್ಮದ್ ಯುಸೂಫ್ ಮತ್ತಿತರರು ಇದ್ದರು.

## ಮಹಿಳಾ ನೌಕರರಿಗೆ ಕ್ರೀಡಾ ಸ್ಪರ್ಧೆ ೯ ರಂದು

ಮಲ್ಲಮ್ಮ ನುಡಿ ವಾರ್ತೆ

ಬೀದರ. ಮಾ. 06 : ಅಂತರರಾಷ್ಟ್ರೀಯ ಮಹಿಳಾ ದಿನಾಚರಣೆ ಅಂಗವಾಗಿ ನಗರದ ಪ್ರತಾಪನಗರದ ರಾಜ್ಯ ಸರ್ಕಾರಿ ನೌಕರರ ಸಮುದಾಯ ಭವನದಲ್ಲಿ ಮಾರ್ಚ್ 9 ರಂದು ಬೆಳಿಗ್ಗೆ 10ಕ್ಕೆ ಮಹಿಳಾ ಸರ್ಕಾರಿ ನೌಕರರಿಗೆ ವಿವಿಧ ಕ್ರೀಡಾ ಸ್ಪರ್ಧೆಗಳನ್ನು ಹಮ್ಮಿಕೊಳ್ಳಲಾಗಿದೆ ಎಂದು



ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾ ಘಟಕದ ಅಧ್ಯಕ್ಷ ಸೋಮಶೇಖರ ಬಿರಾದಾರ ತಿಳಿಸಿದ್ದಾರೆ.

ರಂಗೋಲಿ, ಕುರ್ಚಿ ಆಟ, ನಿಂಬೆ–ಚಮಚ ಆಟ, ಹಗ್ಗ ಜಗ್ಗಾಟ ಮತ್ತಿತರ ಸ್ಪರ್ಧೆಗಳು ನಡೆಯಲಿವೆ ಎಂದು ಹೇಳಿದ್ದಾರೆ.

ಆಸಕ್ತ ಮಹಿಳಾ ನೌಕರರು ಸಮುದಾಯ ಭವನಕ್ಕೆ ನಿಗದಿತ ಸಮಯಕ್ಕಿಂತ ಮುಂಚೆ ಆಗಮಿಸಿ, ಹೆಸರು ನೋಂದಾಯಿಸಿ ಕ್ರೀಡಾ ಸ್ಪರ್ಧೆಗಳಲ್ಲಿ ಪಾಲ್ಗೊಳ್ಳಬಹುದು ಎಂದು ತಿಳಿಸಿದ್ದಾರೆ.

## ಉಪ್ಪಾರ ನಿಗಮಕ್ಕೆ ಅಧ್ಯಕ್ಷರ ನೇಮಿಸಿ

ಮಲ್ಲಮ್ಮನುಡಿವಾರ್ತೆಬೀದರ. ಮಾ. 06 : ಕರ್ನಾಟಕ ಉಪ್ಪಾರ ಅಭಿವೃದ್ಧಿ ನಿಗಮಕ್ಕೆ ಕೂಡಲೇ ಹೊಸ ಅಧ್ಯಕ್ಷರನ್ನು ನೇಮಕ ಮಾಡಬೇಕು ಎಂದು ಜಿಲ್ಲಾ ಉಪ್ಪಾರ ಸಮಾಜದ ಅಧ್ಯಕ್ಷ ತಾನಾಜಿ ಸಗರ್ ಆಗ್ರಹಿಸಿದ್ದಾರೆ.

ಹಿಂದಿನ ಸರ್ಕಾರದ ಅವಧಿಯಲ್ಲಿ ನಿಗಮಕ್ಕೆ ಅಧ್ಯಕ್ಷರನ್ನು ನೇಮಕ ಮಾಡಲಾಗಿತ್ತು. ಈಗಿನ ಸರ್ಕಾರ ಅಧಿಕಾರಕ್ಕೆ ಬಂದು 20 ತಿಂಗಳಾದರೂ ನಿಗಮಕ್ಕೆ



ಅಧ್ಯಕ್ಷರನ್ನು ನೇಮಿಸಿಲ್ಲ. ಹೀಗಾಗಿ ಸಮಾಜದ ಹಿತಕ್ಕೆ ಪೂರಕ ಯೋಜನೆಗಳ ಅನುಷ್ಠಾನ ಹಾಗೂ ಇತರ ಅಭಿವೃದ್ಧಿ ಕಾರ್ಯಗಳಿಗೆ ಹಿನ್ನಡೆಯಾಗುತ್ತಿದೆ ಎಂದು ಬೇಸರ ವ್ಯಕ್ತಪಡಿಸಿದ್ದಾರೆ.

ರಾಜ್ಯ ಸರ್ಕಾರ ನಿಗಮಕ್ಕೆ ನಿರೀಕ್ಷಿತ ಅನುದಾನ ಒದಗಿಸದಿರುವುದರಿಂದ ಸಮಾಜಕ್ಕೆ ಹೆಚ್ಚಿನ ಸೌಲಭ್ಯಗಳು ಸಿಗುತ್ತಿಲ್ಲ. ಕೂಡಲೇ ನಿಗಮಕ್ಕೆ ಅಧ್ಯಕ್ಷರನ್ನು ನೇಮಿಸಿ, ಹೆಚ್ಚಿನ ಅನುದಾನ ಕಲ್ಪಿಸಬೇಕು ಎಂದು ಬೇಡಿಕೆ ಮಂಡಿಸಿದ್ದಾರೆ.

## ಮಕ್ಕಳನ್ನು ಮೊಬೈಲ್‌ದಿಂದ ದೂರವಿಡಿ : ರೇಷ್ಮಾ ಕೌರ್



ಬೀದರ. ಮಾ. 06 : ಮಕ್ಕಳಲ್ಲಿ ಮಾನವೀಯ, ನೈತಿಕ ಮೌಲ್ಯಗಳನ್ನು ಬೆಳೆಸಬೇಕು ಎಂದು ಗುರುನಾನಕ್ ಶಿಕ್ಷಣ ಸಂಸ್ಥೆಗಳ ಸಮೂಹದ ಉಪಾಧ್ಯಕ್ಷೆ ಡಾ॥ ರೇಷ್ಮಾ ಕೌರ್ ಇಲ್ಲಿ ಸಲಹೆ ನೀಡಿದರು. ನಗರದ ನೆಹರು ಕ್ರೀಡಾಂಗಣ ಬಳಿ ಇರುವ ಗುರುನಾನಕ್ ಪಬ್ಲಿಕ್ ಶಾಲೆಯ ಆವರಣದಲ್ಲಿ ಗುರುವಾರ ಪೂರ್ವ ಪ್ರಾಥಮಿಕ ಶಾಲಾ ಮಕ್ಕಳಿಗಾಗಿ ನಡೆದ 'ಪದವಿ ದಿನ' ಸಮಾರಂಭದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಮಕ್ಕಳನ್ನು ಮೊಬೈಲ್‌ನಿಂದ ದೂರ ಇಡಬೇಕು. ಮೊಬೈಲ್ ಮಕ್ಕಳ ಕಲಿಕೆ ಮೇಲೆ, ಸ್ವಭಾವದ ಮೇಲೆ ಪರಿಣಾಮ ಬೀರುತ್ತಿದೆ ಎಂದು ಎಚ್ಚರಿಸಿದರು.

ಮಕ್ಕಳ ಬೆಳವಣಿಗೆಯಲ್ಲಿ ಪಾಲಕರ ಪಾತ್ರ ಹಿರಿದಾಗಿದೆ. ಮಕ್ಕಳಿಗೆ ಮಾದರಿಯಾಗುವ ರೀತಿಯಲ್ಲಿ ಪಾಲಕರು ನಡೆದುಕೊಳ್ಳಬೇಕು ಎಂದು ಅವರು ಕಿವಿಮಾತು ಹೇಳಿದರು. ಪದವಿ ದಿನ ಸಮಾರಂಭದಲ್ಲಿ ಪಾಲಕರು, ಮಕ್ಕಳು ಪಾಲ್ಗೊಂಡು ಸಂಭ್ರಮ ಹೆಚ್ಚಿಸಿದ್ದಾರೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು. ವಿವಿಧ ಚಟುವಟಿಕೆಯಲ್ಲಿ ಭಾಗವಹಿಸಿ ವಿಜೇತರಾದ ಮಕ್ಕಳಿಗೆ ಮೆಡಲ್ ಮತ್ತು ಪ್ರಮಾಣ ಪತ್ರ ನೀಡಿ ಗೌರವಿಸಿದರು.

ಬೀದರಿನ ಕೆನರಾ ಬ್ಯಾಂಕ್ ವ್ಯವಸ್ಥಾಪಕರು ಶ್ರೀಮತಿ ರೋಹಣಿ ಮೇಶ್ರಾಮ ಅವರು ಮುಖ್ಯ ಅತಿಥಿಯಾಗಿ ಭಾಗವಹಿಸಿ ಮಕ್ಕಳಿಗೆ ಮೆಡಲ್ ಮತ್ತು ಪ್ರಮಾಣ ಪತ್ರ ವಿತರಣೆ ಮಾಡಿದರು. ಅವರು ಮುಂದುವರೆದು ಮಾತನಾಡುತ್ತ ಗುರು ನಾನಕ ಶಾಲೆಯಲ್ಲಿ ಕಲಿತ ವಿದ್ಯಾರ್ಥಿಗಳು ನಾನು ನೋಡಿದ ಹಾಗೆ ದೇಶ–ವಿದೇಶದಲ್ಲಿ ಹೆಸರು ಮಾಡುತ್ತಿದ್ದಾರೆ. ಸತತ 50 ವರ್ಷದಿಂದ ಶಿಕ್ಷಣ ಕ್ಷೇತ್ರದಲ್ಲಿ ಸೇವೆ ಸಲ್ಲಿಸುತ್ತಿದ್ದಾರೆ. ಈ ಸುವರ್ಣ ಮಹೋತ್ಸವಕ್ಕೆ ನಾನು ತುಂಬ ಹೃತ್ಪೂರ್ವಕ ಅಭಿನಂದನೆ ಸಲ್ಲಿಸುತ್ತೇನೆ ಎಂದುರು.

ಈ ಸಂದರ್ಭದಲ್ಲಿ ಮುಖ್ಯೋಪಾಧ್ಯಾಯಿನಿ ಶ್ರೀಮತಿ ಆರಿಫ್ ಹಾದಿ, ಡೀನರಾದ ಹನಮಾನ, ಪ್ರಾಂಶುಪಾಲರಾದ ನಾಳಿಣಿ ಡಿ.ಜಿ., ಶೇಖ್ ಅಮಜದ ಅಲಿ ಮತ್ತು ಶಿಕ್ಷಕವೃಂದ್ದ ಉಪಸ್ಥಿತರಿದ್ದರು.

# 12ಕ್ಕೆ ಜಗದ್ಗುರು ರೇಣುಕಾಚಾರ್ಯರ ಜಯಂತ್ಯುತ್ಸವ ಸ್ವಾಗತ ಸಮಿತಿ ಅಧ್ಯಕ್ಷರಾಗಿ ಡಾ. ಶೈಲೇಂದ್ರ ಬೆಲ್ದಾಳೆ

ಮಲ್ಲಮ್ಮ ನುಡಿ ವಾರ್ತೆ

ಬೀದರ. ಮಾ. 06 : ಜಿಲ್ಲಾ ಆಡಳಿತ ಹಾಗೂ ಶ್ರೀ ಜಗದ್ಗುರು ರೇಣುಕಾಚಾರ್ಯ ಜಯಂತ್ಯುತ್ಸವ ಆಚರಣೆ ಸಮಿತಿ ವತಿಯಿಂದ ನಗರದಲ್ಲಿ ಮಾ. 12 ರಂದು ನಡೆಯಲಿರುವ ರೇಣುಕಾಚಾರ್ಯರ ಜಯಂತ್ಯುತ್ಸವದ ಸ್ವಾಗತ ಸಮಿತಿ ಹಾಗೂ ವಿವಿಧ ಉಪ ಸಮಿತಿಗಳ ಪದಾಧಿಕಾರಿಗಳನ್ನು ಆಯ್ಕೆ ಮಾಡಲಾಗಿದೆ. ನಗರದಲ್ಲಿ ನಡೆದ ಶ್ರೀ ಜಗದ್ಗುರು ರೇಣುಕಾಚಾರ್ಯ ಜಯಂತ್ಯುತ್ಸವ ಆಚರಣೆ ಸಮಿತಿಯ ಸಭೆಯಲ್ಲಿ ಪದಾಧಿಕಾರಿಗಳನ್ನು ಆಯ್ಕೆ ಮಾಡಲಾಯಿತು. ಸ್ವಾಗತ ಸಮಿತಿ: ಡಾ. ಶೈಲೇಂದ್ರ ಬೆಲ್ದಾಳೆ (ಅಧ್ಯಕ್ಷ), ಶಿವಶರಣಪ್ಪ ವಾಲಿ, ಅರವಿಂದಕುಮಾರ ಅರಳಿ, ಸೂರ್ಯಕಾಂತ ನಾಗಮಾರಪಳ್ಳಿ, ವೈಜಿನಾಥ ಕಮಠಾಣೆ, ರಾಮಕೃಷ್ಣನ್ ಸಾಳೆ, ಈಶ್ವರಸಿಂಗ್ ಠಾಕೂರ್, ಬಿ.ಜಿ. ಶೆಟಕಾರ್, ಸೋಮಶೇಖರ ಪಾಟೀಲ, ಬಸವರಾಜ ಬುಳ್ಳಾ, ಕುಶಾಲರಾವ್ ಪಾಟೀಲ ಖಾಜಾಪುರ, ರಾಜು ಕಡ್ಯಾಳ್ (ಸಲಹೆಗಾರರು), ಸಿದ್ರಾಮಯ್ಯ ಸ್ವಾಮಿ (ಕಾರ್ಯಾಧ್ಯಕ್ಷ), ಡಾ. ರಜನೀಶ್ ವಾಲಿ, ರವೀಂದ್ರ ಸ್ವಾಮಿ, ಚಂದ್ರಶೇಖರ ಪಾಟೀಲ



ಸಪ್ನಾ, ಗುರುರಾಜ ಸ್ವಾಮಿ ಮೋಳಕೇರಿ, ಸಂತೋಷ್ ತಾಳಂಪಳ್ಳಿ (ಉಪಾಧ್ಯಕ್ಷರು), ಶಿವಯ್ಯ ಸ್ವಾಮಿ ಕಮಠಾಣ (ಪ್ರಧಾನ ಕಾರ್ಯದರ್ಶಿ), ವರದಯ್ಯಸ್ವಾಮಿ ಗಾದಗಿ, ಮಹೇಶ ಪಾಟೀಲ (ಕಾರ್ಯದರ್ಶಿ), ರೇವಣಸಿದ್ದಪ್ಪ ಜಲಾದೆ, ಜಗನ್ನಾಥ ಜಮಾದಾರ್, ಬಾಬುರಾವ್ ಮಲ್ಕಾಪುರ, ಶಿವಕುಮಾರ ಸ್ವಾಮಿ ಬಂಬಳಗಿ, ಮಹೇಶ ಚಿಂತಾಮಣಿ, ಗುಣವಂತರಾವ್ ಸಿಂಧೆ, ಸುರೇಶ ಟಾಕಳೆ, ದಿಗಂಬರ ಮಡಿವಾಳ, ಸಂತೋಷ್ ಪಾಟೀಲ ಅಯಾಸಪುರ (ಜಂಟಿ ಕಾರ್ಯದರ್ಶಿ), ರೇವಣಸಿದ್ದಯ್ಯ ಸ್ವಾಮಿ (ಖಜಾಂಚಿ), ಶಿವಕುಮಾರ ಶೆಟಕಾರ್, ರಾಜಕುಮಾರ ಮೆಟಕಾರಿ, ಕಂಟೆಪ್ಪ ಭಂಗೂರೆ, ಶಿವಕುಮಾರ ಹಿರೇಮಠ ಆಣದೂರ, ಶಂಕರ ರೆಡ್ಡಿ, ಸಿದ್ದು ಫುಲಾರಿ, ವಿಠ್ಠಲ ಕುಂಬಾರ, ಶಿವಕುಮಾರ ಶೀಲವಂತ, ಬಸವರಾಜ ಶೀಲವಂತ, ವಿದ್ಯಾವಾನ್ ಪಾಟೀಲ, ರೇವಪ್ಪ ರೆಡ್ಡಿ, ಬಸವರಾಜ ಪವಾರ್, ಈಶ್ವರ ಕನೇರಿ, ನಂದಕಿಶೋರ ವರ್ಮಾ, ರೌಫೊದ್ದಿನ್ ಕಚೇರಿವಾಲೆ, ರಮೇಶ ಕುಲಕರ್ಣಿ, ದತ್ತು ವಾಸವಿ, ಅಶೋಕ ರೇಜಂತಲ್, ಬಾಪುರಾವ್ ದೇಶಮುಖ, ಬಸವರಾಜ ಸ್ವಾಮಿ, ಶಿವಕುಮಾರ ಸ್ವಾಮಿ ಗುಳ್ಳೇದಮಠ, ಮಲ್ಲಿಕಾರ್ಜುನ ಗಚ್ಚಿನಮಠ, ಮಾಣಿಕಯಾಬಾ, ರಮೇಶ ಮಾಶೆಟ್ಟಿ (ಖಜಾಂಚಿ).

ಮೆರವಣಿಗೆ ಸಮಿತಿ: ತರುಣ್ ನಾಗಮಾರಪಳ್ಳಿ (ಗೌರವಾಧ್ಯಕ್ಷ), ಮಹೇಶ್ವರ ಸ್ವಾಮಿ (ಅಧ್ಯಕ್ಷ), ಸಂಗಮೇಶ ಮೂಲಗೆ (ಉಪಾಧ್ಯಕ್ಷ), ಶ್ರೀಕಾಂತ ಸ್ವಾಮಿ (ಪ್ರಧಾನ ಕಾರ್ಯದರ್ಶಿ), ಸಚಿನ್ ಪಾಟೀಲ (ಕಾರ್ಯದರ್ಶಿ), ಅಂಬರೀಷ್ ಬಟನಾಪುರೆ (ಜಂಟಿ ಕಾರ್ಯದರ್ಶಿ), ಬಸವ ಮೂಲಗೆ (ಖಜಾಂಚಿ), ಗಿರೀಶ್ ಬಿರಾದಾರ, ಆಕಾಶ ರಾಜಗೀರಾ, ಮಲ್ಲಿಕಾರ್ಜುನ ಜನಕಟ್ಟಿ, ಸಂತೋಷ್ ನೀಲಾ, ರವಿ ಪಾಟೀಲ, ಪ್ರಭು ತರನಳ್ಳಿ, ರಾಜಕಮಾರ ಬುಧೇರಾ, ಪ್ರಶಾಂತ ಶೆರಗಾರ್, ಅಮರ ಚಾಂಬೋಳ್, ಶಿವಕುಮಾರ ಪಾಟೀಲ, ವಿಶ್ವನಾಥ ದಾನಿ, ಚಂದ್ರಕಾಂತ ಪಾಟೀಲ, ರಮೇಶ ಗಾದಗಿ (ಸದಸ್ಯರು).

ಮಹಿಳಾ ಸಮಿತಿ: ಸರಸ್ವತಿ ವೀರಶೆಟ್ಟಿ ಗೌರಶೆಟ್ಟಿ (ಗೌರವಾಧ್ಯಕ್ಷೆ), ಕಾವೇರಿ ಸ್ವಾಮಿ (ಅಧ್ಯಕ್ಷೆ), ಲಕ್ಷ್ಮಿ ಆಲೂರೆ (ಉಪಾಧ್ಯಕ್ಷೆ), ಸೌಭಾಗ್ಯವತಿ ಬಿರಾದಾರ (ಪ್ರಧಾನ ಕಾರ್ಯದರ್ಶಿ), ಸಂಗೀತ ಸ್ವಾಮಿ (ಕಾರ್ಯದರ್ಶಿ), ಕವಿತಾ ಸ್ವಾಮಿ ಮನ್ನಳ್ಳಿ (ಜಂಟಿ ಕಾರ್ಯದರ್ಶಿ), ಕೃಪಾವತಿ ಸ್ವಾಮಿ (ಖಜಾಂಚಿ), ಶ್ರೀದೇವಿ ಸ್ವಾಮಿ, ಶಾಂತಾ ಸ್ವಾಮಿ ನೌಬಾದ್ (ಸದಸ್ಯರು).

ಸಾಂಸ್ಕೃತಿಕ ಸಮಿತಿ: ಅಶ್ವಿನಿ ರಾಜಕುಮಾರ ಬಂಪಳ್ಳಿ (ಅಧ್ಯಕ್ಷೆ), ರಾಣಿ ಸತ್ಯಮೂರ್ತಿ (ಉಪಾಧ್ಯಕ್ಷೆ).

ಪೂಜೆ/ವೇದಘೋಷ ಸಮಿತಿ: ಗಂಗಾಧರ ಶಾಸ್ತ್ರಿ ಬಾಳೂರ (ಅಧ್ಯಕ್ಷ), ಗಂಗಾಧರ ಶಾಸ್ತ್ರಿ ಧನ್ನೂರ (ಉಪಾಧ್ಯಕ್ಷ), ಸಿದ್ಧಲಿಂಗೇಶ ಸ್ವಾಮಿ (ಓಂ ನಮಃ ಶಿವಾಯಃ) (ಪ್ರಧಾನ ಕಾರ್ಯದರ್ಶಿ), ಶಿವಶಂರಸ್ವಾಮಿ ಲಾಡಗೇರಿ (ಕಾರ್ಯದರ್ಶಿ), ಬಸಯ್ಯ ಸ್ವಾಮಿ ಚಿದ್ರಿಮಠ ಜನವಾಡ, ಬಸವರಾಜ ಹಳ್ಳಿ ಧನ್ನೂರ (ಜಂಟಿ ಕಾರ್ಯದರ್ಶಿ).

ಪ್ರಸಾದ ನಿರ್ವಹಣಾ ಸಮಿತಿ: ಓಂಪ್ರಕಾಶ ರೊಟ್ಟೆ (ಅಧ್ಯಕ್ಷ), ಜಗದೇಶ್ವರ ಬಿರಾದಾರ (ಉಪಾಧ್ಯಕ್ಷ), ನಾಗಯ್ಯ ಸ್ವಾಮಿ ಕಮಠಾಣ (ಪ್ರಧಾನ ಕಾರ್ಯದರ್ಶಿ), ಸಂಜುಕುಮಾರ ಸ್ವಾಮಿ ಕಮಠಾಣ (ಕಾರ್ಯದರ್ಶಿ), ರೇವಣಯ್ಯಸ್ವಾಮಿ ಹೊನ್ನಿಕೇರಿ, ಸಚಿ???ಕುಮಾರ ಸ್ವಾಮಿ (ಜಂಟಿ ಕಾರ್ಯದರ್ಶಿ).

# ಅಧಿಕಾರಿಗಳ ವಿರುದ್ಧ ಗರಂ ಆದ ಮಹಿಳಾ ಆಯೋಗದ ಅಧ್ಯಕ್ಷೆ

ಮಲ್ಲಮ್ಮ ನುಡಿ ವಾರ್ತೆ

ಬೀದರ. ಮಾ. 06 : ಕರ್ನಾಟಕ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷೆ ನಾಗಲಕ್ಷ್ಮಿ ಚೌಧರಿ ಅವರು ಬುಧವಾರ ಪಟ್ಟಣದ ಗುಡಿಸಲುವಾಸಿಗಳನ್ನು ಭೇಟಿ ಮಾಡಿ ಅವರ ಸಮಸ್ಯೆ ಆಲಿಸಿದರು. ಈ ವೇಳೆ ಸಮಾಜ ಕಲ್ಯಾಣ ಇಲಾಖೆ ಸೇರಿದಂತೆ ಕೆಲ ಅಧಿಕಾರಿಗಳ ಅನುಪಸ್ಥಿತಿ ಕಂಡು ಗರಂ ಆದರು. ನಾನು ಬೆಂಗಳೂರಿನಿಂದ ಇಲ್ಲಿಗೆ ಬಂದಿದ್ದೇನೆ.

ಆದರೆ ಇಲ್ಲಿ ಸಮಾಜ ಕಲ್ಯಾಣ ಇಲಾಖೆ ಅಧಿಕಾರಿಗಳೇ ಇಲ್ಲ. ಎಲ್ಲಿ ಹೋಗಿದ್ದಾರೆ' ಅವರನ್ನು ಕರೆಸಿ ಎಂದು ಸಿಡಿಮಿಡಿಗೊಂಡರು.

'ಇದು ಹಿಂದುಳಿದ ತಾಲ್ಲೂಕು, ಇಲ್ಲಿಯ ಜನರ ಸಮಸ್ಯೆ ಪರಿಹರಿಸುವುದು ನಿಮ್ಮ ಜವಾಬ್ದಾರಿ. ಆದರೆ ನಿಮ್ಮ ಕಾರ್ಯವೈಖರಿ ನೋಡಿದರೆ



ನನಗೆ ನೋವಾಗುತ್ತದೆ' ಎಂದು ಮೇಲಾಧಿಕಾರಿಗಳಿಗೆ ಕರೆ ಮಾಡಿ ಅಸಮಾಧಾನ ವ್ಯಕ್ತಪಡಿಸಿದರು. ಈ ಗುಡಿಸಲುವಾಸಿಗಳಿಗೆ ಇಲ್ಲಿಯ ತನಕ ಏಕೆ ಮೂಲ ಸೌಲಭ್ಯ ಕಲ್ಪಿಸಿಲ್ಲ ಎಂದು ತರಾಟೆಗೆ ತೆಗೆದುಕೊಂಡರು.

'ಗುಡಿಸಲುವಾಸಿಗಳಿಗೆ ನಿವೇಶನ ಕಲ್ಪಿಸಲು 2018ರಲ್ಲಿ 2 ಎಕರೆ ಸರ್ಕಾರಿ ಜಮೀನು ಮಂಜೂರು ಮಾಡಲಾಗಿತ್ತು. ಆದರೆ ತಾಂತ್ರಿಕ ಕಾರಣದಿಂದ ಅದನ್ನು ವಾಪಸ್ ಪಡೆದು ಮತ್ತೆ ಸರ್ವೆ ನಂಬರ್ 205ರಲ್ಲಿ 2 ಎಕರೆ ಜಮೀನು ಮಂಜೂರು ಮಾಡಲಾಗಿದೆ' ಎಂದು ತಹಶೀಲ್ದಾರ್ ಮಲಶೆಟ್ಟಿ ಚಿದ್ರೆ ಮಹಿಳಾ ಆಯೋಗದ ಅಧ್ಯಕ್ಷರಿಗೆ ಮಾಹಿತಿ ನೀಡಿದರು.

'ನಾವು ಕಳೆದ 40 ವರ್ಷಗಳಿಂದ ಗುಡಿಸಲಿನಲ್ಲೇ ವಾಸ್ತವ್ಯ ಮಾಡುತ್ತಿದ್ದೇವೆ. ಆದರೆ, ನಮಗೆ ಇಲ್ಲಿಯ ತನಕ ಇರಲು ಒಂದು ಮನೆ ಕೊಟ್ಟಿಲ್ಲ' ಎಂದು ಗುಡಿಸಲುವಾಸಿ ಮಹಿಳೆಯರು ಗೋಳು ತೋಡಿಕೊಂಡರು.

ಸರ್ಕಾರಿ ಆಸ್ಪತ್ರೆ, ಪೊಲೀಸ್ ಠಾಣೆ, ಅಲ್ಪಸಂಖ್ಯಾತರ ಇಲಾಖೆಯ ಮೆಟ್ರಿಕ್ ನಂತರದ ವಸತಿ ನಿಲಯಕ್ಕೆ ಭೇಟಿ ನೀಡಿ ಪರಿಶೀಲಿಸಿದರು.

ನಿಮ್ಮ ಕಾರ್ಯವೈಖರಿ ಸುಧಾರಿಸಿಕೊಂಡು ಕೆಲಸ ಮಾಡಿ. ಇಲ್ಲವೇ ನಿಮ್ಮ ವಿರುದ್ಧ ದೂರು ಸಲ್ಲಿಸಬೇಕಾಗುತ್ತದೆ ಎಂದು ಅಧಿಕಾರಿಗಳಿಗೆ ಎಚ್ಚರಿಕೆ ನೀಡಿದರು.

ತಾ.ಪಂ ಇಒ ಮಾಣಿಕರಾವ ಪಾಟೀಲ್, ಸಹಾಯಯಕ ನಿರ್ದೇಸಕ ಶಿವಕುಮಾರ ಘಾಟೆ, ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ರವೀಂದ್ರಮೇತ್ರೆ, ಅನಿಲ ಮೇಲ್ದೊಡ್ಡಿ, ಸಿಪಿಐ ರಘುವೀರಸಿಂಗ್ ಠಾಕೂರ್, ತಾಲ್ಲೂಕು ಆರೋಗ್ಯಾಧಿಕಾರಿ ಡಾ. ಗಾಯತ್ರಿ, ಸಿಡಿಪಿಒ ಇಮಲಪ್ಪ, ಮುಖಂಡ ಸುಧಾಕಾರ ಕೊಳ್ಳೂರ್, ರಾಮಣ್ಣ ವಡಿಯಾರ್, ಅಂಜಾರಡ್ಡಿ ಮತ್ತಿತರರು ಇದ್ದರು.

# ನಿಜ ಜೀವನದಲ್ಲಿ ರಾಜಾ ಹುಲಿಗಳಾಗಿ ಬೆಳಗಬೇಕು:ಸಂಜಯ್

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ, ಮಾ.6– ತಲೆಗೂದಲು ಕತ್ತರಿಸಿಕೊಂಡು ರಾಜಾಹುಲಿ, ಹೆಬ್ಬುಲಿಗಳಾಗದೇ ಸಾಧಕರಾಗಿ ನಿಜ ಜೀವನದಲ್ಲಿ ರಾಜಾ ಹುಲಿಗಳಾಗಿ ದೇಶದ ಆಸ್ತಿಯಾಗಿ ಬೆಳಗಬೇಕು ಎಂದು ಶಿರೂರಿನ ಶಿಕ್ಷಕ ಸಂಜಯ ನಡುವಿನಮನಿ ಹೇಳಿದರು. ತಾಲೂಕಿನ ಬೆನಕಟ್ಟಿ ಗ್ರಾಮದ ಹೇಮರಡ್ಡಿ ಮಲ್ಲಮಾಂಬೆ ಪ್ರೌಢಶಾಲೆಯಲ್ಲಿ ಗುರುವಾರ 10 ನೇ ತರಗತಿ ವಿದ್ಯಾರ್ಥಿಗಳ ಬೀಳ್ಕೊಡುವ ಸಮಾರಂಭ ಹಾಗೂ ಸಾಧಕ ವಿದ್ಯಾರ್ಥಿಗಳಿಗೆ ಬಹುಮಾನ ವಿತರಿಸುವ ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಮಾತನಾಡಿದ ಅವರು, ವಿದ್ಯಾರ್ಥಿಗಳು ಸಾಧನೆಯ ಗುರಿ ಹೊಂದಿ ಆತ್ಮವಿಶ್ವಾಸ ಹಾಗೂ ಸತತ ಪ್ರಯತ್ನದ ಮೂಲಕ ಮುನ್ನಡೆದರೆ ಖಂಡಿತವಾಗಿ ಯಶಸ್ಸು ಸಿಗುತ್ತದೆ ಎಂದರು.




ವಿದ್ಯಾರ್ಥಿಗಳು ಓದುವುದರಲ್ಲಿ ಏಕಾಗ್ರತೆ ಬೆಳೆಸಿಕೊಳ್ಳಬೇಕು. ಹೆತ್ತವರ ಕನಸನ್ನು ನನಸು ಮಾಡುವು ಸಂಕಲ್ಪ ಹೊಂದಬೇಕು. ಪರೀಕ್ಷೆಯಲ್ಲಿ ಹೆಚ್ಚು ಅಂಕ ಗಳಿಸಿ ಉತ್ತಮ ಭವಿಷ್ಯ ರೂಪಿಸಿಕೊಳ್ಳಬೇಕು ಎಂದು ನಡುವಿನಮನಿ ಹೇಳಿದರು.

ಅತಿಥಿಗಳಾಗಿದ್ದ ಹಳ್ಳೂರ ಬಸವೇಶ್ವರ ಪ್ರೌಢಶಾಲೆಯ ಮುಖ್ಯೋಪಾಧ್ಯಾಯ ಎಂ.ಜಿ.ಬೂದಿಹಾಳ, ಮೌಲ್ಯಗಳು ನಶಿಸಿ ಹೋಗುತ್ತಿರುವ ದಿನಗಳಲ್ಲಿ ಮಕ್ಕಳಿಗೆ ನೀತಿಯುತ ಶಿಕ್ಷಣದ ಜೊತೆ ಸಂಸ್ಕಾರದ ಅಗತ್ಯವಿದೆ ಎಂದು ಹೇಳಿ, ಮಕ್ಕಳು ಪರೀಕ್ಷೆಗಾಗಿ ಹಬ್ಬದ ರೀತಿ ತಯಾರಿ ನಡೆಸಬೇಕು ಎಂದರು. ಅತಿಥಿಗಳಾಗಿದ್ದ ಕೆ.ಪಿ.ಅರಿಷಿಣಗೋಡಿ, ರಂಗಣ್ಣ ಕಟಗೇರಿ ಮಾತನಾಡಿ, ಮೊಬೈಲ್ ಬಳಕೆ ಅತಿಯಾಗಬಾರದು. ಅಗತ್ಯವಿರುವುದನ್ನು ಅದರಿಂದ ಬಳಸಿಕೊಂಡು ಜ್ಞಾನವಂತರಾಗಿ ಬೆಳೆಯಬೇಕು ಎಂದರು.


ವಿದ್ಯಾರ್ಥಿಗಳಾದ ಅನಿತಾ ಪಾಟೀಲ, ಸಂಜನಾ ಪಾಟೀಲ, ಪ್ರತೀಕ್ಷಾ ಆಸಂಗಿ, ಭಾಗ್ಯಾ ಬಡಿಗೇರ, ಮುನಿಯಪ್ಪ ಪಾತ್ರೋಟ ಅನಿಸಿಕೆ ವ್ಯಕ್ತಪಡಿಸಿದರು. ಶಿಕ್ಷಕ ಕಿರಣ ನಿಂಬಲಗುಂದಿ ಮಾತನಾಡಿದರು.

ಕಾರ್ಯಕ್ರಮದಲ್ಲಿ ಕಳೆದ ಸಾಲಿನ ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿಗಳಿಗೆ ನಗದು ಬಹುಮಾನ ನೀಡಲಾಯಿತಲ್ಲದೇ, ಕ್ರೀಡಾಕೂಟದಲ್ಲಿ ಸಾಧನೆ ತೋರಿದವರಿಗೆ ಪ್ರಶಸ್ತಿ ಪತ್ರ ವಿತರಿಸಲಾಯಿತು. ಶಾಲೆಯ ಉತ್ತಮ ವಿದ್ಯಾರ್ಥಿ ಹಾಗೂ ವಿದ್ಯಾರ್ಥಿನಿಗೆ ಪಾರಿತೋಷಕ ನೀಡಲಾಯಿತು.

ಅಧ್ಯಕ್ಷತೆಯನ್ನು ಶಂಕರಗೌಡ ಯಡಹಳ್ಳಿ ವಹಿಸಿದ್ದರು. ಆರ್.ಎಚ್.ಕುಲಕರ್ಣಿ, ಟಿ.ಎಚ್.ಸನ್ನಪ್ಪನವರ, ಮುತ್ತಪ ಅರಕೇರಿ, ಪಾಂಡುರಂಗ ಸನ್ನಪ್ಪನವರ, ಸುರೇಶ ಚಿತ್ತರಗಿ, ಸಿ.ಎನ್.ಬಾಳಕ್ಕನವರ, ಜಿ.ಬಿ.ಲಾಯದಗುಂದಿ, ಯಮನಪ್ಪ ಮಾದರ, ವಾಯ್.ಟಿ.ಸನಗಿನ, ಶಾಲೆಯ ಶಿಕ್ಷಕರು ಪಾಲ್ಗೊಂಡಿದ್ದರು.

ವಿದ್ಯಾರ್ಥಿನಿಯರು ಪ್ರಾರ್ಥಿಸಿದರು. ಮುಖ್ಯೋಪಾಧ್ಯಾಯ ಎಂ.ಎ.ಮುನವಳ್ಳಿ ಸ್ವಾಗತಿಸಿದರು. ಶಿಕ್ಷಕರಾದ ಜಿ.ಜಿ.ಚಿತ್ತರಗಿ, ಆರ್.ಎಸ್.ಜೀರಗಾಳ ಹಾಗೂ ಬಿ.ಎಂ.ಕಾಮಾ ನಿರೂಪಿಸಿದರು. ಆರ್.ಎಂ.ವಡ್ಡರ ವಂದಿಸಿದರು.

# ಅಸಹಜ ಸಾವು, ತನಿಖೆಗೆ ವಿಶ್ವ ಹಿಂದೂ ಪರಿಷತ್ ಆಗ್ರಹ



ಮಲ್ಲಮ್ಮ ನುಡಿ ವಾರ್ತೆ

ಗುರುಮಠಕಲ್:ಮಾ,06- ಕ್ಷೇತ್ರದ ವ್ಯಾಪ್ತಿಗೆ ಒಳಪಡುವ ನೀಲಹಳ್ಳಿ ಗ್ರಾಮದ ಕೆರೆಯಲ್ಲಿ ಇತ್ತೀಚೆಗೆ ಅಸಹಜವಾಗಿ ಇಬ್ಬರು ಯುವತಿಯರ ಶವಗಳು ದೊರಕಿದ್ದು ಕೂಡಲೇ ಸಮಗ್ರ ತನಿಖೆ ಕೈಗೊಂಡು ತಪ್ಪಿತಸ್ಥರ ವಿರುದ್ಧ ಕ್ರಮ ಜರುಗಿಸುವಂತೆ ವಿಶ್ವಹಿಂದೂ ಪರಿಷತನ ತಾಲೂಕ ಅಧ್ಯಕ್ಷ ಸತ್ಯನಾರಾಯಣ ಆಗ್ರಹಿಸಿದರು.

ಈ ಕುರಿತು ತಹಸೀಲ್ದಾರ ಶಾಂತಗೌಡ ಬಿರಾದರ ಅವರಿಗೆ ಮನವಿ ಸಲ್ಲಿಸಿ ಮಾತನಾಡಿದ ಅವರು, ಪಟ್ಟಣದ ಇಂದಿರಾನಗರದ ಅಲೆಮಾರಿ ಬುಡಗ ಜಂಗಮ ಸಮುದಾಯದ ಶ್ಯಾಮಮ್ಮ ಹುಸೇನಪ್ಪ ಸಿರಿಗಿರಿ (20), ಸಾಯಮ್ಮ ಭೀಮಪ್ಪ ಸಿರಿಗಿರಿ (15) ಇರ್ವರ ಶವವು ಕಳೆದ ಫೆ.12ರಂದು ಪತ್ತೆಯಾಗಿದ್ದು ಪ್ರಕರಣ ದಾಖಲಾಗಿರೂ ಇದುವರೆಗೂ ಕ್ರಮ ಜರುಗಿಸಿಲ್ಲ. ಕೂಡಲೇ ನ್ಯಾಯ ದೊರಕಿಸಿಕೊಡುವಂತೆ ವಿಶ್ವ ಹಿಂದೂ ಪರಿಷತ್ ಆಗ್ರಹಿಸಿದೆ.

ಈ ಸಂದರ್ಭದಲ್ಲಿ ಪ್ರಧಾನ ಕಾರ್ಯದರ್ಶಿ ಜಗದೀಶಕುಮಾರ ಭೂಮ, ಆರ್.ಎಸ್.ಎಸ್ ಪ್ರಮುಖ ಶ್ರೀನಿವಾಸ ಯಾದವ, ಬಜರಂಗದಳದ ಬಸವರಾಜ, ವೆಂಕಟೇಶ ಮುದಿರಾಜ,ಶರಣು ಮೇಧಾ, ಸಂಜೀವಕುಮಾರ ಅಳೆಗಾರ ಉಪಸ್ಥಿತರಿದ್ದರು.

# ಬಟಗೇರಾ(ಬಿ) ಗ್ರಾಮದ ಸಿ. ಸಿ. ರಸ್ತೆಗೆ ಚಾಲನೆ



ಮಲ್ಲಮ್ಮ ನುಡಿ ವಾರ್ತೆ

ಸೇಡಂ:ಮಾ,06.ತಾಲೂಕಿನ ಬಟಗೇರಾ ( ಬಿ ) ಗ್ರಾಮದ ಶ್ರೀ ಹನುಮಾನ ದೇವಸ್ಥಾನ ಮುಂಬಾಗದ ಮುಖ್ಯ ರಸ್ತೆಗೆ ಕೆ.ಕೆ.ಆರ್.ಡಿ.ಬಿ.ಅನುದಾನ ಅಡಿಯಲ್ಲಿ ಮಂಜೂರಾಗಿರುವ ಸಿ.ಸಿ. ಕಾಮಗಾರಿಯನ್ನು ಬಟಗೇರಾ(ಬಿ) ಗ್ರಾಮದ ಕಾಂಗ್ರೆಸ ಪಕ್ಷದ ಹಿರಿಯ ಮುಖಂಡರಾದ ಶಿವರೆಡ್ಡಿ ಹೂವಿನಬಾಯಿ ಮತ್ತು ಗ್ರಾಮ ಪಂಚಾಯತ ಅಧ್ಯಕ್ಷ ರವಿ ಚಿನ್ನ ರಾಠೋಡ ಚಾಲನೆ ನೀಡಿದರು. ಈ ಸಂದರ್ಭದಲ್ಲಿ ಮಲ್ಕಪ್ಪ ಪಟ್ಟಣ. ವೀರಭದ್ರಪ್ಪ ಕಲಶೆಟ್ಟಿ. ಗ್ರಾಮ ಪಂಚಾಯತ ಸದಸ್ಯರಾದ ಶ್ರೀಮತಿ ರೇಣುಕಾ ಅಂತಪ್ಪ್ ಭಜಂತ್ರಿ. ಶ್ರೀಮತಿ ರಜಿಯಾ ಬೇಗಮ ಚಾಂದಸಾಬ. ಹಾಗೂ ಗ್ರಾಮದ ಹಿರಿಯರು. ಅನ್ನದಾತರು ಇನ್ನಿತರರು ಇದ್ದರು.

# ರಾಯಚೂರು ತಾಲ್ಲೂಕು ಆರನೇ ಕನ್ನಡ ಸಾಹಿತ್ಯ ಸಮ್ಮೇಳನ
## ಕನ್ನಡಿಗರಾದ ನಾವು ಕನ್ನಡಾಭಿಮಾನ ಬೆಳೆಸಿಕೊಳ್ಳೋಣ: ಗೊ.ರು.ಚ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಮಾ.06- ಕನ್ನಡಿಗರಾದ ನಾವು ಕನ್ನಡ ಸಾಹಿತ್ಯ ಒಲವು ಬೆಳೆಸಿಕೊಂಡು ಭಾಷಾ ಪ್ರೇಮವನ್ನು ಮೆರೆಯುವಂತಾಗಬೇಕು ಎಂದು ಹಿರಿಯ ಸಾಹಿತಿ ನಾಡೋಜ ಡಾ.ಗೊ.ರು. ಚನ್ನಬಸಪ್ಪ ಅವರು ಹೇಳಿದರು.

ಮಾ.06ರ ಗುರುವಾರ ನಗರದ ಪಂಡಿತ ಸಿದ್ದರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ನಡೆದ ರಾಯಚೂರು ತಾಲ್ಲೂಕು ಆರನೇ ಕನ್ನಡ ಸಾಹಿತ್ಯ ಸಮ್ಮೇಳನ ಉದ್ಘಾಟಿಸಿ ಅವರು ಮಾತನಾಡಿದರು.

ಕನ್ನಡಿಗರಾದ ನಾವು ಆತ್ಮ ವಿಮರ್ಶೆ ಮಾಡಿಕೊಂಡು ಕಳೆದು ಹೋಗುತ್ತಿರುವ ನಮ್ಮನ್ನು ನಾವು ಹುಡುಕಿಕೊಳ್ಳಲು ಸಮ್ಮೇಳನಗಳು ಸಹಕಾರಿಯಾಗಲಿವೆ. ಕನ್ನಡ ಸಾಹಿತ್ಯ ಸಮ್ಮೇಳನಗಳು ಸಾಂಸ್ಕೃತಿಕ ಜಾತ್ರೆಗಳಾಗಿದ್ದು, ಪರಸ್ಪರ ಮಾನವ ಸಂಬಂಧ ಬೆಸೆಯುವ ಸಾಹಿತ್ಯ ಜಾತ್ರೆಗಳಾಗಿವೆ ಎಂದರು.

ಕನ್ನಡ ಸಾಹಿತ್ಯ ಪರಿಷತ್ ಅತ್ಯಂತ ಹಳೆಯ ಸಂಸ್ಥೆಯಾಗಿದೆ. ಇದರಿಂದ ನಡೆಯುವ ಸಾಹಿತ್ಯ ಸಮ್ಮೇಳನಗಳು ಇದೀಗ ತಾಲೂಕು ಕೇಂದ್ರಗಳಿಗೂ ವಿಸ್ತರಿಸಿರುವುದು ವಿಶೇಷ ಎಂದರು. ನೂರು ಜನರ ಸದಸ್ಯರಿದ್ದ ಪರಿಷತ್ ಇಂದು ಐದು ಲಕ್ಷಕ್ಕೂ ಅಧಿಕ ಸದಸ್ಯತ್ವ ಪಡೆದು ಜಗತ್ತಿನ ವಿವಿಧೆಡೆಯೂ ಸದಸ್ಯರನ್ನು ಹೊಂದಿರುವದು ಹೆಮ್ಮೆಯ ವಿಚಾರ ಎಂದರು.

ನಾವೀಗ ಸಾಹಿತ್ಯ ಪರಿಷತ್‌ನ ಶತಮಾನೋತ್ಸವದ ಸಂಭ್ರಮದಲ್ಲಿದ್ದೇವೆ. ರಾಜಕಾರಣಿಗಳಲ್ಲಿ,ಧರ್ಮಗುರುಗಳಲ್ಲಿ ಸಹ ಸಾಹಿತ್ಯಾಸಕ್ತಿ ಬೆಳೆಸುವ ಕಾರ್ಯವನ್ನು ಇಂತಹ ಸಮ್ಮೇಳನಗಳು ಮಾಡುತ್ತಿರುವುದು ಹೆಗ್ಗಳಿಕೆಯಾಗಿದೆ. ಹೀಗೆ ಎಲ್ಲರನ್ನೂ ಒಳಗೊಂಡು ಸಾಹಿತ್ಯ ಪರಿಷತ್ ಮುನ್ನಡೆಯಬೇಕಿದೆ ಎಂದರು. ವಚನ ಸಾಹಿತ್ಯವು ಪರ್ಯಾಯ ಸಂಸ್ಕೃತಿಯನ್ನು ಹುಟ್ಟುಹಾಕಿದೆ. ಸಾಹಿತ್ಯವು ಜನ ಸಂಕಷ್ಟಕ್ಕೆ, ನೋವಿಗೆ ಪರಿಹಾರ ಹುಡುಕುವಂತಾಗಬೇಕು. ರಾಜ್ಯ ಸರ್ಕಾರವು ಪುಸ್ತಕ ಓದುವ ಅಭಿರುಚಿ, ವೈಚಾರಿಕ ಅಭಿಪ್ರಾಯಗಳಿಗೆ ಒಲವು ತೋರಿಸುತ್ತಿರುವುದು ಸಮಧಾನಕರ ಬೆಳವಣಿಗೆಯಾಗಿದೆ ಎಂದರು. ರಾಯಚೂರಿನಲ್ಲಿ ಏಮ್ಸ್ ಸ್ಥಾಪನೆ ಹೋರಾಟಕ್ಕೆ ತಾವು ಬೆಂಬಲಿಸುವುದಾಗಿ ಹೇಳಿದರು.

ಇದೇ ಸಂದರ್ಭದಲ್ಲಿ ಕಿಲ್ಲೆ ಬೃಹನ್ಮಠದ ಶ್ರೀಶಾಂತಮಲ್ಲ ಶಿವಾಚಾರ್ಯರು,ಸಂಸದರಾದ ಜಿ.ಕುಮಾರನಾಯಕ, ಮಹಾನಗರ ಪಾಲಿಕೆಯ ಮಹಾಪೌರರಾದ ನರಸಮ್ಮ ನರಸಿಂಹಲು ಮಾಡಗಿರಿ, ಕನ್ನಡ ಸಾಹಿತ್ಯ ಪರಿಷತ್ ಜಿಲ್ಲಾಧ್ಯಕ್ಷ ರಂಗಣ್ಣ ಪಾಟೀಲ್ ಅಳ್ಳುಂಡಿ, ರಾಯಚೂರು ತಾಲೂಕು ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷರಾದ ವೆಂಕಟೇಶ ಬೇವಿನಬೆಂಚಿ, ಸಮ್ಮೇಳನಾಧ್ಯಕ್ಷರಾದ ಅಯ್ಯಪ್ಪಯ್ಯ ಹುಡಾ, ಮಹಾನಗರ ಪಾಲಿಕೆಯ ಸದಸ್ಯರಾದ ಜಯಣ್ಣ, ಐದನೇ ಸಾಹಿತ್ಯ ಸಮ್ಮೇಳನಾಧ್ಯಕ್ಷ ಬಾಬು ಬಂಡಾರಿಗಲ್, ಹಿರಿಯ ಪತ್ರಕರ್ತರಾದ ಬಸವರಾಜ ಸ್ವಾಮಿ, ಅರವಿಂದ ಕುಲಕರ್ಣಿ, ಚನ್ನಬಸವಣ್ಣ, ಸಾಹಿತಿಗಳಾದ ಬಾಬು ಬಂಢಾರಿಗಲ್, ಭಗತರಾಜ ನಿಜಾಮಕಾರಿ, ನಾಗರಾಜ ಮಸ್ಕಿ, ತಾಯಪ್ಪ ಹೊಸೂರು,ಜಿ.ಸುರೇಶ ಇದ್ದರು.

# ಮಾ.08ರಂದು ಅಂತಾರಾಷ್ಟ್ರೀಯ ಮಹಿಳಾ ದಿನ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಮಾ.06-ಇಲ್ಲಿನ ಜಿಲ್ಲಾ ನ್ಯಾಯಾಲಯದಲ್ಲಿ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ಕಾರ್ಯಕ್ರಮವು ಮಾ.08ರ ಬೆಳಿಗ್ಗೆ 10 ಗಂ-ಟೆಗೆ ನಡೆಯಲಿದೆ. ಗೌರವಾನ್ವಿತ ಕರ್ನಾಟಕ ಉಚ್ಚನ್ಯಾಯಾಲಯದ ನ್ಯಾಯಮೂರ್ತಿಗಳು ಆಗಿರುವ ಮತ್ತು ರಾಯಚೂರಿನ ಆಡಳಿತಾತ್ಮಕ ನ್ಯಾಯಾಧೀಶರಾದ ಉಮಾ ಎಂ.ಜಿ. ಅವರು ಉದ್ಘಾಟಿಸುವರು. ರಾಯಚೂರ ನ್ಯಾಯಾಲಯದ ಎಲ್ಲ ನ್ಯಾಯಾಧೀಶರು ಉಪಸ್ಥಿತರಿರುವರು ಎಂದು ಹಿರಿಯ ಶ್ರೇಣಿ ದಿವಾಣಿ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಹೆಚ್.ಎ.ಸಾತ್ವಿಕ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅಂತರರಾಷ್ಟ್ರೀಯ ಮಹಿಳಾ ದಿನಾಚರಣೆ ಕಾರ್ಯಕ್ರಮ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಮಾರ್ಚ್ 06-ಅಂತರರಾಷ್ಟ್ರೀಯ ಮಹಿಳಾ ದಿನಾಚರಣೆ ಕಾರ್ಯಕ್ರಮವನ್ನು ಇದೇ 2025ರ ಮಾರ್ಚ್ 11ರ ಮಂಗಳವಾರ ರಂದು ಅಂದು ಜಿಲ್ಲಾಡಳಿತ ಭವನ ಆಡಿಟೋರಿಯಂ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾಧಿಕಾರಿ ಡಾ.ಸುಶೀಲಾ.ಬಿ ಅವರು ತಿಳಿಸಿದ್ದಾರೆ.

ಅಂತರರಾಷ್ಟ್ರೀಯ ಮಹಿಳಾ ದಿನಾಚರಣೆ ಪ್ರಯುಕ್ತ ವಿವಿಧ ಕ್ಷೇತ್ರದಲ್ಲಿ ಸಾಧನೆಗೈದ ಮಹಿಳಾ ಸಾಧಕೀಯರಿಗೆ ಸನ್ಮಾನ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದ್ದು, ಈ ಕಾರ್ಯಕ್ರಮಕ್ಕೆ ಎಲ್ಲಾ ಇಲಾಖೆಗಳ ಮುಖ್ಯಸ್ಥರು ಹಾಗೂ ಮಹಿಳಾ ಅಧಿಕಾರಿ, ಸಿಬ್ಬಂದಿಗಳು ತಪ್ಪದೇ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ವಿವಿಧ ಬೇಡಿಕೆ ಈಡೇರಿಸುವಂತೆ ಜಯ ಕರ್ನಾಟಕ ಜನಮರ
# ವೇದಿಕೆ ವತಿಯಿಂದ ಅನಿರ್ದಿಷ್ಟ ಧರಣಿ



ಮಲ್ಲಮ್ಮ ನುಡಿ ವಾರ್ತೆ

ಸೇಡಂ: ಮಾ. 06. ತಾಲೂಕಿನ ಜಯ ಕರ್ನಾಟಕ ಜನಪರ ವೇದಿಕೆ ಜಿಲ್ಲಾ ಘಟಕ ಹಾಗೂ ಸೇಡಂ ತಾಲೂಕು ಘಟಕ ವತಿಯಿಂದ ನಗರದಲ್ಲಿರುವ ವಾಸವದತ್ತ ( ರಾಜಶ್ರೀ ಅಲ್ಟ್ರಾಟೆಕ್ ) ಸಿಮೆಂಟ್ ಕಾರ್ಖಾನೇ ಯಿಂದ ಆಗುತ್ತಿರುವ ವಿವಿಧ ಸಮಸ್ಸೆಗಳು ಸರಿಪಡಿಸುವ ಕುರಿತು ಮಾನ್ಯ ಸಹಾಯಕ ಆಯುಕ್ತರ ಕಾರ್ಯಲಯ ಸೇಡಂ ಮುಂಭಾಗದಲ್ಲಿ ತಾಲೂಕಿನ ವಿವಿಧ ಗ್ರಾಮಗಳ ನಿರುದ್ಯೋಗಿ ಯುವಕರು . ರೈತರು. ನಾಗರಿಕರ ಜೊತೆಗುಡಿ ಸೋಮವಾರ. ಮಾರ್ಚ್ 10 ರಂದು ಅನಿರ್ದಿಷ್ಟ ಧರಣಿ ಸತ್ಯಾಗ್ರಹವನ್ನು ನಮ್ಮ ಬೇಡಿಕೆ ಈಡೇರಿಸುವ ವರೆಗೆ ಮಾಡಲಾಗುವುದು ಎಂದು

ಜಯ ಕರ್ನಾಟಕ ಜನಮರ ವೇದಿಕೆ ಜಿಲ್ಲಾ ಉಪಾಧ್ಯಕ್ಷ ವರದಾ ಸ್ವಾಮಿ. ಹಿರೇಮಠ್ ರವರು ಪ್ರಕಟಣೆ ಯಲ್ಲಿ ತಿಳಿಸಿದ್ದಾರೆ.

# ರಾಯಚೂರ ತಾಲೂಕು 6ನೇ ಕನ್ನಡ ಸಾಹಿತ್ಯ ಸಮ್ಮೇಳನ ಅಕ್ಷರಶಃ ಜನಜಾತ್ರೆ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರ ಮಾರ್ಚ 6-ರಾಯಚೂರ ನಗರದಲ್ಲಿ ಮಾರ್ಚ 6ರಂದು ನಡೆದ ರಾಯಚೂರ ತಾಲೂಕು 6ನೇ ಕನ್ನಡ ಸಾಹಿತ್ಯ ಸಮ್ಮೇಳನವು ಅಕ್ಷರಶಃ ಜನಜಾತ್ರೆಯಾಗಿ ಯಶ ಕಂಡಿತು. ತಾಲೂಕು ಕನ್ನಡ ಸಾಹಿತ್ಯ ಪರಿಷತ್ ಆಯೋಜಿಸಿದ್ದ ಸಮ್ಮೇಳನದಲ್ಲಿ ಬೆಳಗ್ಗೆಯಿಂದ ಸಂಜೆವರೆಗೆ ನಡೆದ ನಾನಾ ಕಾರ್ಯಕ್ರಮಗಳಲ್ಲಿ ಸಾಹಿತಿಗಳು,ಶಿಕ್ಷಕರು,ನೌಕರರು, ಮಹಿಳೆಯರು,ವಿದ್ಯಾರ್ಥಿನಿಯರು ಹೆಚ್ಚಿನ ಸಂಖ್ಯೆಯಲ್ಲಿ ಸೇರಿ ಕಾರ್ಯಕ್ರಮದ ಮೆರುಗು ಹೆಚ್ಚಿಸಿದರು. ಮೆರವಣಿಗೆ; ರಾಯಚೂರು ತಾಲ್ಲೂಕು ಆರನೇ ಕನ್ನಡ ಸಾಹಿತ್ಯ ಸಮ್ಮೇಳನ ಸರ್ವಾಧ್ಯಕ್ಷರಾಗಿ ಆಯ್ಕೆಯಾಗಿದ್ದ ಸಾಹಿತಿ ಅಯ್ಯಪ್ಪಯ್ಯ ಹುಡಾ ದಂಪತಿಗೆ ವಿಶೇಷ ಗೌರವ ಸಲ್ಲಿಸಲಾಯಿತು. ನಾಡದೇವಿ ಭುವನೇಶ್ವರಿ ಭಾವಚಿತ್ರದ ಮೆರವಣಿಗೆಯು ಮಹಾತ್ಮಾಗಾಂಧಿ ಜಿಲ್ಲಾ ಕ್ರೀಡಾಂಗಣದಿಂದ ಆರಂಭವಾಗಿ ರಂಗಮಂದಿರದವರೆಗೆ ವರ್ಣರಂಜಿತವಾಗಿ ಸಾಗಿತು. ಮೆರವಣಿಗೆಯಲ್ಲಿ ಡೊಳ್ಳುಕುಣಿತ, ಆಕಣಿ ಹಲಗೆ, ಹಗಲು ವೇಷ ತಂಡಗಳು ಭಾಗವಹಿಸಿದ್ದವು. ಈ ವರ್ಣರಂಜಿತ ಕನ್ನಡದ ತೇರಿಗೆ ಕನ್ನಡದ ಸಾವಿರಾರು ಮನಸ್ಸುಗಳು ಸಾಕ್ಷಿಯಾದವು.

ಆಯುಕ್ತರಿಂದ ಧ್ವಜಾರೋಹಣ; ರಾಯಚೂರು ತಾಲ್ಲೂಕು ಆರನೇ ಕನ್ನಡ ಸಾಹಿತ್ಯ ಸಮ್ಮೇಳನದ ರಾಷ್ಟ್ರ ಧ್ವಜಾರೋಹಣವನ್ನು ಮಹಾನಗರಪಾಲಿಕೆ ಆಯುಕ್ತರಾದ ಜುಬಿನ್ ಮೊಹಪಾತ್ರ ಅವರು ರಂಗಮಂದಿರದ ಆವರಣದಲ್ಲಿ ನೆರವೇರಿಸಿದರು.

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷರಾದ ರಂಗಣ್ಣ ಪಾಟೀಲ ಅಳ್ಳುಂಡಿ ಅವರು ನಾಡಧ್ವಜವನ್ನು ಹಾಗೂ ತಾಲೂಕು ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ವೆಂಕಟೇಶ ಬೇವಿನಬೆಂಚಿ ಅವರು ಪರಿಷತ್ತಿನ ಧ್ವಜಾರೋಹಣ ನೆರವೇರಿಸಿದರು. ಬಳಿಕ ರಂಗಮಂದಿರದಲ್ಲಿ ನಡೆದ ವೇದಿಕೆಯ ಕಾರ್ಯಕ್ರಮಕ್ಕೆ ನಾಡೋಜ ಡಾ.ಗೋ.ರು. ಚನ್ನಬಸಪ್ಪ ಅವರು ದೀಪ ಬೆಳಗಿಸಿ ಚಾಲನೆ ನೀಡಿದರು.

ಸಾಹಿತಿಗಳೊಂದಿಗೆ ಬೆರೆತ ಸಂಸದರು: ರಾಯಚೂರ ತಾಲೂಕು 6ನೇ ಕನ್ನಡ ಸಾಹಿತ್ಯ ಸಮ್ಮೇಳನ ಉದ್ಘಾಟನಾ ಸಮಾರಂಭದಲ್ಲಿ ಸಂಸದರಾದ ಜಿ.ಕುಮಾರನಾಯಕ ಅವರು ಉಪಸ್ಥಿತರಿದ್ದು ಸಾಹಿತಿ ಗೋ. ರು.ಚ ಮತ್ತು ಸಮ್ಮೇಳನದ ಸರ್ವಾಧ್ಯಕ್ಷರ ಮಾತುಗಳನ್ನು ಕೇಳಿದರು. ಸಮಾರಂಭ ಮುಕ್ತಾಯವಾಗುವವರೆಗೆ ವೇದಿಕೆಯಲ್ಲಿಯೇ ಆಸೀನರಾಗಿ ಕಾರ್ಯಕ್ರಮದ ಎಲ್ಲ ಚಟುವಟಿಕೆಗಳನ್ನು ವೀಕ್ಷಿಸಿದರು.

ರಂಗಮಂದಿರದಲ್ಲಿ ತುಂಬಿದ ಜನರು: ಸಾಹಿತ್ಯ ಸಮ್ಮೇಳನದ ಹಿನ್ನೆಲೆಯಲ್ಲಿ ರಾಯಚೂರ ನಗರದಲ್ಲಿನ ರಂಗಮಂದಿರದ ಆವರಣವನ್ನು ಅಲಂಕಾರಗೊಳಿಸಲಾಗಿತ್ತು. ಸಮ್ಮೇಳನ ಹಿನ್ನೆಲೆಯಲ್ಲಿ ಶಿಕ್ಷಕರು, ಸಾಹಿತಿಗಳು ಬೆಳಗ್ಗೆಯಿಂದಲೇ ರಂಗಮಂದಿರದತ್ತ ಆಗಮಿಸಿ ಕಾರ್ಯಕ್ರಮದಲ್ಲಿ ಭಾಗಿಯಾದರು. ರಂಗಮಂದಿರದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಜನರು ಸೇರಿದ್ದು ಈ ಸಮ್ಮೇಳನದ ವಿಶೇಷತೆಯಾಗಿತ್ತು. ಅಚ್ಚುಕಟ್ಟಾದ ಊಟದ ವ್ಯವಸ್ಥೆ: ಸಾಹಿತ್ಯ ಸಮ್ಮೇಳನ ಹಿನ್ನೆಲೆಯಲ್ಲಿ ರಂಗಮಂದಿರದಿಂದ ಅಣತಿ ದೂರದಲ್ಲಿನ ಶಾಲಾ ಆವರಣದಲ್ಲಿ ಊಟದ ವ್ಯವಸ್ಥೆಯನ್ನು ಮಾಡಲಾಗಿತ್ತು. ಬಿಸಲಿನ ಹಿನ್ನೆಲೆಯಲ್ಲಿ ಪೆಂಡಾಲ ಅಳವಡಿಸಿ ನೆರಳಿನ ವ್ಯವಸ್ಥೆ ಮಾಡಲಾಗಿತ್ತು. ಜಾಮೂನು, ಗೋದಿ ಹುಗ್ಗಿ, ಬಜಿ, ಪೂರಿ, ಅನ್ನ ಸಾಂಬಾರ, ಮಜ್ಜಿಗೆ ಬಡಿಸಲಾಯಿತು.

# ಕಾಲುವೆಗಳಿಗೆ ನೀರು ಹರಿಸಬೇಕು ಎಂದು ಒತ್ತಾಯಿಸಿ ರೈತ ಸಂಘಟನೆಯಿಂದ ಪ್ರತಿಭಟನೆ



ಮಲ್ಲಮ್ಮ ನುಡಿ ವಾರ್ತೆ

ನಾರಾಯಣಪುರ: ಏ.15 ರವರೆಗೆ ಮುಖ್ಯ ಕಾಲುವೆಗಳಿಗೆ ನೀರು ಹರಿಸಬೇಕು ಎಂದು ಆಗ್ರಹಿಸಿ, ಪಟ್ಟಣದಲ್ಲಿ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಪದಾಧಿಕಾರಿಗಳು ಬೃಹತ್ ಪ್ರತಿಭಟನೆ ನಡೆಸಿದರು.

ಪಟ್ಟಣದ ಮಹಾಂತಸ್ವಾಮಿ ವೃತ್ತದಿಂದ ನೂರಾರು ಸಂಖ್ಯೆಯಲ್ಲಿ ರೈತರು ಬೈಕ್ ರ್ಯಾಲಿಯೊಂದಿಗೆ ಇಲ್ಲಿನ ಕೆಬಿಜಎನ್‌ಎಲ್ ಕಚೇರಿವರೆಗೆ ಪಾದಯಾತ್ರೆ ಮೂಲಕ ಆಗಮಿಸಿ ಪ್ರತಿಭಟನೆ ನಡೆಸಿ, ಹಿಂಗಾರು ಹಂಗಾಮಿನ ಬೆಳೆಗಳಿಗೆ ಏ.15 ರವರೆಗೆ ಕಾಲುವೆಗೆ ನೀರು ಹರಿಸಬೇಕು ಎಂದು ಒತ್ತಾಯಿಸಿದರು.

ಈ ವೇಳೆ ಸಂಘಟನೆ ರಾಜ್ಯಾಧ್ಯಕ್ಷ ವಾಸುದೇವ ಮೇಟಿ, ಜಿಲ್ಲಾ ಅಧ್ಯಕ್ಷ ಮಲ್ಲನಗೌಡ ಹಗರಟಗಿ ಮಾತನಾಡಿ,ಉತ್ತರ ಕರ್ನಾಟಕ ಭಾಗದ ನನೆಗುದಿಗೆ ಬಿದ್ದಿರುವ ಎಲ್ಲಾ ನೀರಾವರಿ ಯೋಜನೆಗಳಿಗೆ ಸರಕಾರ ಹಾಗೂ ರಾಜ್ಯದ ಸಂಸದರು ಧ್ವನಿ ಎತ್ತುವ ಮೂಲಕ ಯೋಜನೆಗಳಿಗೆ ಅಗತ್ಯ ಅನುದಾನ ಒದಗಿಸಲು ಶ್ರಮಿಸಬೇಕು. ಈ ಭಾಗದ ನೀರಾವರಿ ಸೇರಿ ಇತರೆ ಅಭಿವೃದ್ಧಿ ಯೋಜನೆಗಳಿಗೆ ರಾಜ್ಯ ಸರಕಾರ ಅನುದಾನ ಒದಗಿಸಬೇಕು. ಮಲತಾಯಿ ಧೋರಣೆ ಬಿಡಬೇಕು ಎಂದರು. ನೀರಾವರಿ ಅಧಿ ಕಾರಿಗಳು ರೈತರ ನೆರವಿಗೆ ಬರಬೇಕು ಎಂದರು.

ಬೂದಿಹಾಳ-ಪೀರಾಪುರ ಕಾಮಗಾರಿಯನ್ನು ಶೀಘ್ರವೇ ಪೂರ್ಣಗೊಳಿಸುವ ಮೂಲಕ, ನೀರಾವರಿ ವಂಚಿತ ಜಮೀನಿಗೆ ನೀರು ಹರಿಸಬೇಕು. ಐಸಿಸಿ ಸಭೆಯಲ್ಲಿ ರೈತ ಪ್ರತಿನಿಧಿಗೂ ಅವಕಾಶ ಕಲ್ಪಿಸಬೇಕು ಎಂದು ಹೇಳಿದರು.

ರೈತ ಸಂಘಟನೆಗಳಿಂದ ಮನವಿ ಸ್ವೀಕರಿಸಿದ ಕೆಬಿಜೆಎನ್‌ಎಲ್‌ನ ಸಿಇ,ಮಂಜುನಾಥ ಮಾತನಾಡಿ, ಈ ಸಂಬಂಧ ನಿಗಮದ ಎಂಡಿ ಹಾಗೂ ಐಸಿಸಿ ಸಭೆಗೆ ಗಮನಕ್ಕೆ ತರಲಾಗುವುದು ಎಂದರು. ಈ ವೇಳೆ ಸಂಘಟನೆ ಮುಖಂಡರಾದ ಮಲ್ಲನಗೌಡ, ಬಿರಾದಾರ, ಮುತ್ತುಗೌಡ ಪರಸನಹಳ್ಳಿ, ದೇವಿಂದ್ರಪ್ಪ ಶಿರವಾಳ, ಮಲ್ಲೇಶಪ್ಪಗೌಡ ಪಾಟೀಲ್, ರುದ್ರಣ್ಣ ಕುಂಬಾರ ಗೆದ್ದಲಮರಿ, ಗುರುನಾಥರೆಡ್ಡಿ ಹದನೂರ, ಶಿವಾನಂದಸ್ವಾಮಿ,ಹನುಮಗೌಡ ಇಸ್ಲಾಂಪುರ, ಗೌಡಪ್ಪಗೌಡ ಬಿರಾದಾರ, ಹಣಮಂತ ಕೋಳಿಹಾಳ, ಶಿವಶರಣಪ್ಪ ಸಾಹುಕಾರ, ಯಮನಪ್ಪ ಅಧೀಕ್ಷಕ ಅಭಿಯಂತರ ಆರ್.ಜಿ ರಾಠೋಡ, ಇಇ ಹಣಮಂತ ಸೇರಿ ಕೃಷ್ಣಾ ಅಚ್ಚುಕಟ್ಟು ಭಾಗದ ವಿವಿಧ ಗ್ರಾಮಗಳ ರೈತರು, ಅಧಿಕಾರಿಗಳು, ವ್ಯಾಪಾರಿಗಳು, ಪಾಲ್ಗೊಂಡಿದ್ದರು.

# ಸುರಪುರ ಪೊಲೀಸರಿಂದ ಜಾಗೃತಿ ಕಾರ್ಯಕ್ರಮ..9 ತಿಂಗಳಿಂದ 4 ವರ್ಷಗಳ ಮಕ್ಕಳ ಬಗ್ಗೆ ಇರಲಿ ಕಾಳಜಿ..



ಮಲ್ಲಮ್ಮ ನುಡಿ ವಾರ್ತೆ

ಸುರಪುರ:ರಸ್ತೆಯಲ್ಲಿ ಸಂಚರಿಸುವಾಗ ಸಂಚಾರಿ ನಿಯಮಗಳನ್ನು ಪಾಲಿಸದೆ ಅಪಘಾತಗಳ ಸಂಖ್ಯೆ ಹೆಚ್ಚುತ್ತಿದ್ದು,ಅದರಲ್ಲೂ ವಿಶೇಷವಾಗಿ ಅಪಘಾತಗಳಲ್ಲಿ ಮಕ್ಕಳ ಸಾವಿನ ಸಂಖ್ಯೆ ಹೆಚ್ಚಾಗುತ್ತಿದ್ದು, ವಾಹನ ಚಲಾಯಿಸುವಾಗ ಕಡ್ಡಾಯವಾಗಿ ಹೆಲ್ಮೆಟ್ ಧರಿಸಬೇಕು ಜೊತೆಗೆ ಚಿಕ್ಕ ಮಕ್ಕಳಿಗೂ ಹೆಲ್ಮೆಟ್ ಧರಿಸಿ ಅವರ ಜೀವ ಕಾಪಾಡಿ ಎಂದು ಸುರಪುರ ಠಾಣೆಯ ಪಿಎಸ್ ಐ ಸಿದ್ದಣ್ಣ ಯಡ್ರಾಮಿ ಹೇಳಿದರು.

ಸುರಪುರ ನಗರದ ಗಾಂಧಿ ವೃತ್ತದ ಬಳಿ ಜಾಗೃತಿ ಕಾರ್ಯಕ್ರಮ ನಡೆಸಿ ಮಾತನಾಡಿದ ಅವರು, ರಸ್ತೆಯಲ್ಲಿ ಸಂಚರಿಸುವಾಗ ಸಂಚಾರಿ ಸೂಚನಾ ಫಲಕಗಳನ್ನು ಆಧರಿಸಿ ವಾಹನವನ್ನು ಚಲಾಯಿಸಿ,

ದ್ವಿಚಕ್ರ ವಾಹನ ಸವಾರರು ಕಡ್ಡಾಯವಾಗಿ ವಾಹನ ಚಲಾಯಿಸುವಾಗ ಹೆಲ್ಮೆಟ್ ಧರಿಸಿ,ಯಾವುದೇ ಕಾರಣಕ್ಕೂ ಅತಿ ವೇಗ ಆಲಕ್ಷತನದಿಂದ ವಾಹನವನ್ನು ಚಲಾಯಿಸಬೇಡಿ,ಕುಡಿದು ವಾಹನವನ್ನು ಚಲಾಯಿಸಬೇಡಿ, ಅಪ್ರಾಪ್ತವಯಸ್ಸಿನ ಮಕ್ಕಳ ಕೈಯಲ್ಲಿ ವಾಹನವನ್ನು ಕೊಡಬೇಡಿ, ರಸ್ತೆ ತಿರುವುಗಳಿದ್ದಲ್ಲಿ ಎಡ ಬಲ ನೋಡಿ ವಾಹನವನ್ನು ಚಲಾಯಿಸಿ, ಶಾಲೆ ಆಸ್ಪತ್ರೆ ಇರುವ ರಸ್ತೆಯಲ್ಲಿ ವಾಹನವನ್ನು ನಿಧಾನವಾಗಿ ಚಲಾಯಿಸಿ, ತ್ರಿಬಲ್ ರೈಡಿಂಗ್ ಮಾಡಬಾರದು ಎಂದರು.

ಇನ್ನು ಮೊಬೈಲ್‌ನಲ್ಲಿ ಮಾತಾಡುತ್ತಾ ಬೈಕ್ ಚಲಾಯಿಸಬಾರದು, ನಾಲ್ಕು ಚಕ್ರದ ವಾಹನಗಳನ್ನು ಚಲಾಯಿಸುವಾಗ ಕಡ್ಡಾಯವಾಗಿ ಸೀಟ್ ಬೆಲ್ಟ್ ಧರಿಸಬೇಕು,ವಾಹನ ಸವಾರರು ಕಡ್ಡಾಯವಾಗಿ ವಾಹನ ಚಾಲನ ಪತ್ರ,ವಾಹನ, ನೋಂದಣಿ ಪತ್ರ ವಾಹನ ವಿಮಾ ಪತ್ರ,ವಾಹನ ಎಮಿಷನ್ ಪರೀಕ್ಷೆ ಪತ್ರ ಕಡ್ಡಾಯವಾಗಿ ಇಟ್ಟುಕೊಂಡಿರಬೇಕು ಅವಸರವೇ ಅಪಘಾತಕ್ಕೆ ಕಾರಣವಾಗಿದ್ದು, ವಾಹನಗಳನ್ನು ರಸ್ತೆಯಲ್ಲಿ ನಿಧಾನವಾಗಿ ಚಲಾಯಿಸಿ ಸುರಕ್ಷತೆಯಿಂದ ತಮ್ಮ ಮನೆಗೆ ತಲುಪಿ ಅಂತಾ ಸಾರ್ವಜನಿಕರಿಗೆ ತಿಳಿಸಿದರು. ಈ ಸಂದರ್ಭದಲ್ಲಿ ಮಾನಪ್ಪ ಶಾರದಳ್ಳಿ ಎಎಸ್‌ಐ, ಬೀರಪ್ಪ ಎಎಸ್‌ಐ ಮುಖ್ಯಪೇದೆಗಳಾದ ಶಿವರಾಜ್ ಪಾಣೆಗಾವ್,ಬಸವರಾಜ್‌ಮುದುಗಲ್, ಪೊಲೀಸ್ ಪೇದೆಗಳಾದ ಸುರೇಶ್ ಕದಂ, ಹುಸೇನ್ ಬಾಷಾ,ಲಕ್ಷ್ಮಣ್ ಹಣಮಂತರಾಯ,ದಯಾನಂದ ಜಮಾದಾರ್, ಮಹಿಳಾ ಪೇದೆ ಲತಾ ಸೇರಿದಂತೆ ಹಲವರು ಈ ಜಾಗೃತಿ ಕಾರ್ಯಕ್ರಮದಲ್ಲಿ ಭಾಗಿಯಾಗಿದ್ದರು.

# 9 ತಿಂಗಳಿನಿಂದ ಹಿಡಿದು 4 ವರ್ಷದೊಳಗಿನ ಎಲ್ಲಾ ಮಕ್ಕಳಿಗೆ ಹೆಲ್ಮೆಟ್ ಕಡ್ಡಾಯ



ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ದ್ವಿಚಕ್ರವಾಹನ ಸವಾರರು ತಮ್ಮ ವಾಹನದಲ್ಲಿ ಅಥವಾ ತಮ್ಮ ಜೊತೆಯಲ್ಲಿ 9 ತಿಂಗಳಿನಿಂದ ಹಿಡಿದು 4 ವರ್ಷದೊಳಗಿನ ಎಲ್ಲಾ ಮಕ್ಕಳಿಗೆ ಹೆಲ್ಮೆಟ್ ಕಡ್ಡಾಯ ಹಾಕಬೇಕು ಎಂದು ಕಮಲನಗರ ಪೊಲೀಸ್ ಠಾಣಾ ಪಿ.ಎಸ್.ಐ ಚಂದ್ರಶೇಖರ ನಿರ್ಣೆ ಅವರು ಮಾಹಿತಿ ನೀಡಿದರು.

ಪಟ್ಟಣದ ಡಾ. ಬಿ ಆರ್ ಅಂಬೇಡ್ಕರ್ ವಸತಿ ಶಾಲೆ ಕಮಲನಗರ್ ಶಾಲೆಯಲ್ಲಿ ಗುರುವಾರ ಆಯೋಜಿಸಿದ ರಸ್ತೆ ಸುರಕ್ಷಾ ಸಪ್ತ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಉಚ್ಚ ನ್ಯಾಯಾಲಯ ಬೆಂಗಳೂರು ರವರು ರಿಟ್ ಅರ್ಜಿ ಸಂಖ್ಯೆ:27135/2023(ಪಿಐಎಲ್)ಗೆ ಸಂಬಂಧಿಸಿದಂತೆ, ದ್ವಿಚಕ್ರ ವಾಹನ ಸವಾರರು ತಮ್ಮ ವಾಹನದಲ್ಲಿ ಅಥವಾ ತಮ್ಮ ಜೊತೆಯಲ್ಲಿ 9 ತಿಂಗಳಿನಿಂದ ಹಿಡಿದು 4 ವರ್ಷದೊಳಗಿನ ಎಲ್ಲಾ ಮಕ್ಕಳನ್ನು ಕಡ್ಡಾಯವಾಗಿ ಪಾಲಿಸಬೇಕು, ಇದ್ದರಿಂದ ಅಪಘಾತ ಸಂದರ್ಭದಲ್ಲಿ ಚಿಕ್ಕ ಮಕ್ಕಳಿಗೆ ಪ್ರಾಣ ಅಪಾಯದಿಂದ ರಕ್ಷಣೆ ನೀಡಬಹುದು ಎಂದು ಹೇಳಿದರು.

ನಂತರ ಸಿ.ಪಿ.ಐ ಅಮರಪ್ಪ ಶಿವಬಲ ಮಾರ್ಗದರ್ಶನದಲ್ಲಿ ರಸ್ತೆಯಲ್ಲಿ ಚಿಕ್ಕ ಮಕ್ಕಳಿಗೆ ಹೆಲ್ಮೆಟ್ ಹಾಕಿ ಜಾಗ್ರತಿ ಮೂಡಿಸಲಾಯಿತು.

ಈ ಸಂದರ್ಭದಲ್ಲಿ ಶಾಲೆ ಪ್ರಿನ್ಸಿಪಾಲ್ ರಾಜೇಂದ್ರ ನಿಟ್ಟುರೆ ಶಿಕ್ಷಕರರಾದ ಸಂದೀಪ್, ದಯಾನಂದ್, ನಾಗರಾಜ್, ಸಾಯಿನಾಥ್, ಬಬಿತಾ, ಪ್ರಿಯಾಂಕ ಹಾಗೂ ಪೊಲೀಸ್ ಸಿಬ್ಬಂದಿ ಇದ್ದರು.

## ಮಕ್ಕಳನ್ನು ದಡ್ಡನೆಂದು ಸಂಬೋಧಿಸುವುದು ಬೇಡ, ವಿದ್ಯಾರ್ಥಿಯನ್ನು ಜಾಣನಾಗಿಸುವುದೇ ಕಲಿಕೆ : ಅಮರೇಶ್ವರ ಸ್ವಾಮಿ ಕಂದಗಲ್ಲಮಠ ಅಭಿಮತ



ಮಲ್ಲಮ ನುಡಿ ವಾರ್ತೆ

ಕೊಪ್ಪಳ : ಕುಕನೂರ ಯಾವವಿದ್ಯಾರ್ಥಿಯೂದಡ್ಡನಲ್ಲ. ಮಕ್ಕಳನ್ನುಜಾಣರನ್ನಾಗಿಸುವುದೇ ಕಲಿಕೆ ಎಂದು ಶಾಲೆಯ ಹಳೆ ವಿದ್ಯಾರ್ಥಿಗಳ ಸಂಘದ ಅಧ್ಯಕ್ಷ ಹಾಗೂ ಪತ್ರಕರ್ತ ಅಮರೇಶ್ವರಸ್ವಾಮಿಕಂದಗಲ್ಲಮಠ ಹೇಳಿದರು.

ಪಟ್ಟಣದ ರಾಯರಡ್ಡಿ ಆಶ್ರಯ ಕಾಲನಿಯ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಯಲ್ಲಿ ಜರುಗಿದ ಕುಕನೂರು ವಲಯ ಮಟ್ಟದ ಮಕ್ಕಳ ಕಲಿಕಾ ಹಬ್ಬ ಉದ್ಘಾಟಿಸಿ ಮಾತನಾಡಿದ ಅವರು, ಪಾಲಕರು, ಶಿಕ್ಷಕರು ಮಕ್ಕಳನ್ನು ಕಲಿಕೆಯಲ್ಲಿ ಹಿಂದುಳಿದಕಾರಣಕ್ಕೆದಡ್ಡನೆಂದು ಸಂಭೋಧಿಸುವುದು ಬೇಡ. ಅದು ಮಗುವಿನ ಮನಸ್ಸಿನ ಮೇಲೆ ಭವಿಷ್ಯದಲ್ಲಿ ಪರಿಣಾಮ ಬೀರುತ್ತದೆ. ಕಲಿಕೆಯಲ್ಲಿ ಹಿಂದುಳಿದ ಮಗುವನ್ನು ಜಾಣನನ್ನಾಗಿಸವುದೇ ನಿಜವಾದ ಶಿಕ್ಷಣ. ಆ ನಿಟ್ಟಿನಲ್ಲಿ ಪ್ರತಿಯೊಬ್ಬರು ಕಾರ್ಯ ಮಾಡಬೇಕು. ಶಿಕ್ಷಣ ಬದುಕಿಗೆ ಶಕ್ತಿ ನೀಡುತ್ತದೆ. ಮಕ್ಕಳಲ್ಲಿರುವ ಆಶಕ್ತಿ ಅರಿತು ಶಿಕ್ಷಕರು, ಪಾಳಕರು ಅದಕ್ಕೆ ಪ್ರೋತ್ಸಾಹ ನೀಡುವ ಕಾರ್ಯ ಮಾಡಬೇಕು ಎಂದರು.

ತಾಲೂಕ ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಮಹೇಶ ಸಬರದ ಮಾತನಾಡಿ, ಮಕ್ಕಳ ಕಲಿಕಾ ಹಬ್ಬ ಮಕ್ಕಳಿಗೆ ಸಂತಸದ ಪರಿಪೂರ್ಣ ಕಲಿಕೆಗೆ ಅನುಕೂಲ ಆಗಿದೆ. ಮಕ್ಕಳು ಕಲಿಕೆಯಲ್ಲಿ ಆಸಕ್ತಿ ಹೊಂದಬೇಕು. ಕಲಿಕೆ ಎಂಬುದು ಮಕ್ಕಳಿಗೆ ಉತ್ಸಾಹದಾಯಕವಾಗಿರಬೇಕು. ವಿಷಯ, ಆಟ, ಸಂಸ್ಕೃತೀ, ಕ್ರೀಯಾ ಚಟುವಟಿಕೆಗಳಲ್ಲಿ ಮಕ್ಕಳು ಸದಾಕ್ರೀಯಾಶೀಲರಾಗಿರಬೇಕು. ಮಕ್ಕಳಲ್ಲಿ ವಿಷಯ ಜ್ಞಾನ ಬೆಳೆಯಬೇಕು.

ಆ ನಿಟ್ಟಿನಲ್ಲಿ ಶಾಲೆಯಂಗಳ, ಮನೆ, ಶಾಲೆ ಕೊಠಡಿಯಲ್ಲಿ ಮಕ್ಕಳ ಕಲಿಕೆಗೆ ಅನುಗುಣವಾದ ವಾತಾವರಣ ಅವಶ್ಯಕ. ಆ ನಿಟ್ಟಿನಲ್ಲಿ ಶಿಕ್ಷಣ ಇಲಾಖೆ ಕಲಿಕಾ ಹಬ್ಬ ಆಯೋಜನೆ ಮಾಡಿ ಮಕ್ಕಳಲ್ಲಿ ಕಲಿಕಾಸಕ್ತಿ ಹೆಚ್ಚಿಸುವ ಕಾರ್ಯ ಮಾಡುತ್ತಿದೆ ಎಂದರು.

ತಾಲೂಕ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಮಾರುತೇಶತಳವಾರಮಾತನಾಡಿ, ಮಕ್ಕಳಲ್ಲಿ ಕಲಿಕೆಯಲ್ಲಿ ಗಟ್ಟಿತನ ಬರಬೇಕು. ಮಕ್ಕಳ ಮನಸ್ಸು ಮುಗ್ಧ. ಮುಗ್ಧತೆಯಲ್ಲಿ ಜ್ಞಾನದ ಕೂಸುಮ ಅರಳಬೇಕು. ಮಕ್ಕಳು ಕಲಿಕಾ ಹಬ್ಬದಲ್ಲಿ ಸಕ್ರೀಯವಾಗಿ ಭಾಗಿಯಾಗಬೇಕು ಎಂದರು.

ಸಿಆರ್.ಪಿ ಫೀರಸಾಬ್ ದಫೇದಾರ ಮಾತನಾಡಿ, ಮನುಷ್ಯ ಪರಿಪೂರ್ಣ ಆಗಲು ಶಿಕ್ಷಣ ಅವಶ್ಯಕ. ಶಿಕ್ಷಣ ಬದುಕು ರೂಪಿಸುವ ಅಸ್ತ್ರ. ಕಲಿಕಾ ಹಬ್ಬ ಮಕ್ಕಳ, ಶಿಕ್ಷಕರ, ಪಾಲಕರ ಸಮಾಗಮ ಎಂದರು.

ಪಪಂ ಉಪಾಧ್ಯಕ್ಷ ಪ್ರಶಾಂತ ಆರಬೆರಳಿನ್, ಎಸ್.ಡಿ.ಎಂ.ಸಿ ಅಧ್ಯಕ್ಷೆ ಶೀರ್ಮಾ ನೂರಭಾಷಾ, ಪಪಂ ಸದಸ್ಯೆ ರಾಧಾ ಸಿದ್ದಪ್ಪ ದೊಡ್ಮನಿ, ಜಿಲ್ಲಾ ಚುಟುಕು ಸಾಹಿತ್ಯ ಪರಿಷತ್ ಅಧ್ಯಕ್ಷ ರುದ್ರಪ್ಪ ಭಂಡಾರಿ, ತಾಲೂಕ ವಚನ ಸಾಹಿತ್ಯ ಪರಿಷತ್ ಅಧ್ಯಕ್ಷ ವೀರಯ್ಯ ಕುರ್ತಕೋಟಿ, ಮುಖ್ಯ ಶಿಕ್ಷಕ ನಿಂಗಪ್ಪ ಹೈದ್ರಿ, ಬಿ.ಆರ್.ಪಿ ಮಹೇಶ ಅಸೂಟಿ, ಪ್ರಮುಖರಾದ ಮಂಜುನಾಥ ಯಡಿಯಾಪೂರ, ಉಮೇಶ ಕಂಬಳಿ, ಅಬ್ದುಲ್ ಖದೀರ, ಶಾಂತಾದೇವಿ ಹಿರೇಮಠ, ಶಂಭುಲಿಂಗಯ್ಯ ಶಿರೂರಮಠ, ಪ್ರಭು ಶಿವನಗೌಡ, ಚಿದಾನಂದ ಪತ್ತಾರ, ಗಿರಿಜಾ ನರೇಗಲ್ಲಮಠ, ಲಕ್ಕಪ್ಪ ತಳವಾರ, ಮಾಬು ನೂರಬಾಷ, ಶಾಲೆ ಶಿಕ್ಷಕರು, ಪಾಲಕರು, ಮಕ್ಕಳಿದ್ದರು.

## ಸಾರ್ವಜನಿಕರ ಕುಂದುಕೊರತೆಗಳ ಅಹವಾಲು ಸ್ವೀಕಾರ/ಜನ ಸಂಪರ್ಕ ಸಭೆ

ಮಲ್ಲಮ ನುಡಿ ವಾರ್ತೆ

ಬಳ್ಳಾರಿ,ಮಾ.06–ಬಳ್ಳಾರಿ ವಿಭಾಗದ ಲೋಕಾಯುಕ್ತ ಪೊಲೀಸ್ ಅಧಿಕಾರಿಗಳಿಂದ ಜಿಲ್ಲೆಯ ವಿವಿಧ ತಾಲ್ಲೂಕು ಕೇಂದ್ರಗಳಲ್ಲಿ ಸಾರ್ವಜನಿಕರು ವಿವಿಧ ಇಲಾಖೆಗಳಿಗೆ ಸಲ್ಲಿಸಿದ ಅರ್ಜಿಗಳನ್ನು ವಿಲೇ ಮಾಡದಿರುವ ಕುರಿತು ಕುಂದುಕೊರತೆಗಳ ಅಹವಾಲುಗಳ ಸ್ವೀಕಾರ/ಜನ ಸಂಪರ್ಕ ಸಭೆ ಏರ್ಪಡಿಸಲಾಗಿದೆ ಎಂದು ಬಳ್ಳಾರಿ ವಿಭಾಗದ ಲೋಕಾಯುಕ್ತ ಪೊಲೀಸ್ ಅಧೀಕ್ಷಕ ಸಿದ್ಧರಾಜು.ಸಿ ಅವರು ತಿಳಿಸಿದ್ದಾರೆ.

ಪೊಲೀಸ್ ಅಧೀಕ್ಷಕರಾದ ಸಿದ್ಧರಾಜು.ಸಿ ಮಾರ್ಗದರ್ಶನದಲ್ಲಿ ಡಿಎಸ್‌ಪಿಆರ್.ವಸಂತ್‌ಕುಮಾರ್ ಮತ್ತು ಪೊಲೀಸ್ ನಿರೀಕ್ಷಕರಾದ ಸಂಗಮೇಶ್ ಇವರು ಸಂಡೂರು ಮತ್ತು ಕಂಪ್ಲಿ ತಾಲ್ಲೂಕು ಕೇಂದ್ರಗಳಲ್ಲಿ ಅಹವಾಲು ಸ್ವೀಕರಿಸುವ ಕಾರ್ಯಕ್ರಮ ನಡೆಯಲಿದೆ. *ಅಹವಾಲು ಸ್ವೀಕರಿಸುವ ದಿನ ಮತ್ತು ಸ್ಥಳ:*

ಮಾ.18 ರಂದು ಬೆಳಿಗ್ಗೆ 11.30 ಗಂಟೆಯಿಂದ ಮಧ್ಯಾಹ್ನ 2 ಗಂಟೆಯವರೆಗೆ ಸಂಡೂರು ತಹಶೀಲ್ದಾರರ ಕಚೇರಿ ಸಭಾಂಗಣ. ಮಾ.20 ರಂದು ಬೆಳಿಗ್ಗೆ 11.30 ಗಂಟೆಯಿಂದ ಮಧ್ಯಾಹ್ನ 02 ಗಂಟೆಯವರೆಗೆ ಕಂಪ್ಲಿ ತಹಶೀಲ್ದಾರರ ಕಚೇರಿ ಸಭಾಂಗಣದಲ್ಲಿ ಏರ್ಪಡಿಸಲಾಗಿದೆ.

ಕಾರ್ಯಕ್ರಮದಲ್ಲಿ ಕರ್ನಾಟಕ ಲೋಕಾಯುಕ್ತ ಬೆಂಗಳೂರು ಇವರಿಗೆ ಅರ್ಜಿ ಸಲ್ಲಿಸಲು ನಮೂನೆ/ಫಾರಂ ನಂ.01 ಮತ್ತು 02 ಗಳನ್ನು ಸಹ ನೀಡಲಾಗುವುದು. ಕುಂದು ಕೊರತೆಗಳಿರುವ ಸಾರ್ವಜನಿಕರು ದೂರುಗಳಿದ್ದಲ್ಲಿ ನಿಗದಿಪಡಿಸಿದ ದಿನದಂದು ಅರ್ಜಿ ನಮೂನೆಯಲ್ಲಿ ಅಹವಾಲು ನೀಡಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮಾ.09 ರಂದು ಬಳ್ಳಾರಿ ಪೊಲೀಸ್ ರನ್

ಮಲ್ಲಮ ನುಡಿ ವಾರ್ತೆ

ಬಳ್ಳಾರಿ,ಮಾ.06–ಕರ್ನಾಟಕ ರಾಜ್ಯ ಪೊಲೀಸ್ ರನ್–2025 ಕಾರ್ಯಕ್ರಮ ಅಂಗವಾಗಿ 'ನಮ್ಮ ನಮ್ಮೆಲ್ಲರ ಸದೃಢತೆ, ಡ್ರಗ್ಸ್ ಮುಕ್ತ ಕರ್ನಾಟಕ' ನಿರ್ಮಾಣಕ್ಕಾಗಿ ಬಳ್ಳಾರಿ ಜಿಲ್ಲಾ ಪೊಲೀಸ್ ವತಿಯಿಂದ ಮಾ.09 ರಂದು ಬೆಳಿಗ್ಗೆ 07 ಗಂಟೆಗೆ ನಗರದ ಕನಕ ದುರ್ಗಮ್ಮ ದೇವಸ್ಥಾನದ ಆವರಣದಲ್ಲಿ ಬಳ್ಳಾರಿ ಪೊಲೀಸ್ ರನ್–2025 ಕಾರ್ಯಕ್ರಮ ಆಯೋಜಿಸಲಾಗಿದೆ. ಕಾರ್ಯಕ್ರಮದಲ್ಲಿ ವಿಜೇತರಿಗೆ ಆಕರ್ಷಕ ನಗದು ಬಹುಮಾನ ಮತ್ತು ಪ್ರಮಾಣ ಪತ್ರ ನೀಡಲಾಗುತ್ತದೆ. ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಜಿಲ್ಲಾ ಪೊಲೀಸ್ ಅಧೀಕ್ಷಕರಾದ ಡಾ.ಶೋಭಾರಾಣಿ ವಿ.ಜೆ ಅವರು ತಿಳಿಸಿದ್ದಾರೆ. ಓಟವು ಕನಕದುರ್ಗಮ್ಮ ದೇವಸ್ಥಾನದ ಆವರಣದಿಂದ ಆರಂಭವಾಗಿ ಗಡಿಗಿ ಚೆನ್ನಪ್ಪ ವೃತ್ತ, ಹೆಚ್.ಆರ್.ಗವಿಯಪ್ಪ ವೃತ್ತ, ಡಾ.ಬಿ.ಆರ್.ಅಂಬೇಡ್ಕರ್ ವೃತ್ತ, ವಾಲ್ಮೀಕಿ(ಎಸ್.ಪಿ) ವೃತ್ತ, ತಾಳೂರು ರಸ್ತೆ ಕ್ರಾಸ್ ಮೂಲಕ ಮರಳಿ ಕನಕದುರ್ಗಮ್ಮ ದೇವಸ್ಥಾನ ಆವರಣದವರೆಗೆ ನಡೆಯಲಿದೆ.

## ಕೃಷಿ ಇಲಾಖೆ: ಆಕ್ಷೇಪಣೆಗಳಿಗೆ ಆಹ್ವಾನ

ಮಲ್ಲಮ ನುಡಿ ವಾರ್ತೆ

ಬಳ್ಳಾರಿ,ಮಾ.06–ಕೃಷಿ ಇಲಾಖೆ ವತಿಯಿಂದ 2023–24 ನೇ ಸಾಲಿನ ಕರ್ನಾಟಕ ರೈತ ಸುರಕ್ಷಾ ಪ್ರಧಾನಮಂತ್ರಿ ಫಸಲ್ ಭೀಮಾ ಯೋಜನೆಯಡಿ ಸಲ್ಲಿಸಿದ ಮುಂಗಾರು ಹಂಗಾಮಿನ ಬೆಳೆ ವಿಮೆ ಪ್ರಸ್ತಾವನೆಗಳು ಬೆಳೆ ಸಮೀಕ್ಷೆಯೊಂದಿಗೆ ಹೊಂದಾಣಿಕೆಯಾಗದೇ ಇರುವ ಕುರಿತು ವಿಮಾ ಸಂಸ್ಥೆಯವರಿಂದ ತಿರಸ್ಕೃತಗೊಂಡ ಪ್ರಸ್ತಾವನೆಗಳಿಗೆ ಆಕ್ಷೇಪಣೆ ಸಲ್ಲಿಸಬಹುದು ಎಂದು ಸಹಾಯಕ ಕೃಷಿ ನಿರ್ದೇಶಕರು ತಿಳಿಸಿದ್ದಾರೆ.

ಬಳ್ಳಾರಿ ತಾಲ್ಲೂಕಿನಲ್ಲಿ 23 ಪ್ರಸ್ತಾವನೆ ಹಾಗೂ ಕುರುಗೋಡು ತಾಲ್ಲೂಕಿನಲ್ಲಿ 3 ಪ್ರಸ್ತಾವನೆ ತಿರಸ್ಕೃತಗೊಂಡಿರುತ್ತವೆ. ತಿರಸ್ಕೃತಗೊಂಡ ರೈತರ ಪ್ರಸ್ತಾವನೆ ವಿವರಗಳನ್ನು ಈಗಾಗಲೇ ರೈತ ಸಂಪರ್ಕ ಕೇಂದ್ರಗಳಲ್ಲಿ ಪ್ರಕಟಿಸಲಾಗಿದೆ.

ಹಾಗಾಗಿ ರೈತರು ಆಕ್ಷೇಪಣೆಗಳೇನಾದರೂ ಇದ್ದಲ್ಲಿ ಮಾ.10 ರೊಳಗೆ ಸಲ್ಲಿಸಬೇಕು. ಮುಂದುವರೆದು ನಿಗದಿತ ಸಮಯದಲ್ಲಿ ಆಕ್ಷೇಪಣೆ ಸಲ್ಲಿಸದಿದ್ದಲ್ಲಿ ಅಂತಹ ಪ್ರಸ್ತಾವನೆಗಳನ್ನು ಅಸಿಂಧು ಎಂದು ಪರಿಗಣಿಸಲಾಗುವುದು.

ಹೆಚ್ಚಿನ ಮಾಹಿತಿಗಾಗಿ ಸಂಬಂಧಪಟ್ಟ ರೈತ ಸಂಪರ್ಕ ಕೇಂದ್ರ, ಸಹಾಯಕ ಕೃಷಿ ನಿರ್ದೇಶಕರ ಕಚೇರಿಗೆ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಭಯ ಇಲ್ಲದೇ ಆತ್ಮವಿಶ್ವಾಸದಿಂದ ಪರೀಕ್ಷೆ ಎದುರಿಸಿ: ಜಿಪಂ ಸಿಇಒ ಮಹಮ್ಮದ್ ಹಾರೀಸ್ ಸುಮೇರ್



ಮಲ್ಲಮ ನುಡಿ ವಾರ್ತೆ

ಬಳ್ಳಾರಿ,ಮಾ.06–ವಿದ್ಯಾರ್ಥಿ ಜೀವನದಲ್ಲಿ ಎಸ್‌ಎಸ್‌ಎಲ್‌ಸಿ ಒಂದು ಮಹತ್ವದ ಘಟ್ಟವಾಗಿದ್ದು, ಮಕ್ಕಳು ಪರೀಕ್ಷೆಯ ಬಗ್ಗೆ ಗೊಂದಲ, ಭಯ ಇಲ್ಲದೇ ಆತ್ಮವಿಶ್ವಾಸದಿಂದ ಪರೀ–ಕ್ಷೆ ಎದುರಿಸಬೇಕು ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹಾರೀಸ್ ಸುಮೇರ್ ಅವರು ಹೇಳಿದರು.

ಕುರುಗೋಡು ತಾಪಂ, ಬಾದನಹಟ್ಟಿ ಗ್ರಾಪಂ ಇವರ ಆಶ್ರಯದಲ್ಲಿ ಬಾದನಹಟ್ಟಿ ಗ್ರಾಮದ ಸರ್ಕಾರಿ ಪ್ರೌಢಶಾಲೆಯಲ್ಲಿ ಗುರುವಾರದಂದು 2024–25ನೇ ಸಾಲಿನ ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳಿಗೆ ಹಮ್ಮಿಕೊಂಡಿದ್ದ ಪರೀಕ್ಷಾ ಪೂರ್ವ ತರಬೇತಿ ಕಾರ್ಯಾಗಾರ ಉದ್ಘಾಟಿಸಿ ಅವರು ಮಾತನಾಡಿದರು.

ಸರ್ಕಾರವು ಶಿಕ್ಷಣ ಕ್ಷೇತ್ರಕ್ಕೆ ಹೆಚ್ಚು ಒತ್ತು ನೀಡಿ, ಸಾಕಷ್ಟು ಅನುದಾನ ಮತ್ತು ವಿನೂತನ ಕಾರ್ಯಕ್ರಮಗಳನ್ನು ಜಾರಿ ಮಾಡಿದೆ. ಶಿಕ್ಷಕರು ಮಕ್ಕಳನ್ನು ಸಮರ್ಥವಾಗಿ ಹಾಗೂ ಸಮರ್ಪಕವಾಗಿ ಪರೀಕ್ಷೆಗಳನ್ನು ಎದುರಿಸಲು ಅವರಲ್ಲಿ ಆತ್ಮವಿಶ್ವಾಸ ಮೂಡಿಸಬೇಕು ಎಂದು ತಿಳಿಸಿದರು.

ಶಿಕ್ಷಕರು ಶಾಲೆಯ ಪ್ರತಿ ಮಗುವನ್ನು ತಮ್ಮ ಸ್ವಂತ ಮಕ್ಕಳಂತೆ ಕಾಣಬೇಕು. ಮಕ್ಕಳ ಮೂಲಭೂತ ಶಿಕ್ಷಣಕ್ಕೆ ಆದ್ಯತೆ ನೀಡಬೇಕು. ವಿದ್ಯಾರ್ಥಿಗಳಲ್ಲಿ ಭರವಸೆ ಮೂಡಿಸುವ, ಶಕ್ತಿ ತುಂಬುವ ಕಾರ್ಯವನ್ನು ಸರ್ಕಾರದಿಂದ ವಿವಿಧ ಕಾರ್ಯಕ್ರಮಗಳ ಮೂಲಕ ಮಾಡಲಾಗುತ್ತಿದೆ ಎಂದರು.

ಶೈಕ್ಷಣಿಕವಾಗಿ ಬೆಳೆಯಲು ಪ್ರಾಥಮಿಕ ಹಂತದಿಂದ ಪ್ರತಿ ಮಗು ಉತ್ತಮ ಓದು ಬರಹ ಕಲಿಯಬೇಕು. ಅಂದಾಗ ಮಾತ್ರ ಸಾಧನೆಯ ಗುರಿ ತಲುಪಲು ಸಾಧ್ಯ ಎಂದು ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು. ಕಾರ್ಯಕ್ರಮದಲ್ಲಿ ಹತ್ತನೇಯ ವರ್ಗದ ವಿದ್ಯಾರ್ಥಿ–ವಿದ್ಯಾರ್ಥಿನೀಯರು ತಮ್ಮ ಆತಂಕ, ಆಕಾಂಕ್ಷೆ–ಗೊಂದಲಗಳ ಕುರಿತು ಜಿಪಂ ಸಿಇಒ ಅವರೊಂದಿಗೆ ಸಂವಾದ ನಡೆಸಿದರು.

ಈ ಸಂದರ್ಭದಲ್ಲಿ ಕುರುಗೋಡು ತಾಪಂ ಕಾರ್ಯನಿರ್ವಾಹಕ ಅಧಿಕಾರಿ, ಕೆ.ವಿ.ನಿರ್ಮಲ, ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯ ಸಹಾಯಕ ನಿರ್ದೇಶಕ ಪಿ.ಶಿವರಾಮರೆಡ್ಡಿ, ತಾಲ್ಲೂಕು ಯೋಜನಾಧಿಕಾರಿ ರಾಧಿಕ, ಪಂಚಾಯತ್ ರಾಜ್ ಅಭಿವೃದ್ಧಿಯ ಸಹಾಯಕ ನಿರ್ದೇಶಕ ಅನೀಲ್ ಕುಮಾರ್ ಸೇರಿದಂತೆ ತಾಲ್ಲೂಕಿನ ಎಲ್ಲಾ ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು, ತಾಲ್ಲೂಕು ನರೇಗಾ ಸಿಬ್ಬಂದಿಯವರು ಹಾಗೂ ತಾಲ್ಲೂಕು ಪಂಚಾಯತ್ ಸಿಬ್ಬಂದಿ ಹಾಜರಿದ್ದರು.

# ತುಂಗಭದ್ರಾ ಮಡಿಲಿನ ಹಚ್ಚಹಸಿರಿನ ವನ ಈ ಪಂಪಾವನ






(ವೀರಯ್ಯ ವಿ ಹಿರೇಮಠ)

ಮಲ್ಲಮ ನುಡಿ ವಾರ್ತೆ

ಕೊಪ್ಪಳ: ಉದ್ಯಾನಗಳೆಂದರೆ ಅಲ್ಲಿ ಶಾಂತಿಯುಉಸಿರಾಡಬೇಕು. ಮನಸ್ಸು ಮತ್ತು ಬುದ್ಧಿ ನೆಮ್ಮದಿಯಿಂದ ವಿರಮಿಸುತ್ತಾ, ಉಲ್ಲಾಸಭರಿತವಾಗಿರಬೇಕು ಎಂಬುದು ಜಪಾನಿಯರ ಮೂಲ ಉದ್ದೇಶ. ಇವರು ವಿನ್ಯಾಸಮಾಡುವ ಉದ್ಯಾನಗಳ ಕಲೆ ಮನುಷ್ಯನಲ್ಲಡಗಿರುವ ಶಕ್ತಿ–ಚೈತನ್ಯಗಳು ಸದಾ–ಕಾಲ ಅರಳುವುದಕ್ಕೆ ಎಡೆ ಮಾಡಿಕೊಡುತ್ತವೆ. ಕಾವೇರಿಯಿಂದ ಗೋದಾವರಿಯುವರೆಗೆ ವಿಸ್ತರಿಸಿದ್ದ ನಮ್ಮ ಕನ್ನಡ ನಾಡು ವೈವಿಧ್ಯಮಯ ನಿಸರ್ಗ ತಾಣಗಳಿಂದ ಕಂಗೊಳಿಸುತ್ತಿದ್ದ ಸಮೃದ್ಧ ನಾಡಾಗಿತ್ತೆಂದು ಇತಿಹಾಸ ಹೇಳುತ್ತದೆ. ಇಲ್ಲಿನ ಪ್ರಕೃತಿ– ಪರಿಸರ, ಚೆಲುವಿನ ಗಿರಿಧಾಮಗಳಿಂದ ಪ್ರಭಾವಿತನಾಗಿ ಆದಿಕವಿ ಪಂಪನು.. 'ಮರಿ ದುಂಬಿಯಾಗಿ ಮೇಣ್ ಕೋಗಿಲೆಯಾಗಿ ಪುಟ್ಟುವುದು ನಂದನದೊಳ್ ವನವಾಸಿ ದೇಶದೊಳ್ ಎಂದು ಬಣ್ಣಿಸಿದ್ದಾನೆ. ಇಂತಹ ನೋಡುಗರ ಕಣ್ ಮನಸೆಳೆಯುವ "ಪಂಪವನವೂ" ಒಂದು. ಕೊಪ್ಪಳ ಜಿಲ್ಲೆಯ ಮುನಿರಾಬಾದ್‌ನ ತುಂಗಭದ್ರ ಯೋಜನಾ ಡ್ಯಾಮ್ ಪ್ರದೇಶದಲ್ಲಿ ನಿರ್ಮಿಸಲಾಗಿರುವ ಪಂಪಾವನ, ತುಂಗಭದ್ರೆಯ ಮಡಿಲಿನಲ್ಲಿ ಅತ್ಯಂತ ಆಕರ್ಷಿತವಾಗಿ ಸಿಂಗರಿಸಿಕೊಂಡು ಕಂಗೊಳಿಸುತ್ತಿದೆ.

ವಿಜಯನಗರ ಜಿಲ್ಲೆಯ ಹೊಸಪೇಟೆಯಿಂದ 8 ಕಿ.ಮೀ, ವಿಶ್ವವಿಖ್ಯಾತ ಹಂಪಿಯಿಂದ 21ಕಿ.ಮಿ, ಜಿಲ್ಲೆಯ ಕೇಂದ್ರ ಸ್ಥಳದಿಂದ 20 ಕಿಲೋ ಮೀಟರ್ ದೂರದಲ್ಲಿದೆ. ಕರ್ನಾಟಕ ರಾಜ್ಯದ ಆರು ವಿಸ್ತಾರವಾದ ಸಾರ್ವಜನಿಕ ಉದ್ಯಾನವನಗಳಲ್ಲಿ ಪಂಪಾವನವೂ ಸಹ ಒಂದಾಗಿದೆ. ಹೈದರಾಬಾದ್ ಕರ್ನಾಟಕ ಪ್ರಾಂತ್ಯದ ಏಕೈಕ ಬೃಹತ್ ಉದ್ಯಾನವನವಾಗಿದೆ. ನೈಸರ್ಗಿಕವಾಗಿ ಕಲ್ಲು ಗುಡ್ಡೆಗಳಿಂದ, ತಗ್ಗು ದಿನ್ನೆಗಳಿಂದ ಹರಡಿಕೊಂಡಿರುವ 66 ಎಕರೆ ಪ್ರದೇಶವನ್ನು 1971 ರಲ್ಲಿ ಉದ್ಯಾನವನ್ನಾಗಿ ನಿರ್ಮಿಸಲಾಗಿದ್ದು, ಜಪಾನ್ ಮಾದರಿಯಲ್ಲಿ ಅಭಿವೃದ್ಧಿ ಪಡಿಸಲಾಗಿದೆ. ವಿವಿಧ ವಿನ್ಯಾಸದ ಸೇತುವೆಗಳು, ಲಾಂದ್ರಗಳು, ನೀರಿನ ಕೊಳಗಳು ಎರಡು ಭವ್ಯವಾದ ಪ್ರವೇಶ ದ್ವಾರಗಳನ್ನು ಹೊಂದಿದೆ. ವಿವಿಧ ಜಾತಿಯ ಅಲಂಕಾರಿಕ ಗಿಡಗಳು, ಪೊದೆಗಳು, ಬಳ್ಳಿಗಳು, ಮರಗಳನ್ನು ಬೆಳೆಸಲಾಗಿದ್ದು, ತುಂತರು ನೀರಾವರಿ, ಹನಿ ನೀರಾವರಿ ಮೂಲಕ ನೀರನ್ನು ಉಣಿಸಲಾಗುತ್ತಿದೆ. ವಿವಿಧ ಅಲಂಕಾರಿಕ ಸಸ್ಯಗಳನ್ನು ಅಭಿವೃದ್ಧಿಗೊಳಿಸಿ ಇಲಾಖೆ ದರದಲ್ಲಿ ಮಾರಾಟ ಮಾಡಲಾಗುತ್ತಿದೆ. ಇಡೀ ಉದ್ಯಾನವನವನ್ನು ಅನೇಕ ಭಾಗಗಳನ್ನಾಗಿ ಮಾಡಲಾಗಿದ್ದು, ಲಿಲ್ಲಿ ಕೊಳ ,ವೃತ್ತಾಕಾರ ಕೊಳ, ಸಂಗ್ರಹಣ ಕೊಳ, ಮೀನಿನ ಆಕಾರದ ಕೊಳ, ಪಾಮ್ ಗ್ರೂಪ್ ಪ್ರದೇಶ, ಸರೋವರ ಪ್ರದೇಶ ಮತ್ತು ಮಕ್ಕಳ ಉದ್ಯಾನವನಗಳೆಂದು ಹೆಸರಿಡಲಾಗಿದೆ.

ಅಪರೂಪವಾಗಿ ಅನೇಕ ವೃಕ್ಷ ಪ್ರಭೇದಗಳು ಸಮೃದ್ಧವಾಗಿ ಬೆಳದುನಿಂತಿವೆ. ಉದ್ಯಾನವನದಲ್ಲಿ ಸುಂದರವೂ ಹಾಗೂ ಹಚ್ಚಹಸುರಿನ ಗಮನ ಸೆಳೆಯುವ ಹುಲ್ಲುಹಾಸುಗಳನ್ನು ನಿರ್ಮಿಸಲಾಗಿದೆ. ಅಲಂಕಾರದ ಹೂವಿನ ಮರಗಳಾದ ನೀಲಿ ತುರಾಯಿ ಮರ, ನಾಗಲಿಂಗ ಪುಷ್ಪ ,ಮುತ್ತುಗ, ಬೂರುಗ, ಮರಸೌತೆ, ಸುರಹೊನ್ನೆ, ಬಿಳಿ ಬೀಟೆ ಮರ, ಶ್ರೀಗಂಧ, ರಕ್ತ ಚಂದನ, ಭಿಕ್ಷೆ ಪಾತ್ರೆ ಮರ, ಕೆಂಡಸಂಪಿಗೆ, ಬಗನಿಮರ ,ಕಂಬದ ಮರ, ಕಕ್ಕೆ ನೀರು ಕಾಯಿ ಮರ, ಸೀತಾ ಅಶೋಕ ಮರ ಇತ್ಯಾದಿಗಳು ದಟ್ಟವಾಗಿ ಹೆಮ್ಮರಗಳಾಗಿ ಬೆಳೆದಿವೆ. 'ಮೋರೆಸೆ' ಕುಟುಂಬಕ್ಕೆ ಸೇರಿದ ಆಲ, ಗೋಣಿ, ಬಸರಿ, ಅರಳಿ ಮತ್ತು ಅತ್ತಿಮರಗಳು ವಿಶಾಲವಾಗಿ ಹರಡಿ, ಗಗನಚುಂಬಿ ಮರಗಳಾಗಿ ಬೆಳೆದಿವೆ. ಅನೇಕ ಅಲಂಕಾರಿಕ ಪೊದೆಗಳು ,ಸುಗಂಧ ಹೂ ಬಿಡುವ ಮರಗಳು, ಬಣ್ಣ ಬದಲಾಯಿಸುವ ಮರಗಳು, ಹೂವಿನ ಮರಗಳು ಇತ್ಯಾದಿಗಳು ದಟ್ಟವಾಗಿ ಬೆಳೆದು ಬೇರೂರಿವೆ. ಕುಬ್ಜ(ಬೋನ್ ಸಾಯಿ) ಗಿಡಗಳ ನರ್ಸರಿ ಇದ್ದು ವಿಶೇಷವಾಗಿ ಬೆಳೆಸಲಾಗುತ್ತಿದೆ. ಫೆಬ್ರವರಿ – ಮಾರ್ಚ್ ತಿಂಗಳಲ್ಲಿ ಜಕರಂಡಾ, ಫಿಲ್ಟೋ ಫಾರ್ಮ್, ಮಳೆ ಮರ, ಹೊಳೆ ದಾಸವಾಳ, ಕಕ್ಕೆ ಮರಗಳ ಪುಷ್ಪೋತ್ಸವವು ಸಿಂಗಾರ ಮಾಡಿಕೊಂಡು ಉದ್ಯಾನವನಕ್ಕೆ ಸೌಂದರ್ಯವನ್ನು ಹೆಚ್ಚಿಸುತ್ತದೆ . ನಿಸರ್ಗ ಆರಾಧಕರಲ್ಲಿ ಮೈಮನಗಳನ್ನು ತಣಿಸಿ ಪುಳಕಿತವನ್ನುಂಟು ಮಾಡುತ್ತದೆ.

ಜಪಾನ್ ಮಾದರಿಯ "ಪಗೋಡಗಳು" ಈ ಪಾರ್ಕಿನಲ್ಲಿ ನಿರ್ಮಿಸಿರುವುದು ಮೆರಗನ್ನು ತಂದಿದೆ. ಕ್ರಿಸ್ತಶಕ 6ನೇ ಶತಮಾನದಲ್ಲಿ ಜಪಾನ್ ರಾಜವಂಶಸ್ಥರು ಅಪಾರ ನಿಸರ್ಗ ಪ್ರೇಮದಿಂದ, ಉದ್ಯಾನಗಳ ನಿರ್ಮಾಣಕ್ಕೆ ಹಾಗೂ ಸೌಂದರ್ಯಕ್ಕೆ ವಿಶೇಷ ಒತ್ತು ಕೊಟ್ಟರು. ಇದರ ಪರಿಣಾಮವಾಗಿ ಇಂದು 'ಜಪಾನಿ ಉದ್ಯಾನ ಕಲೆ' ಜಾಗತಿಕವಾಗಿ ಗಮನ ಸೆಳೆದಿದೆ. ವಿಶಾಲ ಹಸಿರಿನಿಂದ ಆಕಾಶವನ್ನು ಮುಟ್ಟಲು ಮೇಲೇರುವ ಪಗೋಡಗಳು, ಹೊರಗಡೆ ಸುಡು ಬಿಸಿಲಿದ್ದರೂ ಒಳಗಡೆ ತಂಪಾದ ಅನುಭವವನ್ನು ನೀಡುತ್ತವೆ. ವಿವಿಧ ಅಂತಸ್ತುಗಳಿಂದ ನಿರ್ಮಾಣವಾಗಿದ್ದು ತಮ್ಮ ಸೌಂದರ್ಯವನ್ನು ಉಳಿಸಿಕೊಳ್ಳುತ್ತಾ ಜಪಾನಿನ ರಾಯಭಾರಿಗಳಂತೆ ಕಂಗೊಳಿಸುತ್ತಿವೆ. ಚಿತ್ತಾಕರ್ಷಕ 'ಜಪಾನಿ ಲಾಂದ್ರ'ಗಳ ವಿನ್ಯಾಸಗಳನ್ನು ಈ ಉದ್ಯಾನವನದಲ್ಲಿ ಜೋಡಿಸಿರುವುದು ಮತ್ತೊಂದು ವಿಶೇಷ. ನಾಲ್ಕು ಬಗೆಯ ಉದ್ಯಾನ ಲಾಂದ್ರಗಳಿದ್ದು, ಸ್ತಂಭಲಾಂದ್ರ, ಮುಸುಕುಲಾಂದ್ರ, ಕ್ರಿಸ್ತರ ಮಾದರಿಲಾಂದ್ರ, ಶಿಲಾಲಾಂದ್ರಗಳು ಚಂದವಾಗಿ ಅಲಂಕಾರಗೊಂಡು ಪ್ರೇಕ್ಷಕರನ್ನು ಆಕರ್ಷಿಸುತ್ತಿವೆ.

ಮಕ್ಕಳ ಉದ್ಯಾನವನ, ಡೈನೋಸಾರ್ ಉದ್ಯಾನವೆಂದು ಪಾರ್ಕ್ ನಲ್ಲಿ ಅಭಿವೃದ್ಧಿಪಡಿಸಲಾಗಿದೆ. 1989ರಲ್ಲಿ ಈ ಪಾರ್ಕ್ ನಲ್ಲಿ ಮೊದಲ ಬಾರಿಗೆ ನಡೆದ ಫಲಪುಷ್ಪ ಪ್ರದರ್ಶನಕ್ಕೆ, ಉದ್ಘಾಟನಾ ಮುಖ್ಯ ಅತಿಥಿಯಾಗಿ ತೆ–ೋಟಗಾರಿಕಾ ಪಿತಾಮಹ, ಭಾರತದ ಮೂಲೆ ಮೂಲೆಗೂ ರೈತರ, ಜನಸಾಮಾನ್ಯರ ಕಸುಬಾಗಿ ತೋಟಗಾರಿಕೆಯನ್ನು ಮಾಡಿದ, ದಕ್ಷ, ಪ್ರಾಮಾಣಿಕ ಅಧಿಕಾರಿ ಡಾ. ಎಮ್. ಹೆಚ್. ಮರಿಗೌಡರು ಆಗಮಿಸಿದ್ದರು. ಮುನಿರಾಬಾದಿನ ಕೂಗಳತೆಯ ದೂರದಲ್ಲಿರುವ ಹುಲಿಗಿ ಎಂಬಾ ಗ್ರಾಮವಿದೆ ಇದೊಂದು ಪ್ರಖ್ಯಾತ ಕ್ಷೇತ್ರವಾಗಿದ್ದು ತುಂಗಭದ್ರ ದಡದಲ್ಲಿ 14–15 ಶತಮಾನದಿಂದಲು ವಿರಾಜಿಸಲ್ಪಡುತ್ತಿದೆ, ಇದು ಶ್ರೀ ಹುಲಿಗಮ್ಮ ದೇವಿಯವರ ದೇವಸ್ತಾನವಿದ್ದು, ಶಕ್ತಿಪೀಠವಾಗಿದೆ. ಸುಮಾರು 800 ವರ್ಷಗಳ ಭವ್ಯ ಇತಿಹಾಸವನ್ನು ಹೊಂದಿದ್ದು ಉತ್ತರ ಕರ್ನಾಟಕದ ಭಕ್ತರನ್ನು ಸದಾ ಆಕರ್ಷಿಸುತ್ತಿದೆ. ಪ್ರತಿ ಮಂಗಳವಾರ, ಶುಕ್ರವಾರ ಹುಣಿಮ್ಮೆಯ ದಿನಗಳಂದು ವಿಶೇಷವಾಗಿ ಭಕ್ತರ ಸ್ತೋಮವಿರುತ್ತದೆ. ಈ ಪವಿತ್ರ ಕ್ಷೇತ್ರಕ್ಕೆ ಬರುವ ಭಕ್ತಾದಿಗಳು ಮುನಿರಾಬಾದಿನ ಈ ಪಂಪಾವನಕ್ಕೆ ಭೇಟಿ ನೀಡುತ್ತಾರೆ. ಆನೆಗುಂದಿ–ಮುನಿರಾಬಾದ್ ರಸ್ತೆಯಲ್ಲಿರುವ ಆನೆಗುಂದಿ ಇಂದ ಸುಮಾರು 3 ಕಿ.ಮೀ ದೂರದಲ್ಲಿ ಅಂಜನಾದ್ರಿ ಪರ್ವತವಿದೆ. ಈ ದೇವಾಲಯಕ್ಕೆ ಭೇಟಿ ನೀಡುವ ಉತ್ತರ ಭಾರತೀಯರು ಹಾಗೂ ವಿದೇಶಿಯರು ಈ ಉದ್ಯಾನವನಕ್ಕೆ ಭೇಟಿ ನೀಡುತ್ತಾರೆ. ಇಡೀ ಉದ್ಯಾನವನದ ಪರಿಸರವನ್ನು ನೋಡುತ್ತಾ ಆನಂದವನ್ನು ಸವಿಯುತ್ತಾರೆ.

ಉದ್ಯಾನವನದ ಎದುರಿಗೆ ಜಿಲ್ಲಾ ಶಿಕ್ಷಣಾ ಮತ್ತು ತರಬೇತಿ ಸಂಸ್ಥೆ ಇದ್ದು ಇಲ್ಲಿ ನಡೆಯುವ ತರಬೇತಿಗಳನ್ನು ಪಡೆಯಲು ಆಗಮಿಸುವ ಶಿಕ್ಷಕರು ಈ ಉದ್ಯಾನವನದ ಜೀವ ವೈವಿಧ್ಯತೆಯನ್ನು ನೋಡಿ ಆನಂದಿಸುತ್ತಾರೆ. ವಿದ್ಯಾರ್ಥಿಗಳು, ಶಿಕ್ಷಕರು, ಉಪನ್ಯಾಸಕರು ಕ್ಷೇತ್ರ ಅಧ್ಯಯನ ಮಾಡಲು ಇಲ್ಲಿಗೆ ಆಗಮಿಸುತ್ತಾರೆ. ಇದೊಂದು "ಜೀವಂತ ಪ್ರಯೋಗಶಾಲೆ" ಹಾಗೂ ಅನೇಕರ ಕಣ್ಮನ ಸೆಳೆಯುವ ಆಕರ್ಷಕ ಮತ್ತು ಅಪರೂಪದ ಉದ್ಯಾನವಾಗಿದೆ. ನೂತನ ವಧು–ವರರು ಆಗಮಿಸಿ ಪ್ರಿ–ವೆಡ್ಡಿಂಗ್ ಫೋಟೋ ಶೂಟಿಂಗ್ನಲ್ಲಿ ಭಾಗವಹಿಸುತ್ತಾರೆ. ಕನ್ನಡ ಮತ್ತು ತೆಲುಗು ಚಲನ ಚಿತ್ರಗಳ ಚಿತ್ರೀಕರಣ ಈ ಪಾರ್ಕ್ನಲ್ಲಿ ನಡೆದಿರುವುದು ಮತ್ತೊಂದು ವಿಶೇಷ. ಪಂಪಾವನ ತನ್ನ ಚೆಲುವು ಚಿತ್ತಾರಗಳಿಂದ ನಿಸರ್ಗ ದೇವಿಯ ಕಣ್ಮನ ಸೆಳೆಯುವ ರಮ್ಯನೆಲೆಯಾಗಿ ಸದಾ ಕಂಗೊಳಿಸುತ್ತದೆ.

## ಮಾ.08 ರಂದು ವಿದ್ಯುತ್ ವ್ಯತ್ಯಯ

ಮಲ್ಲಮ ನುಡಿ ವಾರ್ತೆ

ಬಳ್ಳಾರಿ,ಮಾ.06–ಬಳ್ಳಾರಿ ಗ್ರಾಮೀಣ ಜೆಸ್ಕಾಂನ 220/110/11ಕೆ.ವಿ ಅಲ್ಲೀಪುರ ಸ್ವೀಕರಣ ಕೇಂದ್ರದ ಎಫ್–37 ಮತ್ತು ಎಫ್–38 ಕೈಗಾರಿಕಾ ಫೀಡರ್‌ಗಳ ಹೆಚ್ಚುವರಿ ಭಾರವನ್ನು ಎಫ್–71 ಹರಗಿನದೋಣಿ ಎನ್.ಜೆ.ವೈ ಫೀಡರ್ ಮೇಲೆ ವರ್ಗಾಹಿಸುವ ಕಾಮಗಾರಿ ತುರ್ತಾಗಿ ಕೈಗೊಳ್ಳುತ್ತಿರುವುದರಿಂದ ಮಾ.08 ರಂದು ಬೆಳಿಗ್ಗೆ 10 ಗಂಟೆಯಿಂದ ಸಂಜೆ 03 ಗಂಟೆಯವರೆಗೆ ವಿವಿಧ 11ಕೆ.ವಿ ಮಾರ್ಗಗಳಲ್ಲಿ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ. *ವಿದ್ಯುತ್ ವ್ಯತ್ಯಯವಾಗುವ ಪ್ರದೇಶಗಳು: ಎಫ್–32 ಐ.ಪಿ ಸೆಟ್ ಫೀಡರ್ ಮಾರ್ಗದ ಬೆಳಗಲ್ಲು, ಬೆಳಗಲ್ಲು ತಾಂಡ, ಜಾನೆಕುಂಟೆ, ಜಾನೆಕುಂಟೆ ತಾಂಡ, ಹರಗಿನದೋಣಿ, ಅಲ್ಲೀಪುರ, ಆಲದಹಳ್ಳಿ, ಕೃಷಿ ಪ್ರದೇಶಗಳು. ಎಫ್–37 ಬೆಳಗಲ್ಲು ತಾಂಡ ಕೈಗಾರಿಕೆ ಪ್ರದೇಶ ಫೀಡರ್ ಮಾರ್ಗದ ಬೆಳಗಲ್ಲು ಗ್ರಾಮ, ಬೆಳಗಲ್ಲು ತಾಂಡ ಕೈಗಾರಿಕೆ ಪ್ರದೇಶ. ಎಫ್–38 ಬೆಳಗಲ್ಲು ತಾಂಡ ಕೈಗಾರಿಕೆ ಪ್ರದೇಶ ಫೀಡರ್ ಮಾರ್ಗದ ಬೆಳಗಲ್ಲು ಬೆಳಗಲ್ಲು ತಾಂಡ, ಜಾನೆಕುಂಟೆ, ಜಾನೆಕುಂಟೆ ತಾಂಡ, ಹರಗಿನದೋಣಿ ಗ್ರಾಮ.

## ಎಫ್ ಎಲ್ ಏನ್ ಕಲಿಕಾ ಹಬ್ಬ ಯಶಸ್ವಿಗೊಳಿಸಿ : ಮಂಜುನಾಥಯ್ಯ ತಗ್ಗಿನಮನಿ



ಮಲ್ಲಮ ನುಡಿ ವಾರ್ತೆ

ಕೊಪ್ಪಳ:ಕುಕನೂರತಾಲೂಕಿನ ಯಡಿಯಾಪುರ ಹಾಗೂ ಕೂಕನೂರು ಗ್ರಾಮೀಣ ಕ್ಲಸ್ಟರ್ ಮಟ್ಟದ ಎಫ್ ಎಲ್ ಎನ್ ಕಲಿಕಾ ಹಬ್ಬವನ್ನು ಸರಕಾರಿ ಹಿರಿಯ ಪ್ರಾಥಮಿಕ ಶಾಲೆ ಶಿರೂರಿನಲ್ಲಿ ನಡೆಸಲಾಯಿತು.

ಕಾರ್ಯಕ್ರಮದಅಧ್ಯಕ್ಷತೆಯನ್ನು ಎಸ್‌ಡಿಎಂಸಿ ಅಧ್ಯಕ್ಷರಾದ ಬೀರಪ್ಪ ಹುಬ್ಬಳ್ಳಿ ಯವರು ವಹಿಸಿಕೊಂಡಿದ್ದರು.ಕಾರ್ಯಕ್ರಮದ ಉದ್ಘಾಟನೆಯನ್ನುಸ್ಥಳೀಯ ಗ್ರಾಮಪಂಚಾಯತ್‌ಅಧ್ಯಕ್ಷರಾದ ಮಲ್ಲಮ್ಮ ಜ್ಯೋತಿ ಸಸಿಗೆ ನೀರು ಹೂಣಿಸುವದರ ಮುಖಾಂತರ ಚಾಲನೆ ನೀಡಿದರು. ಪ್ರಾಸ್ತಾವಿಕವಾಗಿ ಯಡಿಯಾಪುರ ವಲಯದ ಸಿ ಆರ್ ಪಿ ಮಂಜುನಾಥಯ್ಯ ತೇಗ್ಗಿಮನಿ ಮಾತನಾಡುತ್ತಾ ಶಿಕ್ಷಣ ಇಲಾಖೆಯ ಮಹತ್ವಕಾಂಕ್ಷಿಯೋಜನೆಯದ ಎಫ್‌ಎಲ್‌ಏನ್‌ಕಲಿಕಾಹಬ್ಬವನ್ನು ಯಶಸ್ವಿಗೊಳಿಸಬೇಕು ಎಂದು ಹೇಳಿದರು. ಶಶಿಧರ್ ಕಲ್ಲೂರು ವಂದಿಸಿದರು. ಪ್ರಶಾಂತ್ ಕಂದಗಲ್ ನಿರೂಪಿಸಿದರು.

ಈ ಸಂದರ್ಭದಲ್ಲಿ ವೀರೇಂದ್ರ ಮಾದಿನೂರು, ಮಲ್ಲಪ್ಪ ಬಂಗಾರಿ, ಮಹೇಶ್ ಸಬರದ, ಮಾರುತೇಶ್ ತಳವಾರ, ಶಂಭುಲಿಂಗಪ್ಪ ಹರಿಶಿಣದ, ಸಂಗಪ್ಪ ರಾಜೂರ, ಲಕ್ಷ್ಮಣ್ ಹಿರೇಮನಿ,ಎಚ್.ಎಸ್ ಶಿವರೆಡ್ಡಿ, ಶರಣಪ್ಪ ಗೌಡ ಹಾಳಕೇರಿ, ಶಂಕ್ರಪ್ಪ ಹರಿಜನ, ವೀರೇಶ್ ಬಡಿಗೇರ, ಅಮಿಗೇಶ ಮೇಟಿ, ಸುರೇಶ್ ಮಡಿವಾಳರ, ಹಾಗೂ ಇತರರು ಇದ್ದರು.

## ಬಾಗಲಕೋಟೆಯಲ್ಲಿ ಮಾ. 14 ರಿಂದ 16 ರವರೆಗೆ ಬಣ್ಣದೋಕುಳಿ ಶಾಂತಿ, ಸಂಭ್ರಮದಿಂದ ಹೋಳಿ ಹಬ್ಬ ಆಚರಿಸಿ : ಡಿಸಿ ಜಾನಕಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮಾ.5-ಪ್ರತಿವರ್ಷದಂತೆ ಈ ವರ್ಷವೂ ಜಿಲ್ಲೆಯಲ್ಲಿ ಮಾರ್ಚ 14 ರಿಂದ 16 ವರೆಗೆ ನಡೆಯಲಿರುವ ಹೋಳಿ ಸಂಭ್ರಮದ ಗತವೈಭವ ಮರುಕಳುಹಿಸುವ ನಿಟ್ಟಿನಲ್ಲಿ ಹೋಳಿ ಹಬ್ಬವನ್ನು ಶಾಂತಿ ಹಾಗೂ ಸಂಭ್ರಮದಿಂದ ಆಚರಿಸುವಂತೆ ಜಿಲ್ಲಾಧಿಕಾರಿ ಜಾನಕಿ ಕೆ.ಎಂ ಹೇಳಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸೋಮವಾರ ಸಂಜೆ ಹೋಳಿ ಹಬ್ಬ ಆಚರಣೆ ಸಂಬಂಧ ಜರುಗಿದ ಶಾಂತತಾ ಸಭೆಯ ಅದ್ಯಕ್ಷತೆ ವಹಿಸಿ ಮಾತನಾಡಿದ ಅವರು, ಹಬ್ಬಗಳು ಇರುವುದು ಸಂಭ್ರಮಾಚರಣೆಗಾಗಿ. ಆದ್ದರಿಂದ ದೇಶದಲ್ಲಿಯೇ 2ನೇ ಸ್ಥಾನ ಪಡೆದಿರುವ ಬಾಗಲಕೋಟೆ ಹೋಳಿ ಹಬ್ಬ ಶಿಸ್ತಿನಿಂದ ಅಚ್ಚುಕಟ್ಟಾಗಿ ನಡೆಯಬೇಕಿದೆ. ನಗರದ ಅನೇಕ ಸಂಘಟನೆಗಳು ತಮ್ಮ ತಮ್ಮ ವ್ಯಾಪ್ತಿಯಲ್ಲಿ ಸ್ವತಃ ಸ್ವಯಂ ಸೇವಕರಾಗಿ ಕೆಲಸ ಮಾಡಿ ಶಾಂತಿ ಕಾಪಾಡುವ ಜೊತೆಗೆ ಜಿಲ್ಲಾಡಳಿತ ಹಾಗೂ ಪೊಲೀಸ್ ಇಲಾಖೆಯ ಜೊತೆ ಸಹಕರಿಸಬೇಕು ಎಂದರು.

ಅದೇಷ್ಟೋ ಸಂಭ್ರಮದಿಂದ ಹಬ್ಬ ಆಚರಿಸಿದರೂ ಖುಷಿಪಡೆಯದೇ ಸಣ್ಣದೊಂದು ಘಟನೆಯನ್ನು ದೊಡ್ಡದನ್ನಾಗಿ ಬಿಂಬಿಸುವ ಕಾರ್ಯವಾಗಬಾರದು. ಸಂತೋಷದಿಂದ ಪರಸ್ಪರ ಸೌಹಾರ್ದತೆಯಿಂದ ಹೋಳಿ ಹಬ್ಬ ಆಚರಿಸುವಂತೆ ಹೋಳಿ ಸಮಿತಿಗೆ ಕರೆ ನೀಡಿದರಲ್ಲದೇ, ಈ ಸಮಯದಲ್ಲಿ ಪಿಯುಸಿ ಪರೀಕ್ಷೆಗಳು ನಡೆಯುತ್ತಿರುವುದರಿಂದ ಪರೀಕ್ಷಾರ್ಥಿಗಳಿಗೆ ತೊಂದರೆಯಾಗದಂತೆ ಹೋಳಿ ಸಮಿತಿಯವರು ನಿಗಾವಹಿಸಬೇಕು. ಆಚರಣೆಯಲ್ಲಿ ಸಮಸ್ಯೆ ಉಂಟಾದಲ್ಲಿ ನೇರವಾಗಿ ಪೊಲೀಸ್ ಇಲಾಖೆಗೆ ಸಂಪರ್ಕಿಸಬೇಕು.

ಹೋಳಿ ಆಚರಣೆಗೆ ಬಿಡುಗಡೆ-ಯಾದ ಅನುದಾನ ಮರಳಿ ತರಲು ಕ್ರಮವಹಿಸುವುದಾಗಿ ತಿಳಿಸಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅಮರನಾಥ ರೆಡ್ಡಿ ಮಾತನಾಡಿ, ಹಬ್ಬಗಳೆಂದರೆ ಸಂಭ್ರಮಿಸುವುದು ಸಹಜ. ಆದರೆ ಸಂಭ್ರಮಾಚರಣೆಯಲ್ಲಿ ಯಾವುದೇ ರೀತಿಯ ಅಹಿತಕರ ಘಟನೆಗೆ ಅವಕಾಶ ಕೊಡಬಾರದು. ಹಬ್ಬದ ಆಚರಣೆಗೆ ಪೊಲೀಸ್ ಇಲಾಖೆ ಎಲ್ಲ ರೀತಿಯ ಸಹಕಾರ ನೀಡಲಾಗುತ್ತಿದೆ. ಹಲಗೆ ಮೇಳ ಸ್ಪರ್ಧೆಗಳು ನಡೆಯುವ ಸ್ಥಳಗಳ ಮಾಹಿತಿ ನೀಡಿದಲ್ಲಿ ಸೂಕ್ತ ವ್ಯವಸ್ಥೆ ಕಲ್ಪಿಸಿಕೊಡಲಾಗುವುದು. ಹಬ್ಬದ ಬಂದೋಬಸ್ತಗಾಗಿ ಹೊರಗಡೆಯಿಂದ ಬಂದ ಪೊಲೀಸ್ ಸಿಬ್ಬಂದಿಗಳಿಗೆ ಸ್ಥಳೀಯ ನಾಯಕರು, ಸಂಘಟಿ-ಕರ ಪರಿಚಯವಿರುವದಿಲ್ಲ. ಅಂತಹ ಸಿಬ್ಬಂದಿಗಳೊಂದಿಗೆ ಸಹಕರಿಸಿಕೊಂಡು ಹಬ್ಬದ ಯಶಸ್ವಿಗೆ ಸಹಕರಿಸಲು ತಿಳಿಸಿದರು.

ಹೋಳಿ ಸಮಿತಿಯ ಪ್ರತಿನಿಧಿ ಮಹಾಬಳೇಶ ಗುಡಗುಂಟಿ ಮಾತನಾಡಿ, ಮಾರ್ಚ 12 ರಿಂದ ಹೋಳಿ ಹಬ್ಬ ಪ್ರಾರಂಭಗೊಳ್ಳುತ್ತಿದ್ದು, ಮಾರ್ಚ 13 ರಂದು ಕಾಮದಹನವಾಗುತ್ತದೆ. ಮಾರ್ಚ 14 ರಿಂದ 16 ವರೆಗೆ ಮೂರು ದಿನಗಳ ಕಾಲ ಬಣ್ಣದೋಕುಳಿ ಜರುಗಲಿದೆ. 14 ರಂದು ಕಿಲ್ಲಾ, ನವನಗರ ಹಾಗೂ ವಿದ್ಯಾಗಿರಿ, 15 ರಂದು ಹಳಪೇಟೆ, ಜೈನ ಪೇಟೆ ಹಾಗೂ ವೆಂಕಟಪೇಟೆ, 16 ರಂದು ಹೊಸಪೇಟೆ ಓಣಿಯಲ್ಲಿ ಬಣ್ಣದೋಕುಳಿ ನಡೆಯಲಿದೆ ಎಂದರು.

ಇದರ ಜೊತೆಗೆ ಸೋಗಿನ ಬಂಡಿ ಮೆರವಣಿಗೆ ಕೂಡಾ ಜರುಗಲಿದ್ದು, 13 ಕಿಲ್ಲಾ, 14 ಹಳಪೇಟೆ, 15 ಹೊಸಪೇಟಿ, 16 ಜೈನ ಪೇಟೆ, 17 ವೆಂಕಟಪೇಟೆ ಹಾಗೂ ವಿದ್ಯಾಗಿರಿಯಲ್ಲಿ ನಡೆಯಲಿದೆ. ನಗರದ ಬಸವೇಶ್ವರ ವೃತ್ತದ ಬಳಿ ಇರುವ ಹೊಳೆ ಆಂಜನೇಯ ದೇವಸ್ಥಾನದ ಆವರಣ ಹಾಗೂ ಕಿಲ್ಲಾ ಅಂಬಾಭವಾನಿ ದೇವಸ್ಥಾನದ ಬಳಿ ರೇನ್‌ಡ್ಯಾನ್ಸ್ ನಡೆಯಲಿದೆ ಎಂದು ಹೇಳಿದರಲ್ಲದೇ, ಈ ಹಿಂದೆ ಹೋಳಿ ಆಚರಣೆಗೆ ಜಿಲ್ಲೆಗೆ ನೀಡಲಾದ 10 ಲಕ್ಷ ರೂ.ಗಳ ಅನುದಾನ ಮರಳಿ ಪಡೆಯುವಂತೆ ಜಿಲ್ಲಾಧಿಕಾರಿಗಳಿಗೆ ಮನವಿ ಮಾಡಿಕೊಂಡರು.

ಎ.ಎ.ದಂಡಿಯಾ ಮತ್ತು ಟಂಕಸಾಲಿ ಮಾತನಾಡಿ, ರಂಜಾನ ತಿಂಗಳು ಆರಂಭಗೊಂಡಿದ್ದು, ಇದೇ ಸಮಯದಲ್ಲಿ ಹೋಳಿ ಹಬ್ಬ ಬಂದಿರುವದರಿಂದ ಎರಡು ಹಬ್ಬಗಳನ್ನು ಸಂಭ್ರಮದಿಂದ ಆಚರಿಸಲಾಗುವುದೆಂದು ತಿಳಿಸಿದರು.

ಸಭೆಯಲ್ಲಿ ಅಪರ ಪೊಲೀಸ್ ವರಿಷ್ಠಾಧಿಕಾರಿ ಮಾಂತೇಶ ಜಿದ್ದಿ, ಡಿವಾಯ್‌ಎಸ್‌ಪಿ ಬಿರಾದಾರ, ನವನಗರ ಸಿಪಿಐ ಗುರುನಾಥ ಚವ್ಹಾಣ ಸೇರಿದಂತೆ ಹೋಳಿ ಸಮಿತಿಯ ಪ್ರತಿನಿಧಿಗಳಾದ ಕಳಕಪ್ಪ ಬಾದವಾಡಗಿ, ಅಶೋಕ ಲಿಂಬಾವಳಿ, ಸಂಜು ವಾಡಕರ, ನಾಗರಾಜ ಹದ್ಲಿ, ಶ್ರಣವ ಖಾತೇದಾರ, ಬಸವರಾಜ ಧರ್ಮಂತಿ, ಶಿವುಕುಮಾರ ನಂದಿಕೋಳಮಠ, ವಿವೇಕಾನಂದ ಗರಸಂಗಿ ಉಪಸ್ಥಿತರಿದ್ದರು.


## ಎಂ ಎಸ್ ಪಿ ಎಲ್ ಕಾರ್ಖಾನೆ ಸ್ಥಗಿತಕ್ಕೆ ಕೊನೆಗೂ ಆದೇಶ ಹೊರಡಿಸಿದ ಅಪರ ಜಿಲ್ಲಾಧಿಕಾರಿ : ಸಿದ್ರಾಮೇಶ್ವರ



ಮಲ್ಲಮ ನುಡಿ ವಾರ್ತೆ

ಕೊಪ್ಪಳ: ಜಿಲ್ಲಾ ಕೇಂದ್ರದ ಸಮೀಪದಲ್ಲಿ ಎಂ ಎಸ್ ಪಿ ಎಲ್ ಕಂಪನಿ ಉಕ್ಕಿನ ಕಾರ್ಖಾನೆ ಸ್ಥಾಪನೆ ಮಾಡಿಕೊಳ್ಳುತ್ತಿರುವ ಸಿದ್ಧತೆಯನ್ನು ಮುಖ್ಯಮಂತ್ರಿ ಸೂಚನೆ ಮೇರೆಗೆ ಗುರುವಾರ ಸ್ಥಗಿತಗೊಳಿಸಲಾಗಿದೆ.

ಕಾರ್ಖಾನೆ ಆರಂಭವಾದರೆ ಕೊಪ್ಪಳ ಜಿಲ್ಲೆಯ ಸಾರ್ವಜನಿಕರಿಗೆ ಆಗುವ ಪರಿಣಾಮಗಳ ಬಗ್ಗೆ ಕೊಪ್ಪಳ ಜಿಲ್ಲೆಯ ಎಲ್ಲಾ ಪಕ್ಷಗಳ ರಾಜಕೀಯ ನಾಯಕರು ಎರಡು ದಿನಗಳ ಹಿಂದೆ ಬೆಂಗಳೂರಿಗೆ ತೆರಳಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಭೇಟಿ ಮಾಡಿ ಮನವಿ ಸಲ್ಲಿಸಲಾಗಿತ್ತು.



ಕರ್ನಾಟಕಸರ್ಕಾರ
ಜಿಲ್ಲಾಧಿಕಾರಿಗಳಕಾರ್ಯಾಲಯ, ಕೊಪ್ಪಳಜಿಲ್ಲೆ, ಕೊಪ್ಪಳ - 583231

ದಿನಾಂಕ: 06/03/2025

:: ಸ್ಪಷ್ಟೀಕರಣ ::

ಬಿಎಸ್‌ಪಿಎಲ್ ಕಾರ್ಖಾನೆಯಲ್ಲಿ ನಡೆಯುತ್ತಿದ್ದ ಕಾಮಗಾರಿಯನ್ನು ಮಾನ್ಯ ಮುಖ್ಯಮಂತ್ರಿಗಳು, ಕರ್ನಾಟಕ ಸರಕಾರ ರವರ ಸೂಚನೆಯ ಮೇರೆಗೆ ಜಿಲ್ಲಾಡಳಿತದಿಂದ ಸ್ಥಗಿತಗೊಳಿಸಲಾಗಿರುತ್ತದೆ. ಪ್ರಸ್ತುತ ಯಾವುದೇ ಕಾಮಗಾರಿಯು ನಡೆಯುತ್ತಿರುವುದಿಲ್ಲವೆಂದು ಈ ಮೂಲಕ ತಿಳಿಸಿದೆ.

6/3/25
ಅಪರ ಜಿಲ್ಲಾಧಿಕಾರಿಗಳು, ಕೊಪ್ಪಳ

ಪ್ರತಿಯನ್ನು ಜಿಲ್ಲಾ ವಾರ್ತಾ ಅಧಿಕಾರಿಗಳು, ಕೊಪ್ಪಳ ಇವರಿಗೆ ಕಳುಹಿಸುತ್ತಾ, ಸದರಿ ಮಾಹಿತಿಯನ್ನು ಎಲ್ಲಾ ದಿನಪತ್ರಿಕೆಗಳಲ್ಲಿ ಪ್ರಚುರಪಡಿಸಲು ಸೂಚಿಸಲಾಗಿದೆ.

ಮುಖ್ಯಮಂತ್ರಿಗಳು ಕೊಪ್ಪಳ ಜಿಲ್ಲಾಧಿಕಾರಿ ನಲಿನ್ ಅತುಲ್ ಅವರಿಗೆ ಕಾರ್ಖಾನೆ ಕೆಲಸ ಸ್ಥಗಿತಗೊಳಿಸಲು ಸೂಚಿಸಿದ್ದರು.

ಆದರೂ ಕೂಡ ಬುಧವಾರ ಕಾರ್ಖಾನೆ ಆವರಣದಲ್ಲಿ ಎಂದಿನಂತೆ ಕೆಲಸ ನಡೆದಿತ್ತು. ಈ ಕುರಿತು ಗುರುವಾರ ಮಾಧ್ಯಮಗಳಲ್ಲಿ ವರದಿ ಪ್ರಕಟವಾದ ಬಳಿಕ ಎಚ್ಚೆತ್ತುಕೊಂಡ ಜಿಲ್ಲಾಡಳಿತ ಕಾರ್ಖಾನೆ ಕಾಮಗಾರಿ ಕೆಲಸ ಸ್ಥಗಿತ ಗೊಳಿಸಲು ಕ್ರಮ ತೆಗೆದುಕೊಳ್ಳಲಾಯಿತು.

ಬಳಿಕಾ ಮಾಧ್ಯಮಗಳಿಗೆ ಪತ್ರಿಕಾ ಹೇಳಿಕೆ ಬಿಡುಗಡೆ ಮಾಡಿರುವ ಹೆಚ್ಚುವರಿ ಜಿಲ್ಲಾಧಿಕಾರಿ ಸಿದ್ರಾಮೇಶ್ವರ 'ಮುಖ್ಯಮಂತ್ರಿಯ ಸೂಚನೆಯ ಮೇರೆಗೆ ಎಂ ಎಸ್ ಪಿ ಎಲ್ ನ ಕಾಮಗಾರಿ ಸ್ಥಗಿತ ಗೊಳಿಸಲಾಗಿದೆ ಎಂದು ಹೇಳಿದರು. ಈ ಕುರಿತು ಕಾರ್ಖಾನೆ ಸ್ಥಳಕ್ಕೆ 'ಮಲ್ಲಮ್ಮ ನುಡಿ ಕೊಪ್ಪಳ ಜಿಲ್ಲಾ ವರದಿಗಾರರು ' ಭೇಟಿ ನೀಡಿ ಪರಿಶೀಲಿಸಿದಾಗ ಟಿಪ್ಪರ್‌ಗಳ ಓಡಾಟ, ಮಣ್ಣು ಸಮತಟ್ಟು ಮಾಡುವ ಕೆಲಸ ಸ್ಥಗಿತಗೊಂಡಿದೆ ಎಂದು ತಿಳಿದುಬಂದಿದೆ.

## ತೊಗರಿ ಖರೀದಿ ಕೇಂದ್ರಕ್ಕೆ ಚಾಲನೆ ನೀಡಿದ ಟಿ.ಎಪಿ.ಸಿ.ಎಂ.ಎಸ್.ಅಧ್ಯಕ್ಷ ಶಶಿಧರ ಪಾಟೀಲ್ ಆಶಿಹಾಳ..

ಮಲ್ಲಮ್ಮ ನುಡಿ ವಾರ್ತೆ

ಲಿಂಗಸೂಗೂರು: ಪಟ್ಟಣದ ಕೃಷಿ ಉತ್ಪನ್ನ ಮಾರುಕಟ್ಟೆ ಯಲ್ಲಿ ತೊಗರಿ ಖರೀದಿ ಕೇಂದ್ರಕ್ಕೆ ಚಾಲನೆ ನೀಡಿದ ಟಿ.ಎಪಿ.ಸಿ.ಎಂ.ಎಸ್.ಅಧ್ಯಕ್ಷ ಶಶಿಧರ ಪಾಟೀಲ್ ಆಶಿಹಾಳ. ತಾಲೂಕಿನ ತೊಗರಿ ಬೆಳೆದ ರೈತರು ಇದರ ಸದುಪಯೋಗ ಪಡೆಯಬೇಕೆಂದು ಹೇಳಿದರು.

ಪ್ರತಿ ರೈತರಿಂದ ಎಕರೆಗೆ ನಾಲ್ಕು ಕ್ವಿಂಟಾಲ್ ಹತ್ತು ಕ್ವಿಂಟಾಲ್ ಗರಿಷ್ಠ 40 ಕ್ವಿಂಟಾಲ್ ತೊಗರಿ ಖರೀದಿ ಮಾಡಲಾಗುತ್ತದೆ.

ಯಾವುದೇ ಸೂಟ್, ಕಮೀಷನ್ ಇರುವುದಿಲ್ಲ, ಚೀಲದ ವೇಟ್ ಮಾತ್ರ ಕಟ್ ಮಾಡಲಾಗುತ್ತದೆ, ಈಗಾಗಲೇ 252 ರೈತರು ಆನ್ಲೈನ್ ಮೂಲಕ ನೊಂದಣಿ ಮಾಡಿಕೊಂಡಿದ್ದಾರೆ,



ಇನ್ನುಳಿದ ರೈತರಿಂದ ನೊಂದಣಿ ಮಾಡಿಸಿಕೊಳ್ಳಲಾಗುದೆ ಎಂದು ಅಧ್ಯಕ್ಷರು ಹೇಳಿದರು. ಆರ್ ಎಸ್ ಕೆಯವರು ಜಿಪಿಎಸ್ ಮಾಡಿದ ರೈತರ ತೊಗರಿ ಖರೀದಿಸಲಾಗುತ್ತದೆ. ಕೇಂದ್ರ ಸರ್ಕಾರದ ರೂ 7550 ಹಾಗೂ ರಾಜ್ಯ ಸರ್ಕಾರದ ರೂ 450 ಒಟ್ಟು ಎಂಟು ಸಾವಿರ ರೂಪಾಯಿಗಳಿಗೆ ಒಂದು ಕ್ವಿಂಟಾಲ್ ತೊಗರಿ ಖರೀದಿಸಲಾಗುತ್ತದೆ.

ಈ ವೇಳೆ ಎಪಿಎಂಸಿ ಅಧ್ಯಕ್ಷ ಅಮರೇಶ ಹೆಸರೂರು, ಕಾರ್ಯದರ್ಶಿ ರಂಗನಾಥ್ ದೇಸಾಯಿ, ನಿರ್ದೇಶಕರಾದ ಮಹದೇವಯ್ಯ ಗೌಡೂರ, ಶರಣಗೌಡ ಮಾಲಿಪಾಟೀಲ, ರುದ್ರಗೌಡ ಪಾಟೀಲ್, ರೈತರಾದ ಶಿವು ಗ್ಯಾನಪ್ಪ ಐದನಾಳ, ಹನುಮಂತಪ್ಪ ಹೀರೆ ದಿನ್ನಿ, ಶಿವಪ್ಪ ಹುನಕುಂಟಿ ಶರಣಪ್ಪ, ಬಸವರಾಜ ಸೇರಿದಂತೆ ಇದ್ದರು.

## ಮಾ.08ರಂದು ರಾಷ್ಟ್ರೀಯ ಲೋಕ ಅದಾಲತ್

ಮಲ್ಲಮ್ಮ ನುಡಿ ವಾರ್ತೆ

ರಾಯಚೂರ ಮಾರ್ಚ 6- ಇಲ್ಲಿನ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ವತಿಯಿಂದ ಮಾ.08ರ ಬೆಳಿಗ್ಗೆ 10ಗಂಟೆಗೆ ಜಿಲ್ಲಾ ನ್ಯಾಯಾಲಯದಲ್ಲಿ ರಾಷ್ಟ್ರೀಯ ಲೋಕ ಅದಾಲತ್ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದು ಹಿರಿಯ ಶ್ರೇಣಿ ದಿವಾಣಿ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಹೆಚ್.ಎ.ಸಾತ್ವಿಕ್ ಅವರು ತಿಳಿಸಿದ್ದಾರೆ.

ಜಿಲ್ಲೆಯ ಎಲ್ಲಾ ತಾಲ್ಲೂಕುಗಳಲ್ಲಿ ರಾಷ್ಟ್ರೀಯ ಲೋಕ ಅದಾಲತ್ ನಿಗದಿಪಡಿಸಲಾಗಿದೆ. ನ್ಯಾಯಾಲಯದಲ್ಲಿ ಬಾಕಿ ಇರುವ ಸಿವಿಲ್ ಮತ್ತು ಕ್ರಿಮಿನಲ್ (ರಾಜಿಯಾಗುವಂತಹ) ಮೊಕ್ಕದಮ್ಮೆಗಳನ್ನು, ಮೋಟಾರವಾಹನ ಕಾಯ್ದೆ, ಕುಟುಂಬ ನ್ಯಾಯಾಲಯದ ಪ್ರಕರಣಗಳು ಮತ್ತು ಎಲ್ಲಾ ಬಗೆಯ ಪ್ರಕರಣಗಳನ್ನು (ಕೇಸುಗಳನ್ನು) ಲೋಕ ಅದಾಲತ್ ಮುಖಾಂತರ ಇತ್ಯರ್ಥಗೊಳಿಸಲಾಗುವುದು. ಆದ್ದ-ರಿಂದ ವಕೀಲರು, ಕಕ್ಷಿದಾರರು, ನ್ಯಾಯಾಲಯದಲ್ಲಿ ಬಾಕಿ ಇರುವ ಹಾಗೂ ವ್ಯಾಜ್ಯ ಪೂರ್ವ ಪ್ರಕರಣಗಳನ್ನು (ಕೇಸುಗಳನ್ನು) ರಾಷ್ಟ್ರೀಯ ಲೋಕ ಅದಾಲತ್ ಮೂಲಕ ಇತ್ಯರ್ಥಪಡಿಸಿಕೊಳ್ಳಲು ಸದಾವಕಾಶವನ್ನು ಒದಗಿಸಲಾಗಿದೆ.

ಎಲ್ಲಾ ವಕೀಲರು, ಕಕ್ಷಿದಾರರು, ನ್ಯಾಯಾಲಯದಲ್ಲಿ ಬಾಕಿ ಇರುವ ಹಾಗೂ ವ್ಯಾಜ್ಯಪೂರ್ವ ಎಲ್ಲಾ ಬಗೆಯ ಕೇಸುಗಳನ್ನು ಲೋಕ ಅದಾಲತ್‌ನಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಇತ್ಯರ್ಥಪಡಿಸಿಕೊಳ್ಳುವಂತೆ ಹಿರಿಯ ಶ್ರೇಣಿ ದಿವಾಣಿ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪ್ರತಿಯೊಂದು ಇಲಾಖೆಯು ಕೈಜೋಡಿಸಿದಾಗ ಬಾಲಕಾರ್ಮಿಕ ಪದ್ಧತಿ ನಿರ್ಮೂಲನೆ ಮಾಡಲು ಸಾಧ್ಯ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ: ಮಾರ್ಚ್ 06-: ಪ್ರತಿಯೊಂದು ಇಲಾಖೆಯು ಕೈಜೊಡಿಸಿದಾಗ ಬಾಲಕಾರ್ಮಿಕ ಪದ್ಧತಿ ಎಂಬ ಅನಿಷ್ಠ ಪದ್ಧತಿಯನ್ನು ನಿರ್ಮೂಲನೆ ಮಾಡಲು ಸಾಧ್ಯ ಎಂದು ಗೌರವಾನ್ವಿತ ತಾಲ್ಲೂಕು ಕಾನೂನು ಸೇವಾ ಸಮಿತಿಯ ಅಧ್ಯಕ್ಷರು ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರು ಶ್ರೀಮತಿ ಫಕೀರವ್ವ ಕೆಳಗೇರಿ ಅವರು ಹೇಳಿದರು.

ಸುರಪುರ ನಗರದ ವೇಣುಗೋಪಾಲಸ್ವಾಮಿ ರಸ್ತೆಯಿಂದ ಮಾರುಕಟ್ಟೆ ರಸ್ತೆ, ಗಾಂಧಿ ವೃತ್ತದವರೆಗೆ ಅಂಗಡಿ ಮತ್ತು ವಾಣಿಜ್ಯ ಸಂಸ್ಥೆಗಳು, ಗ್ಯಾರೇಜ್‌ಗಳು ಮತ್ತು ಹೊಟೇಲ್‌ಗಳಲ್ಲಿ ಹಠಾತ್ ದಾಳಿ, ತಪಾಸಣೆ ನಡೆಸಿ "ಬಾಲ್ಯಾವಸ್ಥೆ ಹಾಗೂ ಕಿಶೋರಾವಸ್ಥೆ ಕಾರ್ಮಿಕ (ನಿಷೇಧ ಮತ್ತು ನಿಯಂತ್ರಣ) ಕಾಯ್ದೆ 1986, ತಿದ್ದುಪಡಿ ಕಾಯ್ದೆ 2016ರ" ಕುರಿತು ಜಾಗೃತಿ ಮೂಡಿಸಿ ಅವರು ಮಾತನಾಡಿದರು.

ರಾಷ್ಟ್ರೀಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ, ನವದೆಹಲಿ ಮತ್ತು ಕಾರ್ಮಿಕ ಆಯುಕ್ತರು ಬೆಂಗಳೂರು ರವರ ಸೂಚನೆಯಂತೆ, PAN-INDIA Rescue and Rehabilitation Campaign 2.0 –"A Step to Eradicate Child Labour"(PAN-INDIA ರಕ್ಷಣೆ ಮತ್ತು ಪುನರ್ವಸತಿ ಅಭಿಯಾನ-ಬಾಲಕಾರ್ಮಿಕ ಪದ್ಧತಿ ನಿರ್ಮೂಲನೆಗೆ ಒಂದು ಹೆಜ್ಜೆ) ಅಂಗವಾಗಿ ಬಾಲ ಹಾಗೂ ಕಿಶೋರ ಕಾರ್ಮಿಕರನ್ನು ರಕ್ಷಿಸಿ, ಪುನರ್ವಸತಿಗೊಳಿಸಿ ಶಿಕ್ಷಣ ಮುಂದುವರಿಕೆಗೆ ಅವಕಾಶ ಮಾಡಿಕೊಡುವ ಉದ್ದೇಶದಿಂದ 2025ರ ಜನವರಿ 10 ರಿಂದ ಮಾರ್ಚ್ 31ರ ವರೆಗೆ ರಕ್ಷಣಾ ಕಾರ್ಯಚರಣೆಗೆ ಸರಕಾರದ ಪ್ರತಿಯೊಂದು ಇಲಾಖೆಯು ಕೈಜೊಡಿಸಿದಾಗ ಮಾತ್ರ ಸಾಧ್ಯ ಎಂದು ತಿಳಿಸಿದರು.

ಜಿಲ್ಲಾ ಬಾಲಕಾರ್ಮಿಕ ಯೋಜನಾ ನಿರ್ದೇಶಕರಾದ ಶ್ರೀ ರಿಯಾಜ್ ಪಟೇಲ್ ವರ್ಕನಳ್ಳಿ ಮಾತನಾಡಿ, ಜಿಲ್ಲೆಯ ಬಾಲಕಾರ್ಮಿಕ ಮುಕ್ತಜಿಲ್ಲೆಯನ್ನಾಗಿಸಬೇಕೆಂದು ಕಾರ್ಮಿಕ ಇಲಾಖೆಯಿಂದ ನಿರಂತರವಾಗಿ ಜನ-ಜಾಗೃತಿ, ಕಾನೂನು ಅರಿವು-ನೆರವು ಕಾರ್ಯಕ್ರಮ, ಬೀದಿನಾಟಕ ಮತ್ತು ಆಟೋ-ಪ್ರಚಾರ ಕಾರ್ಯಕ್ರಮಗಳನ್ನು ನಿರಂತರವಾಗಿ ನಡೆಸಲಾಗುತ್ತಿದೆ. ಇದನ್ನು ಮೀರಿಯೂ ಸಹ ಮಕ್ಕಳನ್ನು ಕೆಲಸಕ್ಕೆ ನೇಮಿಸಿಕೊಂಡಲ್ಲಿ ಅಂತಹ ಅಂಗಡಿ ಮಾಲೀಕರ ವಿರುದ್ಧ ಕಾನೂನು ರೀತಿ ಕ್ರಮ ತೆಗೆದುಕೊಳ್ಳಲಾಗುವುದೆಂದು ತಿಳಿಸಿದರು.

ಸುರಪುರ ಕಾರ್ಮಿಕ ನಿರೀಕ್ಷಕರಾದ ಶಿವಪ್ಪ ಜಮದಾರ್ ರವರು ಮಾತನಾಡಿ, ಬಾಲಕಾರ್ಮಿಕ ಮತ್ತು ಕಿಶೋರ ಕಾರ್ಮಿಕ ಮಕ್ಕಳನ್ನು ಕೆಲಸಕ್ಕೆ ಇಟ್ಟುಕೊಂಡಲ್ಲಿ ಅಂತಹ ಅಂಗಡಿ ಮಾಲೀಕರ ವಿರುದ್ಧ ರೂ, 20,000 ರೂಗಳಿಂದ 50,000 ರೂಗಳವರೆಗೆ ದಂಡ ಮತ್ತು 6 ತಿಂಗಳಿಂದ 2 ವರ್ಷದವರೆಗೆ ಜೈಲು ಶಿಕ್ಷೆ ಅಥವಾ ಎರಡನ್ನು ಸಹ ವಿಧಿಸಲಾಗುವುದು ಎಂದು ತಿಳಿಸಿದರು.

ತಪಾಸಣೆ/ಹಠಾತ್ ದಾಳಿ ಸಂದರ್ಭದಲ್ಲಿ ತಾಲ್ಲೂಕು ಪಂಚಾಯತ್ ಭೀಮನಗೌಡ ಕಂದಾಯ ಇಲಾಖೆಯ ಅಶೋಕ, ಆರೋಗ್ಯ ಇಲಾಖೆಯ ಜೆ.ಕೆ ಪವಾರ್, ಸಮಾಜ ಕಲ್ಯಾಣ ಇಲಾಖೆಯ ರಮೇಶ, ಕೈಗಾರಿಕಾ ಇಲಾಖೆಯ ಶೇಖ್ ಮೆಹಬೂಬ್, ರೇಷ್ಮೆ ಇಲಾಖೆಯ ಭೀಮಣ್ಣ, ಶಿಶು ಅಭಿವೃದ್ಧಿ ಇಲಾಖೆಯ ಮಹ್ಮದ್, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಶ್ರೀಮತಿ ನೀಲಮ್ಮ, ಜಿಲ್ಲಾ ಮಕ್ಕಳ ರಕ್ಷಣ ಘಟಕ ಮಕ್ಕಳ ಸಹಾಯವಾಣಿ 1098/112ನ ವೆಂಕಟೇಶ, ಮಾರ್ಗದರ್ಶಿ ಸಂಸ್ಥೆಯ ಹನುಮಂತ ಎ, ಕಾರ್ಮಿಕ ಇಲಾಖೆಯ ಎಲ್ ಎನ್ ಚೌಧರಿ, ರಮೇಶ ಕೆಲ್ಲೂರು ಉಪಸ್ಥಿತರಿದ್ದರು.

## ಹುಲಿ ಗುಡ್ಡದ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಯಲ್ಲಿ, ಕಲಿಕಾ ಹಬ್ಬ



ಮಲ್ಲಮ್ಮ ನುಡಿ ವಾರ್ತೆ

ಲಿಂಗಸುಗೂರ:ಶಿಕ್ಷಣ ನಿಂತ ನೀರಲ್ಲ ಹರೆಯುವ ನದಿ ಇದ್ದ ಹಾಗೆ ಕಲಿಕಾ ಹಬ್ಬ ಪ್ರಾರಂಭ ಮಾಡಿದ್ದರಿಂದ ಮಕ್ಕಳ ಶೈಕ್ಷಣಿಕ ಗುಣಮಟ್ಟ ಹೆಚ್ಚಿಸುವುದರ ಜೊತೆಗೆ ಸರ್ವತೋಮುಖ ಬೆಳವಣಿಗೆಗೆ ಸಹಾಯಕವಾಗುತ್ತದೆ ಎಂದು ಚೆನ್ನಾರೆಡ್ಡಿ ಬಿರಾದಾರ ಹೇಳಿದರು.

ಅವರು ಪುರಸಭೆ ವ್ಯಾಪ್ತಿಯ 18 ನೇ ವಾರ್ಡಿನ ಹುಲಿ ಗುಡ್ಡದ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆ, ಕಲಿಕಾ ಹಬ್ಬ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿ ಕಲಿಕಾ ಅನುಭವ ಕಾಟಾಚಾರಕ್ಕೆ ಮಾಡಬಾರದು ಇದು ನಿರಂತರವಾಗಿ ಬಿ ಆರ್ ಸಿ ವಲಯಗಳಲ್ಲಿ 26 ಶಾಲೆಗಳಲ್ಲಿ ನಿರಂತರ ಪ್ರಕ್ರಿಯೆಯಾಗಬೇಕು ಕಲಿಕಾ ಹಬ್ಬವನ್ನು ಪ್ರಾರಂಭ ಮಾಡಿರುವುದು ಬಹಳ ಸಂತೋಷದ ವಿಷಯ ಮಕ್ಕಳ ಶಿಕ್ಷಣದ ಗುಣಮಟ್ಟ ಹೆಚ್ಚಿಸುತ್ತದೆ ಎಂದು ಹೇಳಿದರು.

ಶಿಕ್ಷಣ ಇಲಾಖೆಯ ಹನುಮಂತಪ್ಪ ಕುಳಗೇರಿ ಮಾತನಾಡಿದರು.

ಈ ಸಂದರ್ಭದಲ್ಲಿ ಶಿಕ್ಷಕರ ಸಂಘದ ಅಧ್ಯಕ್ಷರಾದ ಹಾಜಿಬಾಬು, ಸಂಗಯ್ಯ ಗಣಚಾರಿ, ರುದ್ರಮುನಿ ಮೇಟಿ ನಾಗರಾಳ, ಶಾಲೆಯ ಎಸ್ ಡಿ ಎಂ ಸಿ ಅಧ್ಯಕ್ಷರಾದ ಶಂಕರ್ ಮಾದೇವಪ್ಪ, ಶಿಕ್ಷಕಿಂ-ಯರಾದ ಸುಲೋಚನಾ, ಚೆನ್ನಮ್ಮ ಬಿರಾದರ ,ಸುಧಾ ಬಿರಾದರ ಶಾಲೆಯ ಮುಖ್ಯ ಗುರುಗಳಾದ ಶಿವಯೋಗಿ ಗಂಗೋತ್ರಿ ವಾರ್ಡಿನ ನಿವಾಸಿಗಳಾದ ಮುತ್ತಣ್ಣ ಅಲ್ವೆ, ನಾಗರಾಜ, ಕರಸ್ಥಳಪ್ಪ ಬಡಿಗೇರ್, ರವಿ ಭೋವಿ ಹಾಗೂ ಇತರರು ಭಾಗವಹಿಸಿದರು.

## ಸಂಜೀವಿನಿ ಒಕ್ಕೂಟಗಳಿಗೆ ದೂರ ದೃಷ್ಟಿ ಅವಶ್ಯಕ:ಬಸವರಾಜ ಮುಂಡರಗಿ



ಮಲ್ಲಮ ನುಡಿ ವಾರ್ತೆ

ಕೊಪ್ಪಳ : ಇಂದಿನ ಸ್ವಸಹಾಯ ಸಂಘಗಳಿಗೆ ಗ್ರಾಮ ಪಂಚಾಯತ ಸಂಜೀವಿನಿ ಒಕ್ಕೂಟಗಳಿಗೆ ದೂರದೃಷ್ಟಿ ಯೋಜನೆ ಅತ್ಯಾವಶ್ಯಕ ವಾಗಿದೆ ಎಂದು ಸಂಜೀವಿನಿ ಯೋಜನೆಯ ಜಿಲ್ಲಾ ತರಬೇತಿದಾರ ಬಸವರಾಜ ಮುಂಡರಗಿ ಹೇಳಿದರು

ಅವರು ಕೊಪ್ಪಳ ತಾಲೂಕಿನ ಲೇಬಗೇರಿ ಗ್ರಾಮ ಪಂಚಾಯತ ಸಂಜೀವಿನಿ ಒಕ್ಕೂಟದ ದೂರದೃಷ್ಟಿ ಹಾಗೂ ವ್ಯಾಪಾರ ಅಭಿವೃದ್ಧಿ ಯೋಜನೆಯ ಮೂರನೆ ಹಂತದ ತರಬೇತಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು

ಮಹಿಳೆಯರು ಸಾವಲಂಬನೆಯಾಗಿ ಉದ್ಯೋಗ ಮಾಡಲು ಸಂಜೀವಿನಿ ಯೋಜನೆಯಲ್ಲಿ ಸ್ವ ಸಹಾಯ ಗುಂಪು ಸದಸ್ಯರಿಗೆ ಕಡಿಮೆ ಶುಲ್ಕ ದರದಲ್ಲಿ ಸಾಲ ಕೊಟ್ಟು ವಿವಿಧ ಇಲಾಖೆಗಳ ಸರಕಾರಿ ಸೌಲಭ್ಯಗಳನ್ನು ಪಡೆದು ಸ್ವಯಂ ಉದ್ಯೋಗ ಪಡೆಯಲು ಸಹಾಯ ಮಾಡಲಾಗುತ್ತದೆ ,ಹಾಗೂ ಗುಂಪಿನ ಸದಸ್ಯರು ತಯಾರಿಸಿದ ಉತ್ಪನಗಳಿಗೆ ಮಾರುಕಟ್ಟೆಯ ವ್ಯವಸ್ಥೆ ಕಲ್ಪಿಸಲಾಗುತ್ತದೆ ಇತ್ತಿಚಿನ ದಿನಗಳಲ್ಲಿ ಖಾಸಗಿ ಫೈನಾನ್ಸ ಗಳ ಕೀರುಕುಳಗಳಿಂದ ಎಷ್ಟು ಜನ ಸಾಲಕಟ್ಟದೆ ವಿಷ ಸೇವಿಸಿ ಸಾಯುತ್ತಿದ್ದಾರೆ ಯಾವುದೇ ಸಾಲಗಾರರು ಆತಂಕ ಪಡದೆ ಸಂಜೀವಿನಿ ಒಕ್ಕೂದ ಸದಸ್ಯರಾಗಿ ಒಕ್ಕೂಟದಿಂದ ಸಾಲ ಪಡೆದು ಬದುಕು ಕಟ್ಟಿಕೊಳ್ಳಬೇಕು ಮತ್ತು ಹಲವಾರು ತರಬೇತಿಗಳನ್ನು ನೀಡಿ ಸಾವಲಂಬಿಗಳನ್ನಾಗಿ ಮಾಡಲು ಸಂಜೀವಿನಿ ಒಕ್ಕೂಟ ಸಹಕಾರಿಯಾಗಿದೆ ಸದುಪಯೋಗ ಪಡೆಯಲು ಸಲಹೆ ನೀಡಿದರು

ಕಾರ್ಯಕ್ರಮ ಅಧ್ಯಕ್ಷತೆಯನ್ನು ಒಕ್ಕೂಟ ಲಕ್ಷ್ಮಿ ಮಂಜುನಾಥ ಮೇಟಿ ವಹಿಸಿದ್ದರು, ಒಕ್ಕೂಟದ ಪದಾಧಿಕಾರಿಗಳಾಧ ಗುಳ್ಳೆಮ್ಮ ದೊಡ್ಡಮನಿ, ರತ್ನ ನಂದ್ಯಾಪೂರ, ನೂರಜಾನ ವಾಲಿಕಾರ,,ಮತ್ತು ಸಿಬ್ಬಂದಿಗಳಾದ ಎಲ್ ಸಿ ಆರ್.ಪಿ ಅಂಬಮ್ಮ ರಾಮದುರ್ಗಾ, ರಂಜಾನ ವಾಲಿಕರ,, ಪಶು ಸಖಿ ಮುತ್ತಮ ಗೊಲ್ಲರ, ಕೃಷಿ ಸಖಿ ಗಂಗಮಾಳವ್ವ ಸಮುದ್ರಿ, ಎಸ್ ವಿ ಪಿ ಗಂಗಶ್ರೀ ನಂದ್ಯಾಪೂರ, , ಸಂಘದ ಸದಸ್ಯರು ಭಾಗವಹಿಸಿದ್ದರು ಎಂ ಬಿ ಕೆ ಮಂಜುಳಾ ಗೊಲ್ಲರ ಕಾರ್ಯಕ್ರಮ ನಿರೂಪಿಸಿದರು.

# ಶ್ರೀ ಸ್ವಾಮಿ ನಾರಾಯಣ ಗುರುಕುಲ್ ಶಾಲೆಯ ವಿದ್ಯಾರ್ಥಿಗಳಿಂದ ವೃದ್ಧಾಶ್ರಮಕ್ಕೆ ಭೇಟಿ



ಮಲ್ಲಮ್ಮ ನುಡಿ ವಾರ್ತೆ

ಬೀದರ.ಮಾ.06 : ಶ್ರೀ ಸ್ವಾಮಿನಾರಾಯಣಗುರುಕುಲ್ ಶಾಲೆಯವರು ಇತ್ತೀಚೆಗೆ ಬೀದರ್ ನಗರದಲ್ಲಿರುವ ಎರಡು ವೃದ್ಧಾಶ್ರಮಕ್ಕೆ ಭೇಟಿ ನೀಡಿದ ಶಾಲಾ ಮಕ್ಕಳು ಮತ್ತು ಶಿಕ್ಷಕರು ವೃದ್ಧಾಶ್ರಮದಲ್ಲಿ ಇರುವವರ ಯೋಗ ಕ್ಷೇಮ ವಿಚಾರಿಸಿರುವುದು ಶಾಲೆಯವರ ಆದರ್ಶ ಎತ್ತಿ ಹಿಡಿಯುತ್ತಿದೆ.

ಮಕ್ಕಳಿಗೆ ದೊಡ್ಡವರ ಬಗ್ಗೆ ಪ್ರೇಮಪ್ರೀತಿಕಡಿಮೆಯಾಗುತ್ತಿರುವ ಈ ದಿನಗಳಲ್ಲಿ ಈ ಶಾಲೆಯಲ್ಲಿ ತಂದೆ ತಾಯಿ ದೊಡ್ಡವರ ಬಗ್ಗೆ ಯಾವ ರೀತಿ ಗೌರವಿಸಬೇಕು ಪೂಜಿಸಬೇಕು ಎಂಬ ಸಂಸ್ಕೃತಿ ಕಲಿಸುತ್ತಾರೆ. ಇದೇ ಮಾದರಿ ಪ್ರಯೋಗಾರ್ಥವಾಗಿವೃದ್ಧಾಶ್ರಮಕ್ಕೆ ಮಕ್ಕಳನ್ನು ಕರೆದುಕೊಂಡು ಹೋಗಿ ಅಲ್ಲಿ ಇರುವ ವೃದ್ಧರನ್ನು ಮಕ್ಕಳು ತಿಂಡಿ ತಿನಿಸುಗಳನ್ನು ನೀಡಿದರು ಮತ್ತು ಅದರಲ್ಲಿ ಕೆಲ ಮಕ್ಕಳು ವೃದ್ಧರ ಜೊತೆ ಸಂವಾದ ನಡೆಸಿ ಅವರು ಈ ಪರಿಸ್ಥಿತಿಗೆ ಬರಲು ಏನು ಕಾರಣವಾಯಿತು, ಮನೆಯಲ್ಲಿರುವವರು ತಮ್ಮನ್ನು ನೋಡಿಕೊಳ್ಳಲಿಲ್ಲವೇ ಎಂಬ ಇತ್ಯಾದಿ ಪ್ರಶ್ನೆಗಳನ್ನು ಹಾಕಿ ಅವರಿಂದ ಉತ್ತರವನ್ನು ಪಡೆದರು.

6ನೇ ತರಗತಿಯಿಂದ 10ನೇ ತರಗತಿಯ ಮಕ್ಕಳು ಈ ಸಮಯದಲ್ಲಿ ಶಿಕ್ಷಕರ ಜೊತೆಗಿದ್ದರು 10ನೇ ತರಗತಿಯ ಮಕ್ಕಳಾದ ಸಾಯಿಪ್ರಸಾದ್, ವಿಜಯ್ ಕುಮಾರ್, ಸಿದ್ಧಾಂತ ಸ್ವಾಮಿ ಮತ್ತಿತರ ವಿದ್ಯಾರ್ಥಿಗಳು ಈ ಸಂವಾದದಲ್ಲಿ ಭಾಗವಹಿಸಿದರು ಮತ್ತು ಸ್ಕೂಲಿನ ನಿರ್ದೇಶಕರು, ಪ್ರಿನ್ಸಿಪಾಲರು,ಉಪಪ್ರಿನ್ಸಿಪಾಲರು., ಶಿಕ್ಷಕರು ಈ ಸಂದರ್ಭದಲ್ಲಿ ಮಕ್ಕಳ ಜೊತೆಗಿದ್ದರು. ಇದು ಒಂದು ಒಳ್ಳೆ ಸಂದೇಶ ಸಾರುವ ಪ್ರವಾಸವಾಗಿತ್ತು ಎಂದು ಶಾಲೆಯ ಮಕ್ಕಳು ತಿಳಿಸಿರುತ್ತಾರೆ.


# ಸೃಜನಾತ್ಮಕ ಕಲಿಕೆ ಹೆಚ್ಚಳಕ್ಕೆ ಕಲಿಕಾ ಹಬ್ಬಗಳು ಪೂರಕ



ಮಲ್ಲಮ್ಮ ನುಡಿ ವಾರ್ತೆ

ಔರಾದ್:ಮಾ.6:ಸೃಜನಾತ್ಮಕ ಕಲಿಕೆಹಾಗೂ ಮಕ್ಕಳಲ್ಲಿ ಸ್ಪರ್ಧಾ ಮನೋಭಾವ ಹೆಚ್ಚಿಸಲು ಕಲಿಕಾ ಹಬ್ಬಗಳು ಪೂರಕವಾಗಿವೆ ಎಂದು ಚಿಂತಾಕಿ ಸಮೂಹ ಸಂಪನ್ಮೂಲ ವ್ಯಕ್ತಿ ಗೋವಿಂದ ಪಾಟೀಲ್ ಹೇಳಿದರು.ತಾಲೂಕಿನ ಎಕಲಾರ ಕ್ಲಸ್ಟರ್ ಮಟ್ಟದ ಎಫ್ ಎಲ್ ಎನ್ ಕಲಿಕಾ ಹಬ್ಬ ಉದ್ಘಾಟಿಸಿ ಮಾತನಾಡಿದ ಅವರು, ಸರ್ಕಾರಿ ಶಾಲೆಯ ಮಕ್ಕಳಲ್ಲಿ ಅಡಗಿದ ಸೃಜನಾತ್ಮಕ ಕೌಶಲ್ಯ ಬೆಳವಣಿಗೆಗೆ ಇಂತಹ ಹಬ್ಬಗಳು ಉತ್ತಮ ವೇದಿಕೆಯಾಗಿವೆ ಎಂದರು.ಅಜೀಂ ಪ್ರೇಮ್‌ಜಿ ಫೌಂಡೇಶನ್ ತಾಲೂಕು ಸಮನ್ವಯಾಧಿಕಾರಿ ಶಿವಾಜಿ ಬಿರಾದಾರ್ ಮಾತನಾಡಿ, ಎಫ್ ಎಲ್ ಎನ್ ಕಲಿಕಾ ಹಬ್ಬಗಳು ಬುನಾದಿ ಸಾಕ್ಷರತೆ ಹಾಗೂ ಸಂಖ್ಯಾಜ್ಞಾನ ಹೆಚ್ಚಿಸಲು ಮಕ್ಕಳಿಗೆ ಮತ್ತು ಶಿಕ್ಷಕರಿಗೆ ಧನಾತ್ಮಕ ಜವಾಬ್ದಾರಿ ನೀಡಿ ಶಿಕ್ಷಕರಿಗೆ ವೃತ್ತಿ ಸಾಮರ್ಥ್ಯ ಹಾಗೂ ಮಕ್ಕಳ ಜ್ಞಾನಾಭಿವೃದ್ಧಿಗೆ ಸಹಕಾರಿಯಾಗುತ್ತದೆಎಂದರು.ಸಿಆರ್‌ಪಿ ಮಹಾದೇವ ಘುಳೆ, ಎಕಲಾರ ಪ್ರೌಢಶಾಲೆಮುಖ್ಯಶಿಕ್ಷಕ ಜಿ.ಬಿ ಪಾಂಚಾಳ, ಶಿಕ್ಷಕ ಸಂಘದ ಗೌರವಾಧ್ಯಕ್ಷ ಗಜಾನನ ಮಳ್ಳಾ, ಎಕಲಾರ ಪ್ರಾಥಮಿಕ ಶಾಲೆಯ ಮುಖ್ಯಶಿಕ್ಷಕ ಪ್ರಭು ಬಾಳೂರೆ, ಕಲ್ಲಪ್ಪ ಬೋರಾಳೆ, ಅಶೋಕ ಅಸ್ಕಿ, ಸತೀಶ ಮಜಗೆ, ಶರಣಪ್ಪ ಜಟಗೊಂಡ್, ಅಂಬಿಕಾ, ನಿರ್ಮಲಾ ಶೇರಿ, ದಿಗಂಬರ್ ಶಾಂತಪೂರೆ, ಬಾಲಾಜಿ ಅಮರವಾಡಿ, ವೀರಶೆಟ್ಟಿ ಗಾದಗೆ, ಅಂಕುಶ ಪಾಟೀಲ್, ಮಹೇಶ ಪಾಟೀಲ್, ಗಂಗಾಧರ ಸೇರಿದಂತೆ ಇನ್ನಿತರರಿದ್ದರು.

# ಬೀದರ್ ತಾಲ್ಲೂಕು ಕನ್ನಡ ಸಾಹಿತ್ಯ ಸಮ್ಮೇಳನ ನಾಳೆ





ಮಲ್ಲಮ್ಮ ನುಡಿ ವಾರ್ತೆ

ಬೀದರ. ಮಾ. 06 : ಕನ್ನಡ ಸಾಹಿತ್ಯ ಪರಿಷತನ ಜಿಲ್ಲಾ ಹಾಗೂ ತಾಲ್ಲೂಕು ಘಟಕದವತಿಯಿಂದ ತಾಲ್ಲೂಕಿನ ಆಣದೂರು ಗ್ರಾಮದಲ್ಲಿ ಮಾ. 8 ರಂದು ಬೀದರ್ ತಾಲ್ಲೂಕು 8ನೇ ಕನ್ನಡ ಸಾಹಿತ್ಯ ಸಮ್ಮೇಳನ ಹಮ್ಮಿಕೊಳ್ಳಲಾಗಿದೆ ಎಂದು ಕನ್ನಡ ಸಾಹಿತ್ಯ ಪರಿಷತ್ ಜಿಲ್ಲಾ ಘಟಕದ ಅಧ್ಯಕ್ಷ ಸುರೇಶ ಚನಶೆಟ್ಟಿ ತಿಳಿಸಿದ್ದಾರೆ.

ಸಮ್ಮೇಳನದ ಸಕಲ ಸಿದ್ಧತೆಗಳು ಪೂರ್ಣಗೊಂಡಿವೆ. ಜಿಲ್ಲಾ ಘಟಕದ ಪದಾಧಿಕಾರಿಗಳು, ತಾಲ್ಲೂಕು ಘಟಕದ ಅಧ್ಯಕ್ಷ ಟಿ.ಎಂ. ಮಚ್ಚೆ ಹಾಗೂ ಪದಾಧಿಕಾರಿಗಳು ಸಮ್ಮೇಳನದ ಯಶಸ್ಸಿಗೆ ಶ್ರಮಿಸುತ್ತಿದ್ದಾರೆ ಎಂದು ಹೇಳಿದ್ದಾರೆ.

ಸಮ್ಮೇಳನದ ವೇದಿಕೆಗೆ ಸಾಹಿತಿ ಎಂ.ಜಿ. ಗಂಗನಪಳ್ಳಿ, ವಿಶ್ವನಾಥ ಇದಲಾಯಿಕರ್, ಮಹಾದ್ವಾರಕ್ಕೆ ಕಾಜಿ ಅರಶದ್ ಅಲಿ ಹಾಗೂ ಶಶಿಕಲಾ ಮಠಪತಿ ಅವರ ಹೆಸರಿಡಲಾಗಿದೆ ಎಂದು ತಿಳಿಸಿದ್ದಾರೆ. ಇದೇ ಮೊದಲ ಬಾರಿಗೆ ಸಮ್ಮೇಳನದಲ್ಲಿ 'ಹರಟೆ ಕಟ್ಟೆ' ಗೋಷ್ಠಿ ಆಯೋಜಿಸಲಾಗಿದೆ. ಶಿಕ್ಷಣಕ್ಕೆ ಕನ್ನಡ ಅಥವಾ ಆಂಗ್ಲ ಮಾಧ್ಯಮ ಕುರಿತು ಚರ್ಚೆ ನಡೆಯಲಿದೆ. ಮಾ. 8 ರಂದು ಅಂತರರಾಷ್ಟ್ರೀಯ ಮಹಿಳಾ ದಿನವೂ ಇರುವುದರಿಂದ ಮಹಿಳೆಯರನ್ನು ಗೌರವಿಸಲು ಮಹಿಳಾ ಗೋಷ್ಠಿ ಸಹ ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದ್ದಾರೆ.

ಸಮ್ಮೇಳನದಲ್ಲಿ ನಾಲ್ಕು ಗೋಷ್ಠಿಗಳು ಜರುಗಲಿವೆ. ಸಮ್ಮೇಳನ ಸರ್ವಾಧ್ಯಕ್ಷ ಪಂಡಿತ ಬಸವರಾಜ ಅವರ ನೇತೃತ್ವದಲ್ಲಿ ಕನ್ನಡ ತಾಯಿ ಭುವನೇಶ್ವರಿಯ ಅದ್ದೂರಿ ಮೆರವಣಿಗೆ ನಡೆಯಲಿದೆ. ಎತ್ತಿನ ಗಾಡಿಗಳು, ಕಲಾ ತಂಡಗಳು, ದಾರ್ಶನಿಕರು, ಕವಿಗಳ ವೇಷಧಾರಿಗಳು ಗಮನ ಸೆಳೆಯಲಿದ್ದಾರೆ ಎಂದು ಹೇಳಿದ್ದಾರೆ.

ಸಮ್ಮೇಳನದಲ್ಲಿಪಾಲ್ಗೊಳ್ಳುವವರಿಗೆ ಕುಟ್ಟಿದ ಗೋಧಿ ಹುಗ್ಗಿ, ಸಜ್ಜೆ ರೊಟ್ಟಿ, ಬಿಳಿ ಜೋಳದ ರೊಟ್ಟಿ, ಅನ್ನ, ಸಾಂಬಾರು ಊಟದ ವ್ಯವಸ್ಥೆ ಮಾಡಲಾಗಿದೆ ಎಂದು ತಿಳಿಸಿದ್ದಾರೆ.

ಬೆಳಿಗ್ಗೆ 8ಕ್ಕೆ ಸಂಗೊಳ್ಳಿ ರಾಯಣ್ಣ ಪ್ರೌಢಶಾಲೆ ಬಳಿಯಿಂದ ಸಮ್ಮೇಳನ ಸ್ಥಳದವರೆಗೆ ಸಮ್ಮೇಳನದ ಸ್ವಾಗತ ಸಮಿತಿಯ ಅಧ್ಯಕ್ಷರೂ ಆದ ಶಾಸಕ ಡಾ. ಶೈಲೇಂದ್ರ ಬೆಲ್ದಾಳೆ ಅವರ ನೇತೃತ್ವದಲ್ಲಿ ಮೆರವಣಿಗೆ ನಡೆಯಲಿದ್ದು, ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ಕಿರಣ ಪಾಟೀಲ ಚಾಲನೆ ನೀಡಲಿದ್ದಾರೆ ಎಂದು ಹೇಳಿದ್ದಾರೆ.

ಬೆಳಿಗ್ಗೆ 10.30ಕ್ಕೆ ಮಾಣಿಕಪ್ರಭು ದೇವಸ್ಥಾನದಲ್ಲಿ ನಡೆಯುವ ಸಮಾರಂಭದಲ್ಲಿ ವಿಜಯಪುರದ ಕರ್ನಾಟಕ ರಾಜ್ಯ ಅಕ್ಕ ಮಹಾದೇವಿ ಮಹಿಳಾ ವಿಶ್ವವಿದ್ಯಾಲಯದ ಶಿಕ್ಷಣ ಅಧ್ಯಯನ ವಿಭಾಗದ ಪ್ರಾಧ್ಯಾಪಕ ಡಾ. ವಿಷ್ಣು ಎಂ. ಸಿಂಧೆ ಸಮ್ಮೇಳನವನ್ನು ಉದ್ಘಾಟಿಸಲಿದ್ದಾರೆ. ಬಸವಕಲ್ಯಾಣದ ಅನುಭವ ಮಂಟಪದ ಅಧ್ಯಕ್ಷ ಡಾ. ಬಸವಲಿಂಗ ಪಟ್ಟದ್ದೇವರು ಸಾನಿಧ್ಯ, ಆಣದೂರಿನ ಭಂತೆ ಧಮ್ಮಾನಂದ ಮಹಾ ಥೆ–ರೋ ನೇತೃತ್ವ, ಸೇಂಟ್ ಪೌಲ್ ಮೆಥೋಡಿಸ್ಟ್ ಚರ್ಚ್ ಜಿಲ್ಲಾ ಮೇಲ್ವಿಚಾರಕ ನೆಲ್ಸನ್ ಸುಮಿತ್ರಾ ಸಮ್ಮುಖ, ಶಾಸಕ ಡಾ. ಶೈಲೇಂದ್ರ ಬೆಲ್ದಾಳೆ ಅಧ್ಯಕ್ಷತೆ ವಹಿಸಲಿದ್ದಾರೆ. ಸಮ್ಮೇಳನಾಧ್ಯಕ್ಷ ಪಂಡಿತ ಬಸವರಾಜ ಸಮ್ಮೇಳನಾಧ್ಯಕ್ಷರ ನುಡಿ, ಪರಿಷತ್ ಜಿಲ್ಲಾ ಘಟಕದ ಅಧ್ಯಕ್ಷ ಸುರೇಶ ಚನಶೆಟ್ಟಿ ಆಶಯ ನುಡಿ ಆಡಲಿದ್ದಾರೆ ಎಂದು ಹೇಳಿದ್ದಾರೆ. ಪೌರಾಡಳಿತ ಸಚಿವ ರಹೀಂಖಾನ್, ಮಾಜಿ ಸಚಿವ ಬಂಡೆಪ್ಪ ಕಾಶೆಂಪುರ ಮುಖ್ಯ ಅತಿಥಿಯಾಗಿ, ಗ್ರಾ.ಪಂ. ಅಧ್ಯಕ್ಷೆ ಮೀನಾಕ್ಷಿ ಎಂ. ಗುಮತಾಪುರ, ಮುಖಂಡರಾದ ಬಾಬುವಾಲಿ, ಶರಣಪ್ಪ ಸಿಕೇನಪುರ, ಸೋಮಶೇಖರ ಬಿರಾದಾರ, ಪ್ರೊ. ಸಿದ್ರಾಮಪ್ಪ ಮಾಸಿಮಾಡೆ, ಟಿ.ಆರ್. ದೊಡ್ಡೆ, ಶೀದೇವಿ ಅಂಬಾದಾಸ ಅತಿಥಿಗಳಾಗಿ ಪಾಲ್ಗೊಳ್ಳಲಿದ್ದಾರೆ. ಖಾದ್ರಿ ಶಾಮಣ್ಣ ಪ್ರಶಸ್ತಿ ಪುರಸ್ಕೃತ ಪತ್ರಕರ್ತ ಅಪ್ಪಾರಾವ್ ಸೌದಿ, ಬಿ.ಜಿ. ತಿಮ್ಮಪ್ಪಯ್ಯ ಪ್ರಶಸ್ತಿ ಪುರಸ್ಕೃತ ಪತ್ರಕರ್ತ ಶಶಿಕಾಂತ ಶೆಂಬೆಳ್ಳಿ ಅವರನ್ನು ಸನ್ಮಾನಿಸಲಾಗುವುದು ಎಂದು ತಿಳಿಸಿದ್ದಾರೆ.

ಮಧ್ಯಾಹ್ನ 1.30ಕ್ಕೆ ಮೊದಲ ಗೋಷ್ಠಿ, ಮಧ್ಯಾಹ್ನ 2.30ಕ್ಕೆ 'ಹರಟೆ ಕಟ್ಟೆ' ಎರಡನೇ ಗೋಷ್ಠಿ, ಮಧ್ಯಾಹ್ನ 3.30ಕ್ಕೆ ಮಹಿಳಾ ಗೋಷ್ಠಿ, ಸಂಜೆ 4.30ಕ್ಕೆ ಕವಿಗೋಷ್ಠಿ, ಸಂಜೆ 6.30ಕ್ಕೆ ಬಹಿರಂಗ ಅಧಿವೇಶನ, ಸಂಜೆ 6.45ಕ್ಕೆ ಸನ್ಮಾನ ಹಾಗೂ ಸಮಾರೋಪ ಸಮಾರಂಭ ಜರುಗಲಿದೆ ಎಂದು ಹೇಳಿದ್ದಾರೆ.

ಸಮಾರೋಪ ಸಮಾರಂಭದಲ್ಲಿ ಬೀದರ್ ವಿಶ್ವವಿದ್ಯಾಲಯದ ಕುಲಪತಿ ಪ್ರೊ. ಬಿ.ಎಸ್. ಬಿರಾದಾರ ಸಮಾರೋಪ ಭಾಷಣ ಮಾಡಲಿದ್ದಾರೆ. ಶಾಸಕ ಡಾ. ಶೈಲೇಂದ್ರ ಬೆಲ್ದಾಳೆ ಅಧ್ಯಕ್ಷತೆ ವಹಿಸಲಿದ್ದಾರೆ. ಸಂಸದ ಸಾಗರ್ ಖಂಡ್ರೆ, ಮಾಜಿ ಶಾಸಕ ಅಶೋಕ್ ಖೇಣಿ, ಜಿಲ್ಲಾ ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಅಮೃತರಾವ್ ಚಿಮಕೋಡೆ, ಕಾಂಗ್ರೆಸ್ ಬೀದರ್ ದಕ್ಷಿಣ ಘಟಕದ ಅಧ್ಯಕ್ಷ ಚಂದ್ರಶೇಖರ ಚನಶೆಟ್ಟಿ, ನಿರ್ಮಾಪಕ ಬಿ.ಜೆ. ವಿಷ್ಣುಕಾಂತ ಹಾಗೂ ಇತರ ಗಣ್ಯರು ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ ಎಂದು ಹೇಳಿದ್ದಾರೆ.

ಈವರೆಗಿನ ಸಮ್ಮೇಳನಾಧ್ಯಕ್ಷರು

ಈವರೆಗೆ ನಡೆದ ಏಳು ಬೀದರ್ ತಾಲ್ಲೂಕು ಕನ್ನಡ ಸಾಹಿತ್ಯ ಸಮ್ಮೇಳನಗಳ ಸರ್ವಾಧ್ಯಕ್ಷರ ಹೆಸರು ಹೀಗಿವೆ.

ಎಸ್.ಎಂ. ಜನವಾಡಕರ್, ಎಂ.ಜಿ. ದೇಶಪಾಂಡೆ, ರಮೇಶ ಬಿರಾದಾರ, ಸಾಧನಾ ರಂಜೋಳಕರ್, ಹಣಮಂತಪ್ಪ ವಲ್ಲೇಪುರೆ, ರಮೇಶ ಮೂಲಗೆ, ಓಂಪ್ರಕಾಶ ದಡ್ಡೆ.

# ಮಲ್ಟಿಪ್ಲೆಕ್ಸ್ ಚಿತ್ರಮಂದಿರಗಳಲ್ಲಿ ಏಕ ರೂಪದ ದರ ನಿಗದಿಗೆ ಕ್ರಮ:ಗೃಹ ಸಚಿವ ಡಾ. ಜಿ. ಪರಮೇಶ್ವರ



ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು, ಮಾ. 06 :ರಾಜ್ಯದಲ್ಲಿರುವ ಮಲ್ಟಿಪ್ಲೆಕ್ಸ್ ಚಿತ್ರ ಮಂದಿರಗಳಲ್ಲಿ ಏಕ ರೂಪದ ದರವನ್ನು ಅದಷ್ಟು ಶೀಘ್ರವಾಗಿ ಜಾರಿ ಮಾಡಲು ಕ್ರಮ ವಹಿಸಲಾಗುವುದು ಎಂದು ಗೃಹ ಸಚಿವ ಡಾ. ಜಿ. ಪರಮೇಶ್ವರ ಅವರು ಭರವಸೆ ನೀಡಿದರು. ಇಂದು ವಿಧಾನ ಪರಿಷತ್ತಿನ ಪ್ರಶ್ನೋತ್ತರ ಕಲಾಪದ ವೇಳೆ ವಿಧಾನ ಪರಿಷತ್ ಸದಸ್ಯ ಗೋವಿಂದರಾಜ್ ಅವರ ಚುಕ್ಕೆ ಗುರುತಿನ ಪ್ರಶ್ನೆಗೆ ಉತ್ತರಿಸಿದ ಮಾನ್ಯ ಸಚಿವರು, 2017–18ನೇ ಸಾಲಿನ ಆಯವ್ಯಯದಲ್ಲಿ ಎಲ್ಲಾ ಚಿತ್ರಮಂದಿರಗಳನ್ನು ಏಕ ರೂಪದ ದರ ಜಾರಿ ಮಾಡಲು ಘೋಷಣೆ ಮಾಡಲಾಗಿತ್ತು.ಆಯವ್ಯಯದ ಘೋಷಣೆಯಂತೆ 2018, ಮೇ 11ರಂದು ಸರ್ಕಾರದ ಆದೇಶವೂ ಸಹ ಆಗಿತ್ತು. ಆದರೆ ಆ ಸರ್ಕಾರಿ ಆದೇಶಕ್ಕೆ ತಡೆಯಾಜ್ಞೆ ತಂದ ನಿಟ್ಟಿನಲ್ಲಿ ಆದೇಶವನ್ನು ವಾಪಸ್ಸು ತೆಗೆದುಕೊಳ್ಳಲಾಯಿತು. ಚಿತ್ರಮಂದಿರಗಳ ಟಿಕೇಟ್ ದರಗಳನ್ನು ಚಿತ್ರಮಂದಿರಗಳ ಮಾಲೀಕರೇ ನಿರ್ಧಾರ ಮಾಡುವ ಪದ್ಧತಿ ಜಾರಿಯಲ್ಲಿದೆ. ಮಲ್ಟಿಪ್ಲೆಕ್ಸ್ ಚಿತ್ರಮಂದಿಗಳ ಮಾಲಿಕರು ಚಿತ್ರಮಂದಿಗಳನ್ನು ವಾಣಿಜ್ಯ ಚಟುವಟಿಕೆಗಳಾಗಿ ರೂಪಿಸಿಕೊಂಡಿದ್ದಾರೆ. ಆವಶ್ಯವೆನಿಸಿದಲ್ಲಿ ದರ ನಿಗದಿ ಮಾಡುವ ಅಧಿಕಾರ ಸರ್ಕಾರಕ್ಕೆ ಇದೆ. ಈ ಸಂಬಂಧ ಕೂಡಲೇ ಅಗತ್ಯ ನಿಯಮಗಳನ್ನು ರೂಪಿಸಿ ಎಲ್ಲಾ ಚಿತ್ರಮಂದಿರಗಳಲ್ಲಿ ಏಕರೂಪದ ದರ ಜಾರಿ ಮಾಡಲು ಆದಷ್ಟು ಬೇಗ ಕ್ರಮ ವಹಿಸಿ ಜಾರಿಗೊಳಿಸಲಾಗುವುದು ಎಂದು ಭರವಸೆ ನೀಡಿದರು

# ಮಾತಾ ಮಾಣಿಕೇಶ್ವರಿ ದೇವಸ್ಥಾನ ಪ್ರವಾಸಿ ತಾಣವಾಗಿ ಮಾಡಲು ಅಗತ್ಯ ಕ್ರಮ: ಸಚಿವ ಎಚ್.ಕೆ.ಪಾಟೀಲ್



ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು, ಮಾ.06 :ಗ್ರಾಂರ್ವಿಂಟಕ್ಲಿನ್ ಯಾಣಗುಂದಿಯಲ್ಲಿರುವ ಮಾತಾ ಮಾಣಿಕೇಶ್ವರಿ ದೇವಸ್ಥಾನವನ್ನು ಪ್ರವಾಸಿ ತಾಣವಾಗಿ ಅಭಿವೃದ್ಧಿ ಪಡಿಸಲು ಸರ್ಕಾರದಿಂದ ಅಗತ್ಯ ಕ್ರಮ ವಹಿಸಲಾಗುವುದು ಎಂದು ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಇಲಾಖೆಯ ಸಚಿವರಾದ ಎಚ್. ಕೆ. ಪಾಟೀಲ್ ತಿಳಿಸಿದರು.

ಇಂದು ವಿಧಾನ ಪರಿಷತ್ತಿನ ಪ್ರಶ್ನೋತ್ತರ ಕಲಾಪದ ವೇಳೆ ಪರಿಷತ್ ಸದಸ್ಯ ತಿಪ್ಪಣ್ಣಪ್ಪ ಕಮಕನೂರ ಅವರ ಚುಕ್ಕೆ ಗುರುತಿನ ಪ್ರಶ್ನೆಗೆ ಉತ್ತರಿಸಿದ ಸಚಿವರು ಇದು ಗುಡಿ ಅಲ್ಲ, ಮಠ ಅಲ್ಲ, ದೇವಸ್ಥಾನವಲ್ಲ ಇದೊಂದು ಸುಂದರವಾದ ಸ್ಥಳ. ಓರ್ವ ಯೋಗಿನಿ ಅನ್ನ ನೀರು ಇಲ್ಲದೆ ಸುಮಾರು 40 ವರ್ಷಗಳ ಕಾಲ ಬದುಕಿದ್ದಾರೆ. ಅವರೇ ಮಾತಾ ಮಾಣೀಕೇಶ್ವರಿ. ಒಂದೇ ದಿನ ಯಾಣಗುಂದಿಯಲ್ಲೇ ಇದ್ದು, ಶೀಶೈಲ ಯಾಣಗುಂದಿಯಲ್ಲಿ ಇವರ ದರ್ಶನ ನೀಡುತ್ತಿದ್ದ ಮಾತೆ. ಶಕ್ತಿಸ್ವರೂಪಿಣಿ. ಇವರು ದೈವಾಧೀನರಾಗಿ ಎರಡು ಮೂರು ವರ್ಷಗಳಾಗಿವೆ. ಇಂತಹ ಮಹತ್ವದ ದೇವಸ್ಥಾನ ಇನ್ನೂ ನಿರೀಕ್ಷೆಗೆ ತಕ್ಕಂತೆ ಅಭಿವೃದ್ಧಿ ಆಗಿಲ್ಲ. ಇದಕ್ಕೆ ವಿಶೇಷ ಒತ್ತು ನೀಡಿ ಮುಂದಿನ ದಿನಗಳಲ್ಲಿ ಈ ಸ್ಥಳವನ್ನು ಪ್ರವಾಸಿ ತಾಣವಾಗಿ ರೂಪಿಸಲು ಎಲ್ಲಾ ರೀತಿಯ ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗುವುದು ಅಲ್ಲದೆ ಸರ್ಕಾರದಿಂದ ಸೂಕ್ತ ಹಣಕಾಸಿನ ನೆರವನ್ನು ಸಹ ಒದಗಿಸಲಾಗುವುದು ಎಂದು ತಿಳಿಸಿದರು.


# ಧರ್ಮಸ್ಥಳ ವಾತ್ಸಲ್ಯ ಮನೆ:ಸಂಸದ ಸಾಗರ ಖಂಡ್ರೆಯವರಿಂದ ಹಸ್ತಾಂತರ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಮಾ.6: ತಾಲೂಕಿನ ಮಾಶಾಸನಫಲಾನುಭವಿಯಾದ ಕಲಾವತಿ ಅವರಿಗೆ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಜ್ಞಾನ ವಿಕಾಸ ಕಾರ್ಯಕ್ರಮದಡಿಯಲ್ಲಿ ನೂತನ ವಾತ್ಸಲ್ಯ ಮನೆ ಕಟ್ಟಿದು, ಈ ನೂತನ ಮನೆ ಹಸ್ತಾಂತರ ಕಾರ್ಯಕ್ರಮವನ್ನು ಬೀದರ ಜಿಲ್ಲಾ ಸಂಸದ ಸಾಗರ ಖಂಡ್ರೆ ಅವರು ವಾತ್ಸಲ್ಯ ಮನೆ ಹಸ್ತಾಂತರಿಸಿ ಮಾತನಾಡಿದ ಅವರು ಸಮಾಜ ಬದಲಾವಣೆ ಆಗಬೇಕಾದರೆ ಬದುಕಿಗೆ ಮೂಲಭೂತ ಸೌಕರ್ಯಗಳಲ್ಲಿ ಒಂದಾದ ಮನೆಯು ಪ್ರಮುಖವಾಗಿದ್ದು ಜೀವನ ನಡೆಸಲು ಅಗತ್ಯವಾಗಿದೆ. ಪೂಜ್ಯರು ಬಡವರಿಗೆ ವಾತ್ಸಲ್ಯ ಮನೆ ರಚನೆ ಹಾಗೂ ಮುಂತಾದ ಸಮಾಜಮುಖಿ ಕಾರ್ಯಕ್ರಮಗಳನ್ನು ಮಾಡುವುದರ ಮೂಲಕ ಜನಕಲ್ಯಾಣ ಕಾರ್ಯ ಮಾಡುತ್ತಿದ್ದಾರೆ, ಇಂತಹ ಕಾರ್ಯಕ್ರಮಗಳ ಅನುಷ್ಠಾನಕ್ಕೆ ತಮ್ಮವತಿಯಿಂದ ಸರಕಾರದ ಸೌಲಭ್ಯಗಳು ಬೇಕಾದಲ್ಲಿ ಸಂಪೂರ್ಣ ಸಹಕಾರವನ್ನು ನೀಡುವುದಾಗಿ ಆಶ್ವಾಸನೆ ನೀಡದರು ಹಾಗೂ ಗ್ರಾಮೀಣ ಭಾಗದ ನಿರ್ಗತಿ–ಕರ ಜೀವನದಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ವಾತ್ಸಲ್ಯ ಮನೆ ಎಂದು ನಾಮಕರಣ ಮಾಡಿ ನಿರ್ಮಿಸಿ ಕೊಟ್ಟು ಬಡವರ ಬಾಳಲ್ಲಿ ಬೆಳಕಾಗಿದೆ ಎಂದು ನುಡಿದರು.ಈ ಕಾರ್ಯಕ್ರಮದಲ್ಲಿ ಜಿಲ್ಲಾ ನಿರ್ದೇಶಕರಾದ ಪ್ರವೀಣಕುಮಾರ, ನಿರ್ಗತಿಕ ಬಡ ಕುಟುಂಬಗಳಿಗೆ ಮನೆ ನಿರ್ಮಿಸಿಕೊಡುವುದರ ಮೂಲಕ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ನೆರವಾಗಿದೆ. ಇಳಿ ವಯಸ್ಸಿನಲ್ಲಿ ಕುಟುಂಬಕ್ಕೆ ನೆಮ್ಮದಿಗೆ ಬೇಕಾದ ಸೂರನ್ನು ನಿರ್ಮಿಸುವುದು ಅಗತ್ಯವಾಗಿದ್ದು ಯೋಜನೆಯು ಈ ಮಹತಕಾರ್ಯಗಳನ್ನು ರಾಜ್ಯ ವ್ಯಾಪ್ತಿಯಲ್ಲಿ ಮಾಡುತ್ತಿದೆವೆ ಎಂದರು. ಕಾರ್ಯಕ್ರಮದಲ್ಲಿ, ಪುರಸಭೆ ಅಧ್ಯಕ್ಷೆ ಶಶಿಕಲಾ ಅಶೋಕ ಸಿಂಧನಕೇರೆ, ಪುರಸಭೆ ಉಪಾಧ್ಯಕ್ಷ ವಿಜಯಕುಮಾರ ರಾಜಭವನ, ಜನ ಜಾಗೃತಿ ಜಿಲ್ಲಾ ಮಾಧ್ಯಮ ಸಲಹೆಗಾರ ಸಂತೊಷಬಿ,ಜಿ ಪಾಟೀಲ, ಜನ ಜಾಗೃತಿ ಸದಸ್ಯರಾದ ಶಿವರಾಜ ಮಲ್ಲೇಶಿ, ದೀಪಕ ಥಮಕೆ ಮತ್ತು ತಾಲೂಕು ಯೋಜನಾಧಿಕಾರಿಗಳು ಸಂತೋಷ ಟಿ ಎನ್ ಮೇಲ್ವಿಚಾರಕರು, ಮತ್ತು ಜ್ಞಾನವಿಕಾಸ ಸಮನ್ವಯಧಿಕಾರಿಗಳು ಸೇವಾಪ್ರತಿನಿಧಿಗಳು ಸೇರಿದಂತೆ ಸ್ವಸಹಾಯ ಸಂಘದ ಸದಸ್ಯರು ಉಪಸ್ಥಿತರಿದ್ದರು.

# ವಿದ್ಯಾರ್ಥಿನಿ ಬದಲಿಗೆ ಪರೀಕ್ಷೆ ಬರೆದವಳ ಬಂಧನ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ:ಮಾ.6: ಜಿಲ್ಲೆಯ ಮಿಲಿಂದ್ ಕಾಲೇಜಿನಲ್ಲಿ ಪಿಯು ವಿದ್ಯಾರ್ಥಿನಿ ಬದಲಿಗೆ ಪರೀಕ್ಷೆ ಬರೆದ ಕಾಂಗ್ರೆಸ್ ಕಾರ್ಯಕರ್ತೆ ಬಂಧನಕ್ಕೆ ಒಳಗಾಗಿರುವ ಘಟನೆ ನಡೆದಿದೆ.ರಾಜ್ಯದಲ್ಲಿ ದ್ವಿತೀಯ ಪಿಯು ಪರೀಕ್ಷೆ ನಡೆಯುತ್ತಿದ್ದು, ಮಾ.5ರಂದು ರಾಜ್ಯಶಾಸ್ತ್ರ ಪರೀಕ್ಷೆ ನಡೆದಿತ್ತು. ಈ ವೇಳೆ ಕಲಬುರಗಿ ನಗರದ ಖರ್ಗೆ ಕುಟುಂಬದ ಒಡೆತನದ ಮಿಲಿಂದ್ ಕಾಲೇಜ್‌ನಲ್ಲಿ ಅಕ್ರಮ ನಡೆದಿದೆ. ಅರ್ಚನಾ ಎಂಬ ವಿದ್ಯಾರ್ಥಿನಿ ಬದಲಿಗೆ ಕಾನೂನು ವಿದ್ಯಾರ್ಥಿನಿಯೂ ಆಗಿರುವ ಕಾಂಗ್ರೆಸ್ ಕಾರ್ಯಕರ್ತೆ ಸಂಪೂರ್ಣಾ ಪಾಟೀಲ್ ಪರೀ–ಕ್ಷೆ ಬರೆದಿದ್ದಾರೆ.ದಲಿತ ಸೇನೆ ಕಾರ್ಯಕರ್ತರು ಕಾಲೇಜಿಗೆ ತೆರಳಿ ಅಕ್ರಮವನ್ನು ಪ್ರಶ್ನಿಸಿದಾಗ ಬದಲಿ ಅಭ್ಯರ್ಥಿ ಪರೀಕ್ಷೆ ಬರೆದಿರುವುದು ಬೆಳಕಿಗೆ ಬಂದಿದೆ. ಸದ್ಯ ಮಿಲಿಂದ್ ಶಾಲೆಯ ಪ್ರಾಂಶುಪಾಲರು ಬ್ರಹ್ಮಪೂರ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದು, ಪೊಲೀಸರು ಸಂಪೂರ್ಣ ಪಾಟೀಲ್‌ಳನ್ನು ಬಂಧಿಸಿದ್ದಾರೆ.

# 9 ತಿಂಗಳಿನಿಂದ ಹಿಡಿದು 4 ವರ್ಷದೊಳಗಿನ ಎಲ್ಲಾ ಮಕ್ಕಳಿಗೆ ಹೆಲ್ಮೆಟ್ ಕಡ್ಡಾಯ

ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಮಾ.6:ದ್ವಿಚಕ್ರ ವಾಹನ ಸವಾರರು ತಮ್ಮ ವಾಹನದಲ್ಲಿ ಅಥವಾ ತಮ್ಮ ಜೊತೆಯಲ್ಲಿ 9 ತಿಂಗಳಿನಿಂದ ಹಿಡಿದು 4 ವರ್ಷದೊಳಗಿನ ಎಲ್ಲಾ ಮಕ್ಕಳಿಗೆ ಹೆಲ್ಮೆಟ್ ಕಡ್ಡಾಯ ಹಾಕಬೇಕು ಎಂದು ಕಮಲನಗರ ಪೊಲೀಸ್ ಠಾಣಾ ಪಿ.ಎಸ್.ಐ ಚಂದ್ರಶೇಖರ ನಿರ್ಣೆ ಅವರು ಮಾಹಿತಿ ನೀಡಿದರು.

ಪಟ್ಟಣದ ಡಾ. ಬಿ ಆರ್ ಅಂಬೇಡ್ಕರ್ ವಸತಿ ಶಾಲೆ ಕಮಲನಗರ್ ಶಾಲೆಯಲ್ಲಿ ಗುರುವಾರ ಆಯೋಜಿಸಿದ ರಸ್ತೆ ಸುರಕ್ಷಾ ಸಪ್ತ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಉಚ್ಚ ನ್ಯಾಯಾಲಯ ಬೆಂಗಳೂರು ರವರು ರಿಟ್ ಅರ್ಜಿ ಸಂಖ್ಯೆ:27135/2023(ಪಿಐಎಲ್) ಗೆ ಸಂಬಂಧಿಸಿದಂತೆ, ದ್ವಿಚಕ್ರ ವಾಹನ ಸವಾರರು ತಮ್ಮ ವಾಹನದಲ್ಲಿ ಅಥವಾ ತಮ್ಮ ಜೊತೆಯಲ್ಲಿ 9 ತಿಂಗಳಿನಿಂದ ಹಿಡಿದು 4 ವರ್ಷದೊಳಗಿನ ಎಲ್ಲಾ ಮಕ್ಕಳನ್ನು ಕಡ್ಡಾಯವಾಗಿ ಪಾಲಿಸಬೇಕು, ಇದ್ದರಿಂದ ಅಪಘಾತ ಸಂದರ್ಭದಲ್ಲಿ ಚಿಕ್ಕ ಮಕ್ಕಳಿಗೆ ಪ್ರಾಣ ಅಪಾಯದಿಂದ ರಕ್ಷಣೆ ನೀಡಬಹುದು ಎಂದು ಹೇಳಿದರು.

ನಂತರ ಸಿ.ಪಿ.ಐ ಅಮರಪ್ಪ ಶಿವಬಲ ಮಾರ್ಗದರ್ಶನದಲ್ಲಿ ರಸ್ತೆಯಲ್ಲಿ ಚಿಕ್ಕ ಮಕ್ಕಳಿಗೆ ಹೆಲ್ಮೆಟ್ ಹಾಕಿ ಜಾಗ್ರತಿ ಮೂಡಿಸಲಾಯಿತು.

ಈ ಸಂದರ್ಭದಲ್ಲಿ ಶಾಲೆ ಪ್ರಿನ್ಸಿಪಾಲ್ ರಾಜೇಂದ್ರ ನಿಟ್ಟೂರೆ ಶಿಕ್ಷಕರರಾದ ಸಂದೀಪ್, ದಯಾನಂದ್, ನಾಗರಾಜ್, ಸಾಯಿನಾಥ್, ಬಬಿತಾ, ಪ್ರಿಯಾಂಕ ಹಾಗೂ ಪೊಲೀಸ್ ಸಿಬ್ಬಂದಿ ಇದ್ದರು.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.